ಸಂಪುಟ: 21, ಸಂಚಿಕೆ: 91, ಪುಟಗಳು: 8, ಬುಧವಾರ, 10 ಜನವರಿ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...




### ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

### ಪಂಚಾಂಗ

(ಬುಧವಾರ 10, ಜನವರಿ -2024)

- ರಾಹುಕಾಲ 3:22 ರಿಂದ 4:48
- ಗುಳಿಕಕಾಲ 12:30 ರಿಂದ 1:56
- ಯಮಗಂಡ ಕಾಲ 9:34 ರಿಂದ 11:04
- ಚೌತಿ, ಜೇಷ್ಟ ನಕ್ಷತ್ರ
- ರಾಹುಕಾಲ: 12 : 27 PM 01 : 53 PM
- ಗುಳಿಕಕಾಲ: 11 : 01 AM 12 : 27 PM
- ಯಮಗಂಡಕಾಲ : 08 : 10 AM 09 : 36 AM

## ಸಂಕ್ಷಿಪ್ತ ಸುದ್ದಿ

### ರಾಮನ ಬಂಟ ಹನುಮನ ಜನ್ಮಸ್ಥಳದಿಂದ ಅಯೋಧ್ಯೆವರಗೆ ಸೈಕಲ್ ಸವಾರಿ



**ಕೊಪ್ಪಳ:** ಶತಕೋಟಿ ಜನರ ಕನಸಿನ ಪ್ರಭು ಶ್ರೀ ರಾಮಮಂದಿರ ಲೊಕಾರ್ಪಣೆಗೆ ದಿನ ಗಣನೆ ಶುರುವಾಗಿದೆ. ಪ್ರತಿ ಹಿಂದೂವು ರಾಮಮಂದಿರ ದರ್ಶನಕ್ಕೆ ಕಾತುರರಾಗಿದ್ದಾರೆ. ಆದರೆ ಇಲ್ಲೊಬ್ಬ ಯುವಕ ವಿಭಿನ್ನವಾಗಿ ಅಯೋಧ್ಯೆ ರಾಮಮಂದಿರ ದರ್ಶನಕ್ಕೆ ತೆರಳಿದ್ದಾನೆ. ಜನವರಿ 22 ರಂದು ಕನಸಿನ ರಾಮಮಂದಿರ ಲೋಕಾರ್ಪಣೆಯಾಗಲಿದೆ, ಈ ಒಂದು ಕ್ಷಣ ಕಣ್ತುಂಬಿಕೊಳ್ಳಲು ಶತಕೋಟಿ ಜನರು ಕಾತುರತೆಯಿಂದ ಕಾದಿದ್ದಾರೆ. ಇದೊಂದು ಐತಿಹಾಸಿಕ ಕ್ಷಣ, ಇಡಿ ದೇಶವೇ ಅಂದು ಹಬ್ಬ ಆಚರಣೆ ಮಾಡಲಿದೆ. ಅಯೋದ್ಯೆಯಲ್ಲಂತೂ ಪ್ರಭು ಶ್ರೀರಾಮನ ಪಟ್ಟಾಭಿಷೇಕ ಮತ್ತೊಮ್ಮೆ ಪುಟ 2

### ಸಿಎಂಗೆ ಸಾಹು ಮಹಾರಾಜ್ ಕಾಲದ ಕಥೆ ಹೇಳಿ ಒಳ ಮೀಸಲಾತಿ ಜಾರಿಗೆ ಆಗ್ರಹ

# ಕಾಂಗ್ರೆಸ್‌ನಲ್ಲಿ ಪರ-ವಿರೋಧ



**ಚಿತ್ರದುರ್ಗ:** ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ತಂತ್ರ-ರಣತಂತ್ರ ಶುರುವಾಗಿದೆ. ಅಭ್ಯರ್ಥಿ ಆಯ್ಕೆ ಬೆಳವಣಿಗೆ ಸೇರಿದಂತೆ ಕೆಲ ವಿಚಾರದ ಚರ್ಚೆ ಹಿನ್ನಲೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಜೊತೆಗೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ನಿನ್ನೆ ಮಹತ್ವದ ಸಭೆಯನ್ನು ನಡೆಸಿದ್ದರು. ಸದ್ಯ ಸಭೆಯಲ್ಲಿ ಒಳ ಮೀಸಲಾತಿ ಪ್ರಸ್ತಾವನೆ ಬಗ್ಗೆ ಚರ್ಚೆ ನಡೆದಿದೆ. ಒಳ ಮೀಸಲಾತಿ ಜಾರಿಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಸಾಧ್ಯತೆ ಇದೆ.

ಸಚಿವ ಶಿವರಾಜ ತಂಗಡಗಿ, ಪ್ರಿಯಾಂಕ್ ಖರ್ಗೆ, MLC ಪ್ರಕಾಶ್ ರಾಠೋಡ್ ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ. ಸಚಿವ ಕೆ ಹೆಚ್ ಮುನಿಯಪ್ಪ, ಆರ್.ಬಿ.ತಿಮ್ಮಾಪುರ, ಮಾಜಿ ಸಚಿವ ಹೆಚ್.ಆಂಜನೇಯ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿದ್ದಾರೆ. ಚುನಾವಣೆ ಪೂರ್ವ ಒಳ ಮೀಸಲಾತಿ ಜಾರಿ ಭರವಸೆ ನೀಡಿದ್ದೇವೆ. ಒಳ ಮೀಸಲಾತಿ ಜಾರಿ ಬಗ್ಗೆ ನಿರ್ಧರಿಸಿ ಎಂದು ಡಾ.ಜಿ.ಪರಮೇಶ್ವರ್ ಅವರು ಮನವಿ ಮಾಡಿದ್ದಾರೆ. ಒಳ ಮೀಸಲಾತಿ ಜಾರಿ ಮಾಡದಿದ್ದರೆ ರಾಜೀನಾಮೆ ಚಿಂತನೆ ಎಂದು ಸಚಿವ ಕೆ.ಹೆಚ್ ಮುನಿಯಪ್ಪ ಎಚ್ಚರಿಕೆ ನೀಡಿದ್ದಾರೆ.

**ನ್ಯಾಯಕ್ಕಾಗಿ ಸಿಎಂಗೆ ಆಂಜನೇಯ ಮನವಿ:** ಅನೇಕ ವರ್ಷಗಳಿಂದ ಮಾದಿಗ ಸಮುದಾಯಕ್ಕೆ ಅನ್ಯಾಯ ಆಗುತ್ತಿದೆ. ಅಂಕಿ ಅಂಶ ಗಮನಿಸಿದರೆ ಮಾದಿಗ ಸಮುದಾಯಕ್ಕಾದ ಅನ್ಯಾಯ ತಿಳಿಯುತ್ತದೆ. ಒಳ ಮೀಸಲಾತಿ ಮೂಲಕ ನ್ಯಾಯ ಕೊಡಿಸಬೇಕು. ನಮ್ಮ ರಾಮ ನೀವು. ನಿಮ್ಮಿಂದ ನ್ಯಾಯ ಸಿಗಬೇಕೆಂದು ಸಿಎಂ ಸಿದ್ದರಾಮಯ್ಯರಿಗೆ ಮಾಜಿ ಸಚಿವ ಆಂಜನೇಯ ಮನವಿ ಮಾಡಿದ್ದಾರೆ. ಇನ್ನು ಇದೇ ವೇಳೆ ಸಿಎಂ ಎದುರು ಸಾಹು ಮಹಾರಾಜ್ ಕಾಲದ ಮೀಸಲಾತಿ ಕಥೆ ಹೇಳಿ ಮಾಜಿ ಸಚಿವ ಹೆಚ್. ಆಂಜನೇಯ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿದ್ದಾರೆ.

ಸಾಹು ಮಹಾರಾಜ್ ಕುದುರೆ ಕಟ್ಟುವ ಜಾಗಕ್ಕೆ ಹೋಗಿರುತ್ತಾರೆ. ಕುದುರೆಗಳನ್ನು ನಾಲ್ಕು ಗುಂಪುಗಳಾಗಿ ವಿಂಗಡಿಸಿರುತ್ತಾರೆ. ಕುದುರೆ ನೋಡಿಕೊಳ್ಳುವವರನ್ನು ಕೇಳಿದಾಗ ಹೀಗೆ ಹೇಳುತ್ತಾರೆ, ಬಲಿಷ್ಠ ಕುದುರೆಗಳ ಗುಂಪು, ಕಡಿಮೆ ಶಕ್ತ ಕುದುರೆಗಳ ಗುಂಪು, ಕನಿಷ್ಠ ಶಕ್ತ ಕುದುರೆಗಳ ಗುಂಪು, ಬಲಹೀನ ಕುದುರೆಗಳ ಗುಂಪಾಗಿ ವಿಂಗಡಿಸಿದ್ದೇವೆ. ಎಲ್ಲಾ ಕುದುರೆ ಒಂದೇ ಕಡೆ ಕಟ್ಟಿದರೆ ಬಲಿಷ್ಠ ಕುದುರೆಗಳಿಗೆ ಮಾತ್ರ ಆಹಾರ ದಕ್ಕುತ್ತದೆ ಎಂದು ಹೇಳುತ್ತಾರೆ. ನಮ್ಮ ಮಾದಿಗ ಸಮುದಾಯದ ಸ್ಥಿತಿ ಬಲಿಷ್ಠರ ಜತೆ ಹೋರಾಡದಂತಿದೆ. ನಮ್ಮ ತಟ್ಟೆಯಲ್ಲಿರುವ ಆಹಾರವನ್ನು ಬಲಿಷ್ಠರು ಕಿತ್ತುಕೊಂಡಂತಾಗುತ್ತಿದೆ ಎಂದು ಆಂಜನೇಯ ಅವರು ಸಿಎಂಗೆ ವಿವರಿಸಿ ಒಳ ಮೀಸಲಾತಿಗೆ ಮನವಿ ಮಾಡಿದ್ದಾರೆ.

ಸದ್ಯ ಮುಂದಿನ ಸಂಪುಟ ಸಭೆಯಲ್ಲಿ ಒಳಮೀಸಲಾತಿ ಜಾರಿ ಶಿಫಾರಸ್ಸಿಗೆ ನಿರ್ಧಾರ ಮಾಡಲಾಗುತ್ತೆ ಎಂದು ಸಿಎಂ ಭರವಸೆ ನೀಡಿದ್ದಾರೆ. ಮಾದಿಗ ಸಮುದಾಯದ ಮತ ಬ್ಯಾಂಕ್ ಮೇಲೆ ಸಿಎಂ ಕಣ್ಣಿಟ್ಟಿದ್ದಾರೆ. ಛಲವಾದಿ, ಬಂಜಾರ, ಪುಟ 2

### ಇಂದಿನಿಂದ ದೇವಸ್ಥಾನಗಳಲ್ಲಿ ವಸ್ತ್ರಸಂಹಿತೆ ಜಾರಿ

# ತುಂಡು ಬಟ್ಟೆ ಧರಿಸಿಕೊಂಡು ಬಂದ್ರೆ ದೇವಾಲಯದೊಳಗೆ ನೋ ಎಂಟ್ರಿ



**ಬೆಂಗಳೂರು:** ಇಂದಿನಿಂದ ರಾಜಧಾನಿಯ ದೇವಾಲಯಗಳಲ್ಲಿ ಅಧಿಕೃತವಾಗಿ ವಸ್ತ್ರಸಂಹಿತೆ ಜಾರಿಯಾಗುತ್ತಿದೆ. ದೇವಸ್ಥಾನಗಳಲ್ಲಿ ವಸ್ತ್ರಸಂಹಿತೆ ಕುರಿತು ಕರ್ನಾಟಕ ದೇವಸ್ಥಾನ-ಮಠ, ಧಾರ್ಮಿಕ ಸಂಸ್ಥೆಗಳ ಮಹಾಸಂಘ ಇಂದಿನಿಂದ ಅಭಿಯಾನ ನಡೆಸಲಿದೆ. ಇಂದು (ಜ.10) ಮಧ್ಯಾಹ್ನ 12 ಗಂಟೆಗೆ ವಸಂತನಗರದ ಶ್ರೀಲಕ್ಷ್ಮಿ ವೆಂಕಟರಮಣ ದೇವಾಲಯದಲ್ಲಿ ವಸ್ತ್ರ ಸಂಹಿತೆ ಬೋರ್ಡ್ ಹಾಕುವ ಅಭಿಯಾನಕ್ಕೆ ಚಾಲನೆ ದೊರೆಯಲಿದೆ. ದೇಗುಲಗಳಿಗೆ ಅರೆಬರೆ ಬಟ್ಟೆ ಧರಿಸಿ ಬರುವವರಿಗೆ ಪ್ರವೇಶ ನಿರಾಕರಿಸಲಾಗುತ್ತದೆ.

ಭಾರತೀಯ ಉಡುಪು ಧರಿಸಿ ಬರುವವರಿಗೆ ಮಾತ್ರ ದೇವರ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ. ಅರೆಬರೆ ಬಟ್ಟೆ ಧರಿಸಿ ಬರುವವರಿಗೆ ದರ್ಶನಕ್ಕೆ ಅವಕಾಶ ನೀಡುವುದಿಲ್ಲವೆಂದು ಕರ್ನಾಟಕ ದೇವಸ್ಥಾನ ಮಹಾಸಂಘ ದೇಗುಲಗಳ ಮುಂದೆ ಬೋರ್ಡ್ ಹಾಕಲಿದೆ. ಪುಟ 2



# 224 ಕ್ಷೇತ್ರಗಳಲ್ಲೂ ಸಿಎಂ, ಡಿಸಿಎಂ ಘೋಷಿಸಿ

**ನವದೆಹಲಿ:** ಸಂವಿಧಾನದ ತಿದ್ದುಪಡಿ ಮಾಡಿ 224 ಕ್ಷೇತ್ರಗಳಲ್ಲೂ ಶಾಸಕರನ್ನೂ ಸಿಎಂ ಮತ್ತು ಡಿಸಿಎಂ ಮಾಡಿ ಬಿಡಿ ಎಂದು ಮಾಜಿ ಡಿಸಿಎಂ ಕೆ.ಎಸ್ ಈಶ್ವರಪ್ಪ ಕಾಂಗ್ರೆಸ್ ನಾಯಕರಿಗೆ ವ್ಯಂಗ್ಯ ಮಾಡಿದ್ದಾರೆ.



ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಹೆಚ್ಚುವರಿ ಡಿಸಿಎಂ ನೇಮಕ ವಿಚಾರವಾಗಿ ದೆಹಲಿಯಲ್ಲಿ ಮಾತನಾಡಿದ ಅವರು, ಲೋಕಸಭೆ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರ ಇರುವುದಿಲ್ಲ ಎಂದು ಭವಿಷ್ಯ ನುಡಿದಿದ್ದಾರೆ. ಕಾಂಗ್ರೆಸ್ ನವರು ಬಹಳ ದಿನಗಳಿಂದ ಮದುವೆ ಮಾಡಿಕೊಳ್ಳಬೇಕು ಎಂದು ಯೋಚನೆ ಮಾಡುತ್ತಿದ್ದರು. ಆದರೆ ನಿರೀಕ್ಷೆಗೂ ಮೀರಿ ಅವರ ಮದುವೆ ಆಯಿತು. ಭಾರಿ ಬಹುಮತದೊಂದಿಗೆ ಅಧಿಕಾರ ಬಂತು. ಅಂದಿನಿಂದಲೇ ಸಿಎಂ, ಡಿಸಿಎಂ ವಿಚಾರದಲ್ಲಿ ಗೊಂದಲ ಸೃಷ್ಟಿಯಾಯಿತು. ಸಿಎಂ ಆಯ್ಕೆ ವೇಳೆ ಶಿವಕುಮಾರ್ ದೆಹಲಿಗೆ ಹೋಗಲಿಲ್ಲ. ಎರಡು ದಿನದ ಬಳಿಕ ದೆಹಲಿಗೆ ಹೋಗಿ ಖರ್ಗೆ ಸಿಎಂ ಆಗಲಿ ಎಂದರು. ಡಿ.ಕೆ ಶಿವಕುಮಾರ್‌ಗೆ ಏಕಾಏಕಿ ದಲಿತರ ಮೇಲೆ ಪ್ರೀತಿ ಬಂತು. ಖರ್ಗೆಯವರು ಬೇಕಾದರೆ ಸಿಎಂ ಆಗಲಿ ಎಂದರು. ಮೊನ್ನೆ ಪ್ರಧಾನಿ ಅಭ್ಯರ್ಥಿ ವಿಚಾರಕ್ಕೆ ಬಂದಾಗ ರಾಹುಲ್ ಗಾಂಧಿ ಹೆಸರು ಡಿಕೆ ಶಿವಕುಮಾರ್ ಉಲ್ಲೇಖಿಸಿದರು. ಯಾಕೆ ಖರ್ಗೆ ಹೆಸರು ಶಿವಕುಮಾರ್ ಹೇಳಲಿಲ್ಲ? ಬರೀ ತೋರಿಕೆಗಾಗಿ ದಲಿತರ ಮೇಲೆ ಪ್ರೀತಿ ತೋರುವ ಕೆಲಸ ಮಾಡುತ್ತಿದ್ದಾರೆ. ರಾಮಮಂದಿರ, ದಲಿತರ ವಿಚಾರ ಹೀಗೆ ಎಲ್ಲಾ ವಿಚಾರದಲ್ಲಿ ರಾಜಕೀಯ ಮಾಡುತ್ತಿದ್ದಾರೆ. ಮೂರು ಜನರು ಕಾಂಗ್ರೆಸ್ ನಾಯಕರಿದ್ದರೆ, ನಾಲ್ಕು ವಿಚಾರದಲ್ಲಿ ಜಗಳ ಮಾಡುತ್ತಾರೆ. ಹಿಜಬ್ ಕೇಸ್ ವಾಪಸ್ ಪಡೆಯಲು ಯಾರು ಮನವಿ ಮಾಡಿದರು? ಮುಸ್ಲಿಂರನ್ನು ನೋಡಿದ ತಕ್ಷಣ ಸಿಎಂ ಘೋಷಣೆ ಮಾಡಿದರು. ಹಿಂದೂಗಳು ಒಟ್ಟಾಗಿದ್ದಾರೆ. ಲೋಕಸಭೆ ಚುನಾವಣೆ ಅಥವಾ ಅದರ ಬಳಿಕ ರಾಜ್ಯದಲ್ಲಿ ಕಾಂಗ್ರೆಸ್ ಇರಲ್ಲ ಎಂದು ಹೇಳಿದರು.

ಜಾತಿ ಸಮೀಕ್ಷೆ ವಿಚಾರದಲ್ಲಿ ತಮ್ಮನ್ನು ತಾವು ಸಿದ್ದರಾಮಯ್ಯ ಹಿಂದುಳಿದ ನಾಯಕ ಎಂದು ಕರೆದುಕೊಂಡಿದ್ದಾರೆ. ಆದರೆ ಅವಕಾಶ ಸಿಕ್ಕಾಗ ಸಮೀಕ್ಷೆ ಬಿಡುಗಡೆ ಮಾಡುವ ಪ್ರಯತ್ನ ಮಾಡಲಿಲ್ಲ. ಈಗ ಮತ್ತೆ ಸಿಎಂ ಆಗಿದ್ದಾರೆ. ಕಳೆದ ನವೆಂಬರ್‌ನಲ್ಲಿ ಸಮೀಕ್ಷೆ ಬಿಡುಗಡೆ ಎಂದಿದ್ದರು. ನವೆಂಬರ್, ಡಿಸೆಂಬರ್ ಮುಗೀತು, ಇನ್ನೂ ಜಾರಿಯಾಗಿಲ್ಲ. ಮುಸ್ಲಿಂ ಹಾಗೂ ಹಿಂದುಳಿದ ಹೆಸರಿನಲ್ಲಿ ಸಿದ್ದರಾಮಯ್ಯ ರಾಜಕೀಯ ಮಾಡುತ್ತಿದ್ದಾರೆ ಅಷ್ಟೇ ಎಂದು ಕಿಡಿಕಾರಿದರು.

ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆಯಾಗುತ್ತಿದೆ. ಪ್ರತಿ ಹಿಂದೂ ಮನೆಗೂ ಮಂತ್ರಾಕ್ಷತೆ ಕೊಟ್ಟು ಅಯೋಧ್ಯೆಗೆ ಕರೆಯುತ್ತಿದ್ದೇವೆ. ಇದು ತುಂಬಾ ಸಂತೋಷದ ವಿಚಾರ. ರಾಮಲಿಂಗಾ ರೆಡ್ಡಿ ಅವರು ಮಂದಿರದ ಪರವಾಗಿದ್ದಾರೆ. ಆದರೆ ಡಿಸಿಎಂ ಸೇರಿ ಕೆಲವು ನಾಯಕರಿಗೆ ಕೆಟ್ಟ ಕಾಯಿಲೆ ಇದೆ. ಮಂತ್ರಾಕ್ಷತೆ ವಿಚಾರದಲ್ಲಿ ರಾಜಕೀಯ ಮಾಡುತ್ತಿದ್ದಾರೆ. ಮಂತ್ರಾಕ್ಷತೆ ಅಕ್ಕಿ ಅನ್ನಭಾಗ್ಯದ್ದಲ್ಲ. ರೈತ ಬೆಳೆದಿದ್ದು. ಡಿಸಿಎಂ ದೇಶದ ಜನರಲ್ಲಿ ಕ್ಷಮೆ ಕೇಳುವುದರ ಜೊತೆಗೆ ಮಂತ್ರಾಕ್ಷತೆ ಪಡೆದು ಅಯೋಧ್ಯೆಗೆ ಬರಬೇಕು ಎಂದು ಆಗ್ರಹಿಸಿದರು.

# ಮುಸ್ಲಿಮರ ಮನೆಯಲ್ಲಿ ಅಯ್ಯಪ್ಪಸ್ವಾಮಿ ಪೂಜೆ



**ಕೊಪ್ಪಳ:** ಜಿಲ್ಲೆಯ ಗಂಗಾವತಿ ಜಯನಗರದ ಪಿಂಜಾರ ಸಮುದಾಯದ ಜಿಲ್ಲಾಧ್ಯಕ್ಷ ಕಾಶಿಂಅಲಿ ಮುದ್ದಾಬಳ್ಳಿ ಅವರ ಮನೆಯಲ್ಲಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ವಿಶೇಷ ಪೂಜೆ ಸಲ್ಲಿಸುವ ಮೂಲಕ ಭಾವೈಕ್ಯತೆ ಸಂದೇಶ ಸಾರಿದ್ದಾರೆ.

ಪಿಂಜಾರ ಸಮುದಾಯದ ಜಿಲ್ಲಾಧ್ಯಕ್ಷ ಕಾಶಿಂಅಲಿ ಮುದ್ದಾ ಬಳ್ಳಿ ತಮ್ಮ ಸ್ವಗೃಹದಲ್ಲಿ ಅಯ್ಯಪ್ಪಸ್ವಾಮಿ ಮಾಲಾಧಾರಿಗಳು ಪೂಜೆ ನಡೆಸಲು ಎಲ್ಲ ರೀತಿಯ ಪೂಜಾ ಸಾಮಗ್ರಿಗಳ ನ್ನು ತರಿಸಿ ವ್ಯವಸ್ಥೆ ಕಲ್ಪಿಸಿ, ಸುತ್ತಮುತ್ತಲಿನ ಜನರಿಗೆ ಪೂಜೆ ಆಗಮಿಸುವಂತೆ ಮಾಹಿತಿ ನೀಡಿದ್ದರು. ಇದರನ್ವಯ ಅಯ್ಯಪ್ಪಸ್ವಾಮಿ ಮಾಲಾಧಾರಿಗಳು ಬೆಳಗ್ಗೆ ತಂಡದೊಂದಿಗೆ ಆಗಮಿಸಿ ವಿಶೇಷ ಪೂಜೆ ಸಲ್ಲಿಸಿ, ಅಯ್ಯಪ್ಪ ಸ್ವಾಮಿ ನಾಮಸ್ಮರಣೆ ಮಾಡಿದರು. ನಂತರ ಎಲ್ಲ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ಪ್ರಸಾದ ಸೇವಿಸಿದರು. ಕಾಶಿಂಅಲಿ ಮುದ್ದಾಬಳ್ಳಿ ಅವರು ಎಲ್ಲ ಅಯ್ಯಪ್ಪಸ್ವಾಮಿ ಮಾಲಾಧಾರಿಗಳನ್ನ ಸನ್ಮಾನಿಸಿ, ಬೀಳ್ಕೊಟ್ಟರು. ಈ ವೇಳೆ ಮಲಾಧಾರಿಗಳು, ಭಕ್ತರು, ಮುಸ್ಲಿಂ ಬಾಂಧವರು ಇದ್ದರು.

## ಪದೇ ಪದೇ ಟ್ರಾಫಿಕ್ ರೂಲ್ಸ್ ಬ್ರೇಕ್ ಮಾಡುವವರಿಗೆ

# ಡ್ರೈವಿಂಗ್ ಲೈಸೆನ್ಸ್ ಅಮಾನತಿಗೆ ಸೂಚನೆ

**ಬೆಂಗಳೂರು:** ಪದೇಪದೇ ಟ್ರಾಫಿಕ್ ರೂಲ್ಸ್ ಬ್ರೇಕ್ ಮಾಡುತ್ತಿರು ವಾಹನ ಸವಾರರ ಡ್ರೈವಿಂಗ್ ಲೈಸೆನ್ಸ್ ಅಮಾನತು ಮಾಡುವಂತೆ ಎಲ್ಲಾ ಟ್ರಾಫಿಕ್ ಪೊಲೀಸ್ ಇಲಾಖೆ ಜಿಲ್ಲಾ ಪೊಲೀಸರಿಗೆ ಸೂಚನೆ ನೀಡಿದ್ದಾರೆ. ಟ್ರಾಫಿಕ್ ನಿಯಮಗಳನ್ನು ಉಲ್ಲಂಘನೆ ಮಾಡದಂತೆ ಸಂಚಾರಿ ಪೊಲೀಸರು ವಾಹನ ಸವಾರರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ದಂಡ ವಿಧಿಸುವ ಕ್ರಮವನ್ನೂ ಕೈಗೊಳ್ಳುತ್ತಿದ್ದಾರೆ. ಹೀಗಿದ್ದರೂ ಒಂದಷ್ಟು ವಾಹನ ಸವಾರರು ಪದೇಪದೇ ಟ್ರಾಫಿಕ್ ರೂಲ್ಸ್ ಬ್ರೇಕ್ ಮಾಡುತ್ತಿರುವುದು ಕಂಡುಬಂದಿದೆ.

ಇಂತಹವರ ವಿರುದ್ಧ ಕ್ರಮಕ್ಕೆ ಮುಂದಾದ ಸಂಚಾರಿ ಪೊಲೀಸರು, ಡಿಎಲ್ ಅಮಾನತು ಮಾಡಲು ನಿರ್ಧರಿಸಿದ್ದಾರೆ. 2974 ಡ್ರೈವಿಂಗ್ ಲೈಸೆನ್ಸ್ ಅಮಾನತಿಗೆ ಸಂಚಾರಿ ಪೊಲೀಸರು ಬೇರೆಬೇರೆ ರಾಜ್ಯ ಮತ್ತು ರಾಜ್ಯದ ಜಿಲ್ಲಾ ಸಾರಿಗೆ ಕಚೇರಿಗೆ ಕಳುಹಿಸಲಾಗಿದ್ದು, ಈ ಪೈಕಿ 711 ಜನರ ಡ್ರೈವಿಂಗ್ ಲೈಸೆನ್ಸ್ ಅಮಾನತು ಮಾಡಲಾಗಿದೆ. ಉಳಿದ 2263 ಮಂದಿಯ ಡ್ರೈವಿಂಗ್ ಲೈಸೆನ್ಸ್ ಅಮಾನತ್ತುಗೊಳಿಸುವ ಪ್ರಕ್ರಿಯೆ ಚಾಲನೆಯಲ್ಲಿದೆ.

ಟ್ರಾಫಿಕ್ ನಿಯಮ ಉಲ್ಲಂಘಟನೆ ಮಾಡಿ ಸಂಚರಿಸುವುದರಿಂದ ಅಪಘಾತದಂತಹ ಅವಘಡಗಳು ಸಂಭವಿಸುತ್ತಿದ್ದು, ಅನೇಕರು ಸಾವನ್ನಪ್ಪಿದ್ದಾರೆ. ಇನ್ನೂ ಕೆಲವರಿಗೆ ಗಾಯಗಳಾಗಿ ಸಾವಿನ ದವಡೆಯಿಂದ ಪಾರಾಗಿದ್ದಾರೆ. ಹೀಗಾಗಿ ಟ್ರಾಫಿಕ್ ನಿಯಮ ಪಾಲಿಸುವಂತೆ



ಪೊಲೀಸರು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ.

ಟ್ರಾಫಿಕ್ ರೂಲ್ಸ್ ಬ್ರೇಕ್ ಮಾಡುತ್ತಿರುವವರಿಂದ ದಂಡ ವಸೂಲಿ ಕೂಡ ಮಾಡಲಾಗುತ್ತಿದೆ. ಬೆಂಗಳೂರು ನಗರದಲ್ಲಂತೂ ರೂಲ್ಸ್ ಬ್ರೇಕ್ ಪ್ರಕರಣಗಳು ಬಹಳಷ್ಟು ಆಗುತ್ತಿವೆ. ಇದೇ ಕಾರಣಕ್ಕೆ ಪೊಲೀಸರು ಮಾತ್ರವಲ್ಲದೆ, ಕೆಲವು ಕಾಲೇಜು ವಿದ್ಯಾರ್ಥಿಗಳು ಬೆಂಗಳೂರಿನ ಸಿಗ್ನಲ್‌ಗಳಲ್ಲಿ ಟ್ರಾಫಿಕ್ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದಾರೆ.

ಇತ್ತೀಚೆಗೆ ಸಾಮಾಜಿಕ ಕಾರ್ಯಕರ್ತರೊಬ್ಬರು ರಾಂಗ್ ರೂಟ್‌ನಲ್ಲಿ ಸಂಚರಿಸುತ್ತಿದ್ದ ವಾಹನಗಳನ್ನು ತಡೆದು ವಡೆ ಕೊಟ್ಟು "ನೀವು ರಾಂಗ್ ರೂಟ್‌ನಲ್ಲಿ ಬಂದರೆ ನಿಮ್ಮ ಮನೆಯವರು ತಿಥಿ ವಡೆ ತಿನ್ನಬೇಕಾಗುತ್ತದೆ" ಎಂದು ಹೇಳಿ ಟ್ರಾಫಿಕ್ ನಿಯಮ ಪಾಲಿಸುವಂತೆ ಮನವಿ ಮಾಡಿದ್ದರು.

## ಮೂರು ಡಿಸಿಎಂ ಸೃಷ್ಟಿ ವಿಚಾರ

# ಖರ್ಗೆ ಸ್ಪಷ್ಟನೆ



**ಕಲಬುರಗಿ:** ದಲಿತ ಮತಗಳನ್ನು ಭದ್ರಪಡಿಸಿಕೊಳ್ಳಲು ಲೋಕಸಭಾ ಚುನಾವಣೆಗೂ ಮುನ್ನ ಇನ್ನೂ ಮೂರು ಡಿಸಿಎಂ ಸ್ಥಾನ ಸೃಷ್ಟಿಸುವಂತೆ ಕಾಂಗ್ರೆಸ್ ಹೈಕಮಾಂಡ್ ಮೇಲೆ ಸಿದ್ದರಾಮಯ್ಯ ಆಪ್ತ ಬಣ ಒತ್ತಡ ಹೇರುತ್ತಿದೆ ಎಂಬ ಮಾತುಗಳು ರಾಜಕೀಯ ಪಡಸಾಲೆಯಲ್ಲಿ ಚರ್ಚೆಯಾಗುತ್ತಿದೆ. ಈ ವಿಚಾರವಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಮೂವರು ಡಿಸಿಎಂ ವಿಚಾರ ಹೈಕಮಾಂಡ್ ಮುಂದೆ ಇಲ್ಲ. ಈ ವಿಚಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನೇ ಕೇಳಿ ಎಂದಿದ್ದಾರೆ.

ಕಲಬುರಗಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಹೆಚ್ಚುವರಿ ಡಿಸಿಎಂ ವಿಚಾರವಾಗಿ ನಮ್ಮ ಮುಂದೆ ಪ್ರಸ್ತಾವನೆ ಇಲ್ಲ. ಹೆಚ್ಚುವರಿ ಡಿಸಿಎಂ ಊಹಾಪೋಹ. ಎಲೆಕ್ಷನ್ ಸಂದರ್ಭದಲ್ಲಿ ಇಂತಹ ವಿಚಾರ ಚರ್ಚೆಗೆ ಬರಬಾರದು. ಸದ್ಯಕ್ಕೆ ಸರ್ಕಾರ ನಡೆಸುವ ಕಡೆ, ಸಮಸ್ಯೆ ಕಡೆ ಗಮನ ಕೊಡಬೇಕು. ಗ್ಯಾರಂಟಿಗಳನ್ನು ಅನುಷ್ಠಾನಕ್ಕೆ ತರುವ ಕಡೆಗೆ ಗಮನ ಕೊಡಬೇಕು. ನಮ್ಮ ಗುರಿ ಮುಟ್ಟುವವರೆಗೆ ಇಂತಹದ್ದಕ್ಕೆ ಅವಕಾಶ ಕೊಡಬಾರದು ಎಂದು ಹೇಳಿದರು.

ಲೋಕಸಭೆ ಚುನಾವಣೆಗೆ ಕರ್ನಾಟಕದ ಅಭ್ಯರ್ಥಿಗಳ ಆಯ್ಕೆಗೆ ವಿಚಾರವಾಗಿ ಸಭೆ ನಡೆಯಲಿದೆ. ಯಾರನ್ನು ಕಣಕ್ಕಿಳಿಸಬೇಕು ಎಂದು ಸಭೆಯಲ್ಲಿ ಚರ್ಚೆ ಮಾಡುತ್ತೇವೆ. ಇಂಡಿಯಾ ಒಕ್ಕೂಟ ಒಟ್ಟಾಗಿ ಹೋಗುವ ನಿರ್ಣಯ ಕೈಗೊಂಡಿದ್ದೇವೆ. ಬುಧವಾರ ದೆಹಲಿಯಲ್ಲಿ ಅನೇಕ ಘಟಕಗಳ ಸಭೆ ಕೂಡ ಕರೆದಿದ್ದೇವೆ. ಈಗಾಗಲೇ ಎಲ್ಲಾ ಕ್ಷೇತ್ರಗಳಿಗೆ ವೀಕ್ಷಕರನ್ನು ನೇಮಕ ಮಾಡಿದ್ದೇವೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲವನ್ನೂ ವೈಯಕ್ತಿಕವಾಗಿ ತೆಗೆದುಕೊಳ್ಳುತ್ತಿದ್ದಾರೆ. ಅಂತರಾಷ್ಟ್ರೀಯ ಮಟ್ಟದಲ್ಲಿ ಮೊದಲು ನಾವು ನಮ್ಮ ಅಕ್ಕ-ಪಕ್ಕ ರಾಷ್ಟ್ರಗಳ ಜೊತೆಗೆ ಚೆನ್ನಾಗಿರಬೇಕು. ಕೆಟ್ಟ ಪರಿಸ್ಥಿತಿ ಬಂದಾಗ ನಾವು ಹೋರಾಟಕ್ಕೂ ಸಿದ್ದರಾಗಬೇಕಾಗುತ್ತದೆ. ಇಂದಿರಾಗಾಂಧಿ ಯಾವ ರೀತಿ ಪಾಕಿಸ್ತಾನವನ್ನು ಬೇರ್ಪಡಿಸಿ ಬಾಂಗ್ಲಾದೇಶ ನಿರ್ಮಾಣ ಮಾಡಿದರೋ ಅಂತಹ ಹೋರಾಟ ಮಾಡಬೇಕಾಗುತ್ತದೆ. ಅಂತರಾಷ್ಟ್ರೀಯ ಪಾಲಿಸಿ ವಿಚಾರದಲ್ಲಿ ಮೋದಿಯವರು ತಮ್ಮ ಮನಸ್ಸಿಗೆ ಬಂದಂತೆ ನಡೆದುಕೊಳ್ಳುತ್ತಿದ್ದಾರೆ ಎಂದು ವಾಗ್ದಾಳಿ ಮಾಡಿದರು.

ಯಾವಾಗ ಯಾರನ್ನು ಬೇಕಾದರೂ ತಬ್ಬಿಕೊಳ್ಳುತ್ತಾರೆ, ಯಾರನ್ನು ಬೇಕಾದರೂ ತೆಗಳುತ್ತಾರೆ. ನಾವು ನಮ್ಮ ಅಕ್ಕ-ಪಕ್ಕದವರನ್ನು ಬದಲಾಯಿಸಲಾಗುವುದಿಲ್ಲ. ಹಾಗಾಗಿ ಅವರೊಂದಿಗೆ ಚೆನ್ನಾಗಿರಬೇಕು. ನಾವು ಒಂದಾಗಿ ಹೋಗಬೇಕು. ಅವರು ನಮ್ಮ ಮೈಮೇಲೆ ಬಂದಾಗ ದೇಶಕ್ಕಾಗಿ ಹೋರಾಟಕ್ಕೂ ಸಿದ್ದರಾಗಬೇಕಾಗುತ್ತದೆ ಎಂದರು.

# 2 ಲಕ್ಷ ಸಾಲಲ್ಲ, 2 ಎಕರೆ ಜಮೀನು, ಮೃತರ ಪುತ್ಥಳಿ ನಿರ್ಮಿಸಿ

**ಚಿತ್ರದುರ್ಗ:** ನಟ ಯಶ್ ಅಭಿಮಾನಿಗಳ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಗ್ರಾಮಸ್ಥರು ಸರ್ಕಾರಕ್ಕೆ ಒತ್ತಾಯವೊಂದನ್ನು ಮಾಡಿದ್ದಾರೆ.



ಸರ್ಕಾರ ಘೋಷಿಸಿದ 2 ಲಕ್ಷ ರೂಪಾಯಿ ಪರಿಹಾರ ಸಾಕಾಗಲ್ಲ. ಹೀಗಾಗಿ ಮೂವರ ಕುಟುಂಬಕ್ಕೆ ಹೆಚ್ಚಿನ ಪರಿಹಾರ ಕೊಡುವಂತೆ ಲಕ್ಷ್ಮೇಶ್ವರ ಸೂರಣಗಿ ಗ್ರಾಮಸ್ಥರು ಆಗ್ರಹ ಮಾಡಿದ್ದಾರೆ.

ಇಷ್ಟು ಮಾತ್ರವಲ್ಲದೇ ಅಂಬೇಡ್ಕರ್ ಅಭಿವೃದ್ಧಿ ನಿಗಮದಡಿ 2 ಎಕರೆ ಜಮೀನು ನೀಡಬೇಕು. ಘಟನಾ ಸ್ಥಳದಲ್ಲಿ ಮೃತರ ಪುತ್ಥಳಿ ನಿರ್ಮಿಸಬೇಕು. ಮುಂದೆ ಇಂತಹ ಅವಘಡಗಳು ಸಂಭವಿಸಬಾರದು. ಅಲ್ಲದೆ ಈ ಮೂವರ ಪುತ್ಥಳಿ ಮುಂದಿನ ಯುವ ಪೀಳಿಗೆಗೆ ಮಾರ್ಗದರ್ಶನವಾಗಬೇಕು ಎಂದು ಸೂರಣಗಿ ಗ್ರಾಮಸ್ಥರು ಸರ್ಕಾರಕ್ಕೆ ಆಗ್ರಹ ಮಾಡಿದ್ದಾರೆ.

**ನಡೆದಿದ್ದೇನು..?:** ಲಕ್ಷ್ಮೇಶ್ವರದ ಸೂರಣಗಿ ಗ್ರಾಮದಲ್ಲಿ ಯಶ್ ಹುಟ್ಟುಹಬ್ಬ ಹಿನ್ನೆಲೆಯಲ್ಲಿ ಬೃಹತ್ ಗಾತ್ರದ ಕಟೌಟ್ ಕಟ್ಟಲು ಹೋಗಿ ವಿದ್ಯುತ್ ಸ್ಪರ್ಶದಿಂದ ಹನುಮಂತ ಹರಿಜನ್ (24), ಮುರಳಿ ನಡುವಿನಮನಿ (20) ಹಾಗೂ ನವೀನ್ ಗಾಜಿ (20) ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಮಂಜುನಾಥ್, ಪ್ರಕಾಶ್ ಹಾಗೂ ಹನುಮಂತ ಗಂಭೀರವಾಗಿ ಗಾಯಗೊಂಡಿದ್ದು ಅವರಿಗೆ ಚಿಕಿತ್ಸೆ ನೀಡಲಾಗುತ್ತಿದೆ.

ಮಧ್ಯರಾತ್ರಿ 1 ಗಂಟೆ ವೇಳೆ ಕಟೌಟ್ ಕಟ್ಟುವ ವೇಳೆ ಈ ದುರ್ಘಟನೆ ನಡೆದಿದೆ. ಮಧ್ಯರಾತ್ರಿಯಲ್ಲಿ ಹತ್ತಾರು ಜನ ಯುವಕರು ಸೇರಿಕೊಂಡು ತಮ್ಮ ನೆಚ್ಚಿನ ನಟನ ಕಟೌಟ್ ಕಟ್ಟಲು ಮುಂದಾಗಿದ್ದಾರೆ. ರಾತ್ರಿ ಸಮಯ ಆಗಿದ್ದರಿಂದ ವಿದ್ಯುತ್ ತಂತಿ ಯುವಕರ ಗಮನಕ್ಕೆ ಬಂದಿಲ್ಲ, ಇದರಿಂದ ಈ ದುರ್ಘಟನೆ ಸಂಭವಿಸಿತ್ತು. ಈ ವಿಚಾರ ತಿಳಿಯುತ್ತಿದ್ದಂತೆಯೇ ನಟ ಗ್ರಾಮಕ್ಕೆ ಭೇಟಿ ನೀಡಿ ಮೃತ ಅಭಿಮಾನಿಗಳ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಾರೆ. ಅಲ್ಲದೆ ಆಸ್ಪತ್ರೆಗೂ ತೆರಳಿ ಗಾಯಾಳುಗಳ ಆರೋಗ್ಯ ವಿಚಾರಿಸಿದ್ದಾರೆ. ಬಳಿಕ ಇನ್ಮುಂದೆ ಯಾರೂ ನನ್ನ ಕಟೌಟ್ ಹಾಕಬೇಡಿ ಎಂದು ಅಭಿಮಾನಿಗಳಲ್ಲಿ ಯಶ್ ಮನವಿ ಮಾಡಿಕೊಂಡರು.

# ಅನಿವಾರ್ಯತೆ ಬಂದ್ರೆ ಲೋಕಸಭೆಗೆ ಸಚಿವರೂ ಸ್ಪರ್ಧೆ ಮಾಡ್ಬೇಕು

**ಬೆಂಗಳೂರು:** ಅನಿವಾರ್ಯತೆ ಬಂದರೆ ಸಚಿವರು ಸಹ ಸ್ಪರ್ಧೆ ಮಾಡಬೇಕಾಗುತ್ತದೆ ಅಂತ ಸುರ್ಜೇವಾಲ ತಿಳಿಸಿದ್ದಾರೆಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ.



ಲೋಕಸಭೆ ಚುನಾವಣೆಗೆ ಸಚಿವರ ಸ್ಪರ್ಧೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಿನ್ನೆಯ ಸಭೆಯಲ್ಲಿ ಆ ವಿಚಾರ ಚರ್ಚೆ ಆಗಿಲ್ಲ. ಆದರೆ ಸಚಿವರು ಸ್ಪರ್ಧೆ ಮಾಡೋ ಪರಿಸ್ಥಿತಿ ಬಂದರೆ ಸ್ಪರ್ಧಿಸಬೇಕಾಗುತ್ತದೆ ಅಂತ ಹೇಳಿದ್ದಾರೆ. ಕಳೆದ ಬಾರಿ ಕೃಷ್ಣಬೈರೇಗೌಡ ಸ್ಪರ್ಧೆ ಉದಾಹರಣೆ ಕೊಟ್ಟು ಹೇಳಿದ್ದಾರೆ ಅನ್ನೋ ಮೂಲಕ ಸಚಿವರ ಸ್ಪರ್ಧೆಗೆ ಸಂದೇಶ ಬಂದಿದೆ ಅನ್ನೋ ಮಾಹಿತಿ ನೀಡಿದ್ದಾರೆ.

28 ಸಚಿವರನ್ನ ದೆಹಲಿಗೆ ಬರೋದಕ್ಕೆ ಹೈಕಮಾಂಡ್ ನಾಯಕರು ಹೇಳಿದ್ದಾರೆ. ಜನವರಿ 11ಕ್ಕೆ ಎಲ್ಲರು ಹೋಗ್ತೀವಿ. ಒಬ್ಬಬ್ಬ ಸಚಿವರಿಗೆ ಒಂದೊಂದು ಲೋಕಸಭೆ ಕ್ಷೇತ್ರದ ಜವಾಬ್ದಾರಿ ಕೊಟ್ಟಿದ್ದಾರೆ. ಅವರೆಲ್ಲನ್ನು ಕರೆದು ಸಲಹೆ ಸೂಚನೆ ಕೊಡ್ತಾರೆ. ಕ್ಷೇತ್ರಕ್ಕೆ ಸಂಬಂಧಿಸಿದ ಮಾಹಿತಿ ತರೋದಕೆ ಹೇಳಿದ್ದಾರೆ. ನಮ್ಮ ಕ್ಷೇತ್ರದ ಆಕಾಂಕ್ಷಿಗಳ ಬಗ್ಗೆ ಮಾಹಿತಿ ಕೊಡ್ತೀವಿ. ಅಂತಿಮವಾಗಿ ಹೈಕಮಾಂಡ್ ಯಾರು ಅಭ್ಯರ್ಥಿ ಅಂತ ನಿರ್ಧಾರ ಮಾಡುತ್ತೆ ಎಂದು ತಿಳಿಸಿದ್ದಾರೆ.

ಲೋಕಸಭೆಗೆ ಅಭ್ಯರ್ಥಿಗಳ ಪಟ್ಟಿ ಯಾವಾಗ ರಿಲೀಸ್ ಆಗುತ್ತೆ ಗೊತ್ತಿಲ್ಲ. ಹೈಕಮಾಂಡ್ ಅದನ್ನ ತೀರ್ಮಾನ ಮಾಡುತ್ತೆ. ಆದಷ್ಟು ಬೇಗ ಪಟ್ಟಿ ರಿಲೀಸ್ ಮಾಡಿ ಅಂತ ಮನವಿ ಮಾಡ್ತೀವಿ. ಅಭ್ಯರ್ಥಿಗಳ ಘೋಷಣೆಯಾದ್ರೆ, ಹೆಚ್ಚಿನ ಪ್ರಚಾರ ಮಾಡಬಹುದು. ಆದ್ದರಿಂದ ಅಭ್ಯರ್ಥಿಗಳ ಪಟ್ಟಿ ರಿಲೀಸ್ ಮಾಡಿ ಅಂತ ಮನವಿ ಮಾಡ್ತೀವಿ ಎಂದು ಹೇಳಿದ್ದಾರೆ.

## ಗೋವಾದಲ್ಲಿ ಹೆತ್ತ ಮಗುವನ್ನೇ ಹತ್ಯೆಗೈದ ಬೆಂಗಳೂರಿನ ಸಿಇಒ

# ಸೂಟ್‌ಕೇಸ್‌ನಲ್ಲಿ ಮಗು ಶವ: ಅರೆಸ್ಟ್

**ಚಿತ್ರದುರ್ಗ:** ಸ್ವಂತ ಮಗುವನ್ನೇ ಹತ್ಯೆಗೈದು ಸೂಟ್‌ಕೇಸ್‌ನಲ್ಲಿ ಶವವಿಟ್ಟುಕೊಂಡು ತೆರಳುತ್ತಿದ್ದ ಮಹಿಳೆಯನ್ನು ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಐಮಂಗಲ ಠಾಣೆ ಪೊಲೀಸರು ಬಂಧಿಸಿರುವ ಘಟನೆ ನಡೆದಿದೆ.



ಗೋವಾದಿಂದ ಬೆಂಗಳೂರಿಗೆ ತೆರಳುತ್ತಿದ್ದ ಸ್ಟಾರ್ಟ್‌ಅಪ್ ಫೌಂಡರ್ ಮತ್ತು ಸಿಇಓ ಸುಚನಾ ಸೇಠ್ ವಿರುದ್ಧ ಗೋವಾದ ಹೋಟೆಲ್‌ನಲ್ಲಿ ಮಗುವನ್ನು ಹತ್ಯೆ ಮಾಡಿರುವ ಆರೋಪ ಕೇಳಿಬಂದಿತ್ತು. ಸುಚನಾ ಸೇಠ್ ಅವರು ಶನಿವಾರ ತನ್ನ ಮಗನೊಂದಿಗೆ ಉತ್ತರ ಗೋವಾದ ಕ್ಯಾಂಡೋಲಿಮ್‌ನಲ್ಲಿರುವ ಸೋಲ್ ಬನಿಯನ್ ಗ್ರಾಂಡೆಗೆ ಭೇಟಿ ನೀಡಿದ್ದರು. ಸೋಮವಾರ ಹೋಟೆಲ್ ತೊರೆಯುವಾಗ ಒಬ್ಬಂಟಿಯಾಗಿದ್ದರು. ತಾನು ಬೆಂಗಳೂರಿಗೆ ಟ್ಯಾಕ್ಸಿ ಕಾಯ್ದಿರಿಸುವಂತೆ ಹೋಟೆಲ್ ಸಿಬ್ಬಂದಿಯನ್ನ ಕೇಳಿದ್ದಾಳೆ. ಅವರು ವಿಮಾನ ಸೌಲಭ್ಯ ಇರುವ ಸಲಹೆ ನೀಡಿದರೂ ಟ್ಯಾಕ್ಸಿ ತೆಗೆದುಕೊಳ್ಳುವಂತೆ ಆಕೆ ಒತ್ತಾಯಿಸಿದ್ದಾಳೆ ಎಂದು ಸಿಬ್ಬಂದಿ ತಿಳಿಸಿದ್ದಾರೆ.

ಆಕೆ ಹೋಟೆಲ್‌ನಿಂದ ಹೊರಗೆ ಹೋದ ಬಳಿಕ ಮಗು ಇಲ್ಲದಿದ್ದನ್ನು ಸಿಬ್ಬಂದಿ ಗಮನಿಸಿದ್ದಾರೆ. ಅಲ್ಲದೇ ಆಕೆ ತಂಗಿದ್ದ ಹೋಟೆಲ್ ಶುಚಿಗೊಳಿಸಲು ಹೋದಾಗ ರಕ್ತದ ಕಲೆಗಳು ಕಂಡುಬಂದಿವೆ. ಈ ಹಿನ್ನೆಲೆಯಲ್ಲಿ ಅನುಮಾನಗೊಂಡ ಹೋಟೆಲ್ ಸಿಬ್ಬಂದಿ, ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ನಂತರ ಗೋವಾ ಪೊಲೀಸರು ಹೋಟೆಲ್ ಸಿಬ್ಬಂದಿ ಕರೆಸಿದ್ದ ಟ್ಯಾಕ್ಸಿ ಡ್ರೈವರ್ ಸಂಪರ್ಕಿಸಿ ಆಕೆಯೊಂದಿಗೆ ಮಾತನಾಡಲು ಹೇಳಿದ್ದಾರೆ. ಆಕೆಯ ಮಗನ ಬಗ್ಗೆ ಕೇಳಿದಾಗ ಅವನು ಸ್ನೇಹಿತನೊಂದಿಗೆ ಇರುವುದಾಗಿ ಹೇಳಿಕೊಂಡಿದ್ದಳು. ಆತನ ವಿಳಾಸವನ್ನೂ ನೀಡಿದ್ದಳು. ಪೊಲೀಸರು ಆ ವಿಳಾಸವನ್ನ ಪರಿಶೀಲಿಸಿದಾಗ ನಕಲಿಯಾಗಿತ್ತು. ನಂತರ ಟ್ಯಾಕ್ಸಿ ಡ್ರೈವರ್‌ಗೆ ಹೈವೆ ಬಳಿ ಪೊಲೀಸರು ಕಂಡಾಕ್ಷಣ ಟ್ಯಾಕ್ಸಿ ನಿಲ್ಲಿಸುವಂತೆ ತಿಳಿಸಿದ್ದಾರೆ.

ನಂತರ ಟ್ಯಾಕ್ಸಿ ಚಾಲಕ ರಾಷ್ಟ್ರೀಯ ಹೆದ್ದಾರಿ-4ರ ಬಳಿಯ ಐಮಂಗಲ ಠಾಣೆ ಪೊಲೀಸರಿಗೆ ಆಕೆಯನ್ನ ಒಪ್ಪಿಸಿದ್ದಾನೆ. ಬಳಿಕ ಟ್ಯಾಕ್ಸಿ ತಪಾಸಣೆ ಮಾಡಿದ ಐಮಂಗಲ ಪೊಲೀಸರಿಗೆ ಟ್ಯಾಕ್ಸಿ ಡಿಕ್ಕಿಯಲ್ಲಿದ್ದ ಸೂಟ್‌ಕೇಸ್‌ನಲ್ಲಿ ಮಗುವಿನ ಶವಪತ್ತೆಯಾಗಿದೆ. ಸದ್ಯ ಮಗುವಿನ ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದು, ಸುಚನಾಳನ್ನ ಗೋವಾ ಪೊಲೀಸರಿಗೆ ಒಪ್ಪಿಸಿರುವುದಾಗಿ ಐಮಂಗಲ ಪೊಲೀಸರು ತಿಳಿಸಿದ್ದಾರೆ. ಮಾಹಿತಿ ಪ್ರಕಾರ ಸುಚನಾ ಸೇಠ್, 2021ರ ಎಐ ನೀತಿಶಾಸ್ತ್ರದಲ್ಲಿ 100 ಉತ್ತಮ ಮಹಿಳೆಯರ ಪೈಕಿ ಒಬ್ಬರು. ಡೇಟಾ ಸೈನ್ಸ್ ಮತ್ತು ಸ್ಟಾರ್ಟ್‌ಅಪ್ ಉದ್ಯಮಗಳಲ್ಲಿ 12 ವರ್ಷಗಳ ಅನುಭವ ಹೊಂದಿರುವುದಾಗಿ ತಿಳಿದುಬಂದಿದೆ.

# ಮುಸ್ಲಿಮರು ಹೆಚ್ಚಾದ್ರೆ ಹಿಂದೂಗಳ ಪರಿಸ್ಥಿತಿ ಹೇಗಿರತ್ತೆ ಯೋಚ್ನೆ ಮಾಡಿ

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಪ್ರಚೋದನಾಕಾರಿ ಭಾಷಣದ ಕ್ಲಿಪ್ ಒಂದು ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ.




ಜ.7 ರಂದು ಪೆರಾಡಿಯಲ್ಲಿ ನಡೆದ ಅಯ್ಯಪ್ಪ ದೀಪೋತ್ಸವದಲ್ಲಿ ತುಳುವಿನಲ್ಲಿ ಭಾಷಣ ಮಾಡಿದ ಶಾಸಕರು, ಇವತ್ತು ಒಂದು ಮಕ್ಕಳು ಎರಡು ಮಕ್ಕಳು. ಅದುವೇ ಬೇರೆ ಧರ್ಮದವರು ಮಕ್ಕಳು ಎಷ್ಟು ಅಂತ ನೋಡಿದ್ರೆ, ನಮ್ಮ ಸಂಖ್ಯೆ ಎಷ್ಟು ಇದೆ. ಕೆಲವರು ಹೇಳ್ತಾರೆ ನಮ್ಮ ಸಂಖ್ಯೆ 80 ಕೋಟಿ ಇದೆ ಅವರದ್ದು 20 ಕೋಟಿ ಇರೋದಲ್ವಾ ಅಂತಾ. ಈ 20 ಕೋಟಿಗೆ ನಾಲ್ಕು ಮಕ್ಕಳು ಹುಟ್ಟಿದ್ರೆ, ಎಷ್ಟಾಗುತ್ತದೆ ಎಂಬುದನ್ನು ಲೆಕ್ಕ ಹಾಕಿ ಎಂದರು.

ನಮಗೆ ಹುಟ್ಟೋದು ಒಂದು?ತಪ್ಪಿದ್ರೆ ಎರಡು?ನಮ್ಮದು ಎಷ್ಟಾಗುತ್ತೆ ಲೆಕ್ಕ ಹಾಕಿ. ಒಂದು ಸ್ವಲ್ಪ ಹೊತ್ತು ಮನೆಯಲ್ಲಿ ಕೂತು ಯೋಚನೆ ಮಾಡಿ. ಎಷ್ಟು ವರ್ಷಕ್ಕೆ ನಮ್ಮ ಜನಸಂಖ್ಯೆ ಕಡಿಮೆಯಾಗಬಹುದು, ಎಷ್ಟು ವರ್ಷಕ್ಕೆ ಮುಸ್ಲಿಮರ ಸಂಖ್ಯೆ ಜಾಸ್ತಿಯಾಗಬಹುದು. ಒಂದು ವೇಳೆ ಮುಸ್ಲಿಮರ ಸಂಖ್ಯೆ 80 ಕೋಟಿ ಆಗಿ ನಮ್ಮ ಜನಸಂಖ್ಯೆ 20 ಕೋಟಿಯಾಗುವಾಗ ನಮ್ಮ ದೇಶದಲ್ಲಿರುವ ಹಿಂದೂಗಳ ಪರಿಸ್ಥಿತಿ ಏನಾಗಬಹುದು ಅನ್ನೋದನ್ನ ನಾವು ಯೋಚನೆ ಮಾಡಬೇಕು ಎಂದು ಹೇಳಿದ್ದಾರೆ.

ಸದ್ಯ ಶಾಸಕರ ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದ್ದು, ಪೂಂಜಾ ಪರ- ವಿರೋಧ ಕಾಮೆಂಟ್‌ಗಳು ಬರುತ್ತಿವೆ.

# ಕಾಂಗ್ರೆಸ್‌ನಲ್ಲಿ ಪರ-ವಿರೋಧ

ಬೋವಿ ಸಮುದಾಯ ವಿಶ್ವಾಸಕ್ಕೆ ತೆಗೆದುಕೊಂಡು ನಿರ್ಧಾರ ಮಾಡುವ ಸಾಧ್ಯತೆ ಇದೆ.

**ತೆಲಂಗಾಣ ಚುನಾವಣೆ ವೇಳೆ ಒಳಮೀಸಲಾತಿ ಬಗ್ಗೆ ಪ್ರಧಾನಿ ಮೋದಿ ಭರವಸೆ:** ಇನ್ನು ತೆಲಂಗಾಣ ಚುನಾವಣೆ ವೇಳೆ ಮಾದಿಗ ದಂಡೋರದ ಮುಖಂಡ ಮಂದಕೃಷ್ಣ ಮಾದಿಗ ನೇತೃತ್ವದ ಸಮಾವೇಶದಲ್ಲಿ ಒಳಮೀಸಲಾತಿ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದ್ದರು. ಮಾದಿಗ ಸಮಾಜದ ಮತ ಬ್ಯಾಂಕ್ ಕಬಳಿಸಲು ಕಮಲ ಪಡೆ ಪ್ಲಾನ್ ಮಾಡಿದೆ. ಕೇಂದ್ರ ಬಿಜೆಪಿ ಒಳ ಮೀಸಲಾತಿ ಘೋಷಣೆಗೆ ಪ್ಲಾನ್ ಹಿನ್ನೆಲೆ ಕೇಂದ್ರದಿಂದ ಘೋಷಣೆಗೂ ಮುನ್ನವೆ ಒಳ ಮೀಸಲಾತಿ ಜಾರಿ ಬಗ್ಗೆ ಕೇಂದ್ರಕ್ಕೆ ಶಿಫಾರಸ್ಸು ಮಾಡಲು ಸಿಎಂ ಸಿದ್ಧರಾಮಯ್ಯ ಪ್ಲಾನ್ ಮಾಡಿದ್ದಾರೆ.

ಮಾದಿಗ ಸಮುದಾಯದ ಮತ ಬ್ಯಾಂಕ್ ಮೇಲೆ ಕೈ ಕಮಲ ಪಡೆ ಎರಡೂ ಕಣ್ಣಿಟ್ಟಿದೆ. ಮಾದಿಗ ಸಮಾಜ ರಾಜ್ಯ ಮತ್ತು ಇತರೆಡೆ ದೊಡ್ಡ ಮತ ಬ್ಯಾಂಕ್ ಹೊಂದಿದೆ. ಛಲವಾದಿ, ಬಂಜಾರ, ಬೋವಿ ಸಮಾಜ ವಿರೋಧದ ಲೆಕ್ಕಾಚಾರ. ಪರ ಮತ್ತು ವಿರೋಧದ ಲೆಕ್ಕಾಚಾರದಲ್ಲಿ ಕಾಂಗ್ರೆಸ್ ಬಿಜೆಪಿ ತೊಡಗಿವೆ.

# ದೇವಾಲಯದೊಳಗೆ ನೋ ಎಂಟ್ರಿ

ದೇವಾಲಯದ ಒಳಗೆ ವಸ್ತ್ರಸಂಹಿತೆ ಪಾಲಿಸುವಂತೆ, ವಿದೇಶಿ ವಸ್ತ್ರಗಳು ಹಾಗೂ ತುಂಡುಡುಗೆ ಧರಿಸಿದವರಿಗೆ ದೇವಾಲಯದ ಒಳಗೆ ಪ್ರವೇಶಕ್ಕೆ ಅವಕಾಶ ನೀಡದಂತೆ ಕರ್ನಾಟಕ ದೇವಸ್ಥಾನ-ಮಠ ಮತ್ತು ಧಾರ್ಮಿಕ ಸಂಸ್ಥೆಗಳ ಮಹಾಸಂಘ ಈ ಹಿಂದೆ ಒತ್ತಾಯಿಸಿತ್ತು. ಇದಕ್ಕೆ ಹಿಂದೂ ಸಂಘಟನೆಗು ಬೆಂಬಲ ವ್ಯಕ್ತಪಡಿಸಿದ್ದವು. ದೇವಾಲಯಗಳ ಒಳಗೆ ತುಂಡು ಬಟ್ಟೆಗಳನ್ನು ಧರಿಸಿ ಬರುವ ಯುವಕ ಯುವತಿಯರಿಗೆ ದೇವರ ದೇವರ ದರ್ಶನಕ್ಕೆ ಅವಕಾಶ ನೀಡಬಾರದೆಂದು ಒತ್ತಾಯಿಸಿದ್ದವು.

ಈ ಸಂಬಂಧ ಕಳೆದ ತಿಂಗಳು ರಾಜ್ಯದ ಎಲ್ಲ ದೇವಾಲಯ ಮತ್ತು ಮಠಗಳ ಅರ್ಚಕರು ಮತ್ತು ಟ್ರಸ್ಟಿಗಳು ನಡೆಸಿದ್ದರು. ಸಭೆಯಲ್ಲಿ ರಾಜ್ಯದ ಎಲ್ಲ ಅರ್ಚಕರು ಹಾಗೂ ಟ್ರಸ್ಟಿಗಳು ಜನವರಿಯಿಂದ ಈ ನಿಯಮವನ್ನು ಜಾರಿ ಮಾಡಬೇಕೆಂದು ತೀರ್ಮಾನಿಸಿದ್ದರು. ಹೀಗಾಗಿ ಇಂದಿನಿಂದ ಬೆಂಗಳೂರಿನ ರಾಜ್ಯದ ಎಲ್ಲ ದೇವಾಲಯಗಳಲ್ಲಿ ವಸ್ತ್ರ ಸಂಹಿತೆ ಜಾರಿಯಾಗಿದೆ.

ಈ ವಸ್ತ್ರಸಂಹಿತೆ ಪ್ರಕಾರ ಪುರುಷರು ದೇವಲಾಯಕ್ಕೆ ಚಡ್ಡಿ, ಬರ್ಮುಡಾ, ಹರಿದ ಜೀನ್ಸ್?, ಎದೆ ಕಾಣುವ ಟಿಶರ್ಟ್? ಧರಿಸಿಕೊಂಡು ಬರುವಂತಿಲ್ಲ. ಮಹಿಳೆಯರು ಸ್ಕರ್ಟ್, ಮಿಡಿ, ಹರಿದ ಜೀನ್ಸ್, ಶಾರ್ಟ್ಸ್ ಹಾಕಿಕೊಂಡು ಬರುವಂತಿಲ್ಲ. ಒಂದು ವೇಳೆ ಬಂದರೇ ದೇವಸ್ಥಾನದ ಒಳಗೆ ಪ್ರವೇಶ ನಿರ್ಬಂಧಿಸಲಾಗಿದೆ.

## ಮೊದಲನೆ ಪುಟದಿಂದ...

ದಕ್ಷಿಣ ಕನ್ನಡ-ಉಡುಪಿಯ ಕೆಲವು ದೇವಾಲಯಗಳಲ್ಲಿ ಪುರುಷರು ಅಂಗಿ ಧರಿಸಿ ದೇವಾಲಯದ ಒಳಗ ಹೋಗುವಂತಿಲ್ಲ. ಈ ಬಗ್ಗೆ ಬಿಗಿಯಾದ ವಸ್ತ್ರ ಸಂಹಿತೆ ಜಾರಿಯಲ್ಲಿದೆ.

# ಸವಾರಿ

ನಡೆಯಲಿದೆ. ಈ ಅದ್ಭುತ ಕ್ಷಣಗಳನ್ನು ಕಣ್ತುಂಬಿಕೊಳ್ಳು ಕರ್ನಾಟಕದ ಯುವಕನೊಬ್ಬ ವಿಭಿನ್ನವಾಗಿ ಯಾತ್ರೆ ಆರಂಭಿಸಿದ್ದಾನೆ.

ಹೌದು ವಿಜಯಪುರ ಜಿಲ್ಲೆಯ ಬಾಗೇವಾಡಿ ತಾಲೂಕಿನ ತಾಳೇವಾಡ ಗ್ರಾಮದ ಸುರೇಶ, ಹನುಮ ಜನ್ಮಭೂಮಿ ಅಂಜನಾದ್ರಿಯಿಂದ ರಾಮಜನ್ಮ ಭೂಮಿ ಅಯೋಧ್ಯೆಗೆ ಸೈಕಲ್ ನಲ್ಲಿ ಯಾತ್ರೆ ಆರಂಭಿಸಿದ್ದಾನೆ. ಮಂಗಳವಾರ (ಜ.09) ರಂದು ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಅಂಜನಾದ್ರಿ ಪರ್ವತದ ಅಂಜನೇಯನ ದರ್ಶನ ಪಡೆದು ಸೈಕಲ್ ಯಾತ್ರೆ ಆರಂಭಿಸಿದ್ದಾನೆ. ಏಕಾಂಗಿಯಾಗಿ ಸೈಕಲ್ ಮೂಲಕ ಅಯೋಧ್ಯೆ ತಲುಪಿ ಪ್ರಭು ಶ್ರೀರಾಮನ ದರ್ಶನ ಪಡೆಯಲಿದ್ದಾನೆ. ಅಷ್ಟೆ ಅಲ್ಲದೆ ಅಯೋಧ್ಯೆಗೆ ತೆರಳುವ ಮಾರ್ಗ ಮಧ್ಯ ಬರುವ ಹಳ್ಳಿಗಳಲ್ಲಿ ಪ್ರಭು ಶ್ರೀರಾಮನ ಚಿತ್ರಗಳನ್ನ ಬಿಡಿಸುತ್ತ ಪ್ರಯಾಣ ನಡೆಸಲಿದ್ದಾನೆ.

ಕೊರಳಲ್ಲಿ ಕೇಸರಿ ಶಾಲು, ಸೈಕಲ್ ಎದುರು ರಾಮ ಆಂಜನೇಯರ ಫೋಟೊ, ಎದುರಿಗೆ ಭಗದ್ವಜ, ಹಾಕಿಕೊಂಡು ಸೈಕಲ್ ತುಳಿತಾ ಅಯೋಧ್ಯೆಗೆ ಈ ಯುವಕ ಪ್ರಯಾಣ ಬೆಳೆಸಿದ್ದಾನೆ. ಯುವಕನ ಸೈಕಲ್ ಯಾತ್ರೆ ಬಗ್ಗೆ ತಿಳಿದ ಗಂಗಾವತಿಯ ಹಿಂದೂಪರ ಸಂಘಟನೆಯ ಮುಖಂಡರು ಯುವಕನಿಗೆ ಸನ್ಮಾನ ಮಾಡಿ, ಯಾತ್ರೆಗೆ ಶುಭಹಾರೈಸಿದ್ದಾರೆ. ಇನ್ನು ಅಂಜನಾದ್ರಿ ಬೆಟ್ಟಕ್ಕೆ ಬಂದಿದ್ದ ಶಾಸಕ ಗಾಲಿ ಜನಾರ್ದನ ರೆಡ್ಡಿ ಸಹ ಸುರೇಶನ ಸೈಕಲ್ ಯಾತ್ರೆ ವಿಷಯ ತಿಳಿದು ಶುಭಹಾರೈಸಿ ಯಾವುದೆ ತೊಂದರೆಯಾಗದೆ ಪ್ರಭು ಶ್ರೀರಾಮನ ದರ್ಶನ ಸಿಗಲಿ, ಅಯೋಧ್ಯೆಯ ರಾಮಮಂದಿರ ಉದ್ಘಾಟನೆಯ ಐತಿಹಾಸಿಕ ಕ್ಷಣ ಕಣ್ತುಂಬಿಕೊಳ್ಳಲಿ ಎಂದು ಶುಭ ಕೋರಿದ್ದಾರೆ. ಯುವಕನ ಸೈಕಲ್ ಯಾತ್ರೆಯ ಬಗ್ಗೆ ತಿಳಿಯುತ್ತಲೆ ನೂರಾರು ಜನ ಯುವಕರು ಸೇರಿ ಸುರೇಶನಿಗೆ ಶುಭಹಾರೈಸಿ ಬಿಳ್ಕೊಟ್ಟಿದ್ದಾರೆ.

ಸದ್ಯ ಅಂಜನಾದ್ರಿಯಿಂದ ಹೊರಟ ಯುವಕನ ಸೈಕಲ್ ಯಾತ್ರೆ, ಬೆಳಗಾವಿ ಜಿಲ್ಲೆಯಿಂದ ಮಹಾರಾಷ್ಟ್ರದ ಮೂಲಕವಾಗಿ ಉತ್ತರ ಪ್ರದೇಶದ ಅಯೋಧ್ಯೆಯೆಡೆಗೆ ಪ್ರಯಾಣ ಸಾಗಲಿದೆ. ಹನುಮನ ಸ್ಥಳದಿಂದ ರಾಮನ ಸ್ಥಳಕ್ಕೆ ಸೈಕಲ್ ಮೂಲಕ ಹೊರಟ ವ್ಯಕ್ತಿಗೆ ಪ್ರಭು ಶ್ರೀರಾಮ ಹಾಗೂ ಆಂಜನೆಯನ ಆಶೀರ್ವಾದ ಇರಲಿ, ಎಂಬುದೆ ಎಲ್ಲರ ಆಶಯವಾಗಿದೆ.

# ಜ.16ರಿಂದ 3 ದಿನಗಳ ಕಾಲ ಪೀಣ್ಯ ಫ್ಲೈಓವರ್ ಬಂದ್

**ಬೆಂಗಳೂರು:** ಲೋಡ್ ಟೆಸ್ಟಿಂಗ್ ಮಾಡುವ ಸಲುವಾಗಿ ಜನವರಿ 16ರಿಂದ ಮೂರು ದಿನಗಳ ಕಾಲ ಪೀಣ್ಯ ಫ್ಲೈಓವರ್ ಬಂದ್ ಆಗಲಿದೆ.

ಜನವರಿ 16ರ ರಾತ್ರಿ 11 ಗಂಟೆಯಿಂದ ಜನವರಿ 19ರ ಬೆಳಗ್ಗೆ 11 ಗಂಟೆಯವರೆಗೆ ಈ ಫ್ಲೈಓವರ್ ಕ್ಲೋಸ್ ಆಗಲಿದೆ. ಈ ಹಿನ್ನೆಲೆ ಎಲ್ಲಾ ವಾಹನ ಸವಾರರು ಸರ್ವಿಸ್ ರಸ್ತೆ ಬಳಸುವಂತೆ ಪೊಲೀಸರು ಮನವಿ ಮಾಡಿದ್ದಾರೆ. ಇದರಿಂದಾಗಿ ಮುಂದಿನ ವಾರ ತುಮಕೂರು ರಸ್ತೆಯಲ್ಲಿ ಬೃಹತ್ ವಾಹನ ದಟ್ಟಣೆ ಉಂಟಾಗಲಿದೆ ಎಂದು ವರದಿಗಳು ತಿಳಿಸಿವೆ.

15 ಮೀಟರ್ ಅಗಲದ, 4.2 ಕಿಮೀ ಉದ್ದದ ಮೇಲ್ಸೇತುವೆ ಪೀಣ್ಯದಲ್ಲಿ ಪ್ರಾರಂಭವಾಗಿ ತುಮಕೂರು ರಸ್ತೆಯ ನಾಗಸಂದ್ರದಲ್ಲಿ ಕೊನೆಗೊಳ್ಳುತ್ತದೆ. 2022ರಲ್ಲಿ ಪೀಣ್ಯ ಫ್ಲೈಓವರ್‌ನ ಎರಡು ಪಿಲ್ಲರ್‌ನ



ಕೇಬಲ್‌ಗಳಲ್ಲಿ ತಾಂತ್ರಿಕ ಸಮಸ್ಯೆ ಉಂಟಾದ ಕಾರಣ ಹೆವಿ ವೆಹಿಕಲ್‌ಗಳ ಓಡಾಟಕ್ಕೆ ಬ್ರೇಕ್ ಹಾಕಲಾಗಿತ್ತು.

ಈ ಕುರಿತು ಎನ್‌ಹೆಚ್‌ಎಐ ಯೋಜನಾ ನಿರ್ದೇಶಕ ಜಯಕುಮಾರ್ ಮಾತನಾಡಿದ್ದು, ಕಾಮಗಾರಿ ಪೂರ್ಣಗೊಂಡಿದೆ. ಪ್ರಿಸ್ಟ್ರೆಸ್ಡ್ ಕೇಬಲ್‌ಗಳ ಸಾಮರ್ಥ್ಯವನ್ನು ನಿರ್ಣಯಿಸಲು ನಾವು ಲೋಡ್ ಪರೀಕ್ಷೆಗಳನ್ನು ನಡೆಸಬೇಕಾಗಿದೆ. ಲೋಡ್ ಪರೀಕ್ಷೆಯ ಸಮಯದಲ್ಲಿ ತಲಾ 32 ಟನ್‌ಗಳನ್ನು ಹೊತ್ತ 8 ಟ್ರಕ್‌ಗಳನ್ನು 48 ಗಂಟೆಗಳಿಗೂ ಹೆಚ್ಚು ಕಾಲ ಫ್ಲೈಓವರ್ ಮೇಲೆ ಓಡಿಸಲಾಗುತ್ತದೆ. ನಾವು ಎರಡು ಸ್ಪ್ಯಾನ್‌ಗಳನ್ನು ಮಾತ್ರ ಪರಿಶೀಲಿಸುತ್ತೇವೆ. ಇದಕ್ಕಾಗಿ 105-106 ಮತ್ತು 117-118 ಕಂಬಗಳನ್ನು ಸಂಪರ್ಕಿಸುವ ವ್ಯಾಪ್ತಿಯನ್ನು ಎನ್‌ಹೆಚ್‌ಎಐ ಗುರುತಿಸಿದೆ ಎಂದು ತಿಳಿಸಿದರು.

ಈ ಫ್ಲೈಓವರ್ 23 ಜಿಲ್ಲೆಗಳಿಗೆ ಸಂಪರ್ಕ ಕಲ್ಪಿಸುವುದಲ್ಲದೇ ಬೆಂಗಳೂರು ಮತ್ತು ರಾಜ್ಯದ ಇತರೆ ಜಿಲ್ಲೆಗಳಿಗೆ ಒಂದು ರೀತಿಯ ಆರ್ಥಿಕ ಚೇತರಿಕೆಯ ಕೊಂಡಿ ಆಗಿದೆ. ಪೀಣ್ಯ ಮೇಲ್ಸೇತುವೆ ಒಟ್ಟು 120 ಪಿಲ್ಲರ್‌ಗಳನ್ನು ಒಳಗೊಂಡಿದೆ.

# ಇಡಿ ದಾಳಿ ಮುಕ್ತಾಯ; ಕಣ್ಣೀರಿಟ್ಟ ಶಾಸಕ ನಂಜೇಗೌಡ

**ಕೋಲಾರ:** ಜಿಲ್ಲೆಯ ಮಾಲೂರು ಕಾಂಗ್ರೆಸ್ ಶಾಸಕ ಕೆವೈ ನಂಜೇಗೌಡ ನಿವಾಸದ ಮೇಲೆ ಜಾರಿ ನಿರ್ದೇಶನಾಲಯದ ದಾಳಿ ಮುಕ್ತಾಯವಾಗಿದೆ. ಮಂಗಳವಾರ ರಾತ್ರಿ ಪರಿಶೀಲನೆ ನಡೆಸಿ ಇಡಿ ಅಧಿಕಾರಿಗಳು ಮನೆಯಿಂದ ವಾಪಸ್ ಹೊರಟಿದ್ದಾರೆ . ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನ ಕೊಮ್ಮನಹಳ್ಳಿ ಗ್ರಾಮದ ನಿವಾಸದ ಮೇಲೆ ಇಡಿ ದಾಳಿ ನಡೆದಿತ್ತು. ಸೋಮವಾರ ಬೆಳಗ್ಗೆ 5.30ಕ್ಕೆ ದಾಳಿ ನಡೆಸಿದ್ದ ಇಡಿ ಅಧಿಕಾರಿಗಳ ತಂಡ ಮಂಗಳವಾರ ರಾತ್ರಿ 9.45ಕ್ಕೆ ಎರಡು ಕಾರ್ ನಲ್ಲಿ ವಾಪಸ್ ಹೋಗಿದ್ದಾರೆ. ಶಾಸಕ ನಂಜೇಗೌಡ ನಿವಾಸದಲ್ಲಿ 16.5 ಲಕ್ಷ ಹಣ ಪತ್ತೆಯಾಗಿದೆ ಎಂದು ತಿಳಿದು ಬಂದಿದೆ. ಅಧಿಕಾರಿಗಳು ಕೆಲ ದಾಖಲೆಗಳನ್ನು ತೆಗೆದುಕೊಂಡು ಹೋಗಿದ್ದಾರೆ.



ಇನ್ನು ಇಡಿ ದಾಳಿ ಬಗ್ಗೆ ಪ್ರತಿಕ್ರಿಯಿಸಿದ ಶಾಸಕ ನಂಜೇಗೌಡ, 3 ವಿಚಾರವಾಗಿ ನನ್ನ ಬಳಿ ಮಾಹಿತಿ ಕೇಳಿದ್ರು, ಈ ಬಗ್ಗೆ ಮಾಹಿತಿ ನೀಡಿದ್ದೇನೆ ಅಂದ್ರು. ಮಾತನಾಡುವಾಗ ಶಾಸಕ ನಂಜೇಗೌಡ ಹಾಗೂ ಅವರ ಪತ್ನಿ ರತ್ನಮ್ಮ ಕಣ್ಣೀರು ಹಾಕಿದರು.

ಸೋಮವಾರ ಬೆಳಗ್ಗೆ ಇಡಿ ಅಧಿಕಾರಿಗಳು ನಮ್ಮ ಮನೆಗೆ ಬಂದಿದ್ದರು. ಅವರು ಕೇಳಿದ ಎಲ್ಲಾ ಮಾಹಿತಿ ಕೊಟ್ಟಿದ್ದೇನೆ. ಮುಂದೆ ಸಹ ಏನೂ ಆಗಲ್ಲ ಅನ್ನೋ ನಂಬಿಕೆ ಇದೆ. ಮೂರು ವಿಚಾರವಾಗಿ ನನ್ನ ಬಳಿ ಮಾಹಿತಿ ಕೇಳಿದ್ದರು ಎಂದರು.

ಒಂದು ಕೋಚಿಮುಲ್ ನೇಮಕಾತಿ, ಎರಡನೆಯದು ದರಕಾಸ್ತು ಸಮಿತಿ ಭೂ ಮಂಜೂರಾತಿ ಮತ್ತು ಮೂರನೆಯದು ನನ್ನ ವ್ಯವಹಾರಗಳ ಬಗ್ಗೆ ಮಾಹಿತಿ ಕೇಳಿದ್ರು. ನನ್ನ ಮುಗಿಸಲು ಸಾಕಷ್ಟು ಜನರ ಸಂಚು ರೂಪಿಸಿದ್ದಾರೆ ಎಂದು ನಂಜೇಗೌಡರು ಆರೋಪಿಸಿದರು.

**ಮಗಳ ಮದುವೆ ಇರಿಸಿದ್ದ ಹಣ:** ಕೆಲವು ದಾಖಲೆ ಹಾಗೂ ತಮ್ಮನ ಮಗಳ ಮದುವೆಗೆ ಬಟ್ಟೆ ತರಲು 16.50 ಲಕ್ಷ ರೂಪಾಯಿ ಹಣ ಹೊಂದಿಸಿದ್ದೆ. ಆ ಹಣ ಹಾಗೂ ದಾಖಲೆಗಳನ್ನ ವಶಕ್ಕೆ ಪಡೆದಿದ್ದಾರೆ ಹಣ ವಾಪಾಸ್ ನೀಡುವಂತೆ, ಕೇಳಿಕೊಂಡೆವು ಆದರೂ ನೀಡಲಿಲ್ಲ. ಮತ್ತೆ ವಿಚಾರಣೆಗೆ ಕರೆದಿದ್ದಾರೆ ಹೋಗುವೆ ಎಂದು ಶಾಸಕರು ಹೇಳಿದರು.

ಭಾವುಕರಾಗಿ ಕಣ್ಣೀರಿಟ್ಟ ಶಾಸಕರು

ಮಾಧ್ಯಮಗಳ ಎದುರು ಮಾತನಾಡುವ ವೇಳೆ ಭಾವುಕರಾಗಿ ಶಾಸಕ ಕೆ.ವೈ.ನಂಜೇಗೌಡ ಕಣ್ಣೀರು ಹಾಕಿದರು. ಇದೇ ವೇಳೆ ಪಕ್ಕದಲ್ಲಿದ್ದ ಪತ್ನಿ ರತ್ನಮ್ಮ ಸಹ ಕಣ್ಣೀರು ಹಾಕಿದರು.

# ಫೆ.12ರಂದು ಸಿದ್ಧರಾಮೇಶ್ವರ ಜಯಂತಿ



**ಮೈಸೂರು:** ಶ್ರೀ ಶಿವಯೋಗಿ ಸಿದ್ಧರಾಮೇಶ್ವರರ 850 ನೇ ಸುವರ್ಣ ಜಯಂತಿ ಮಹೋತ್ಸವವನ್ನು ಫೆಬ್ರವರಿ 12 ರಂದು ಕಿರು ರಂಗಮಂದಿರದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲು ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಆರ್. ಲೋಕನಾಥ್ ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಿದ್ಧರಾಮೇಶ್ವರ ಜಯಂತಿ ಆಚರಣೆ ಸಂಬಂಧ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಜಿಲ್ಲೆಗೆ ಕಾರ್ಯಕ್ರಮ ಮಾಡಲು 50 ಸಾವಿರ ಅನುದಾನ ಬಿಡುಗಡೆ ಮಾಡಲಾಗಿದೆ. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಲಾಗುವುದು ಎಂದು ಅವರು ತಿಳಿಸಿದರು.

ಜಯಂತಿ ಕಾರ್ಯಕ್ರಮ ನಡೆಯುವ ಸ್ಥಳದ ಸ್ವಚ್ಚತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ.ಡಿ ಸುದರ್ಶನ್ ಅವರು ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಕಲಾತಂಡಗಳಿಂದ ಪ್ರದರ್ಶನ ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಾಚಾರದಂತೆ ಜನ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಭೋವಿ ಸಮುದಾಯದ ಅಧ್ಯಕ್ಷರಾದ ಜಿ. ನಾಗರಾಜ್, ಉಪಾಧ್ಯಕ್ಷರಾದ ಚಿನ್ನಸ್ವಾಮಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೂಸಿನ ಮನೆ ಸದುಪಯೋಗ ಆಗಲಿ

**ಮೈಸೂರು:** ಕೂಸಿನಮನೆ ನಿರ್ವಹಣೆ, ಕೇರ್‌ಟೇಕರ್ಸ್‌ಗಳು ನಿರ್ವಹಿಸಬೇಕಾದ ಜವಾಬ್ದಾರಿಗಳು ಹಾಗೂ ಕೂಸಿನ ಮನೆಯ ಸದುಪಯೋಗವನ್ನು ಪಡೆದುಕೊಳ್ಳುವಂತೆ ತಿ ನರಸೀಪುರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೃಷ್ಣ.ಸಿ ಅವರು ತಿಳಿಸಿದರು.

ತಿ.ನರಸೀಪುರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಕೂಸಿನ ಮನೆಯ ಆರೈಕೆದಾರರ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆರೈಕೆದಾರರು ಏಳು ದಿನಗಳ ತರಬೇತಿ ಪಡೆದು ಉತ್ತಮವಾಗಿ ಕೆಲಸ ಮಾಡಬೇಕು. ತಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕೂಸಿನ ಮನೆಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಬರುವಂತೆ ನೋಡಿಕೊಳ್ಳಬೇಕು ಹಾಗೂ ಬಹಳ ಜವಾಬ್ದಾರಿಯುತವಾಗಿ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು. ಗ್ರಾಮೀಣ ಪ್ರದೇಶದ ಬಡವರ ಮಕ್ಕಳಿಗೆ ಕೂಸಿನ ಮನೆಯು ವರವಾಗಿದ್ದು ತಮ್ಮ ಮಕ್ಕಳನ್ನು ಕೂಸಿನ ಮನೆಯಲ್ಲಿ ಬಿಟ್ಟು ತಾವು ಕೆಲಸಕ್ಕೆ ಹೋಗಲು ಸಹಕಾರಿಯಾಗುತ್ತದೆ. ಕೂಸಿನ ಮನೆಯಲ್ಲಿ ಮಕ್ಕಳನ್ನು ನಿಮ್ಮ ಸ್ವಂತ ಮಕ್ಕಳಂತೆ ಪಾಲನೆ ಪೋಷಣೆ ಮಾಡಿ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕೆಂದು ಸೂಚನೆ ನೀಡಿದರು. ತರಬೇತಿಯಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಿರಿಯ ಮೇಲ್ವಿಚಾರಕಿ ಬೊಮೆಲೆ ರೇಖಾ, ಮೇಲ್ವಿಚಾರಕಿ ಶೈಲಾ ಎಫ್ ಸುಣಗಾರ್ ಹಾಗೂ ತಾಲ್ಲೂಕು ಐ ಇ ಸಿ ಸಂಯೋಜಕ ಹರ್ಷಿತ್. ಬಿ ಹಾಜರಿದ್ದರು.



# ಪದ್ಮನಾಭನಗರದಲ್ಲಿ ಅಯ್ಯಪ್ಪ ಸ್ವಾಮಿ ಇರುಮುಡಿ ಕಾರ್ಯಕ್ರಮ ಮತ್ತು ಶಬರಿಮಲೆ ಯಾತ್ರೆ

**ಬೆಂಗಳೂರು:** ನಗರದ ಪದ್ಮನಾಭನಗರದಲ್ಲಿರುವ ಬೆಂಗಳೂರು ಮಹಾನಗರ ಅಯ್ಯಪ್ಪ ಸ್ವಾಮಿ ಸೇವಾ ಸಮಿತಿ ವತಿಯಿಂದ ಇಂದು 44 ನೇ ವರ್ಷದ ಅಯ್ಯಪ್ಪ ಸ್ವಾಮಿ ಇರುಮುಡಿ ಕಾರ್ಯಕ್ರಮ ನಡೆಯಿತು. ನವಂಬರ್ 22 ರಿಂದ ಪ್ರತಿದಿನ ವಿಶೇಷ ಪೂಜಾ ಕಾರ್ಯಕ್ರಮ ನಡೆಸಲಾಗುತ್ತಿತ್ತು. 41 ದಿನಗಳ ವ್ರತ ಪಾಲಿಸಿದ ಮಾಲದಾರಿ ಸ್ವಾಮಿಗಳಿಗೆ ಇಂದು ಅಯ್ಯಪ್ಪ ಸ್ವಾಮಿಗೆ ವಿಶೇಷ ಅಲಂಕಾರ ಮತ್ತು ಪೂಜೆ ಹಾಗು ಹೋಮ ನೇರವೇರಿಸಿ ಇರುಮುಡು ಕಟ್ಟುವ ಕಾರ್ಯವನ್ನ ದೇವಸ್ಥಾನದ ಮುಖ್ಯಸ್ಥರಾದ ಮತ್ತು ಗುರುಸ್ವಾಮಿಗಳಾದ ವೆಂಕಟರಮಣ ಅಯ್ಯಪ್ಪಣ್ಣ ನೇರವೇರಿಸಿದರು ಒಟ್ಟು 35 ಅಯ್ಯಪ್ಪಸ್ವಾಮಿ ಮಾಲಾಧಾರಿಗಳು ಇರುಮುಡಿ ಹೊತ್ತು ಶಬರಿಮಲೈ ಯಾತ್ರೆಯನ್ನ ಕೈಗೊಂಡರು. ನವಂಬರ್ 22 ರಿಂದ ದೇವಸ್ಥಾನಕ್ಕೆ ಪ್ರತಿದಿನ ದರ್ಶನಕ್ಕೆ ಆಗಮಿಸುತ್ತಿದ್ದ ಭಕ್ತಾದಿಗಳಿಗೆ ದಿನದ ಮೊರುಹೊತ್ತು ಉಚಿತ ಅನ್ನದಾನ ಪ್ರಸಾದವನ್ನ ಏರ್ಪಡಿಸಲಾಗಿತ್ತು.



# ಭಾರತೀಯರು ಸಂಭ್ರಮಿಸುವ ದಿನ ಬಂದಿದೆ : ಪ್ರಮೀಳಾ ಭರತ್

**ಮೈಸೂರು:** ರಾಮಮಂದಿರ ಪ್ರಾಣ ಪ್ರತಿಷ್ಠಾಪನಾ ಅಭಿಯಾನದ ಅಂಗವಾಗಿ ವಾರ್ಡ್ ನಂಬರ್ 23ರ ಸೀತಾ ವಿಳಾಸ ರಸ್ತೆಯಲ್ಲಿರುವ ಕಂಚಿ ಕಾಮ ಕೋಟಿ ಬಲಿ ಶಿಲೆಯ ರಾಮಮಂದಿರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ವಾರ್ಡಿನ ಮನೆಮನೆಗೂ ತೆರಳಿ ಮಂತ್ರಾಕ್ಷತೆ ವಿತರಣೆಗೆ ನಿಕಟ ಪೂರ್ವ ನಗರ ಪಾಲಿಕೆ ಸದಸ್ಯರಾದ ಪ್ರಮೀಳಾ ಭರತ್ ಚಾಲನೆ ನೀಡಿದರು.

ರಾಮ ಎಂದರೆ ದೇಶದ ಶಕ್ತಿ, ಭಕ್ತಿ ಆಗಿದೆ. ರಾಮನು ಭಾರತೀಯರ ಆರಾಧ್ಯ ದೈವ. ಜ. 22ರಂದು ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ನಡೆಯುತ್ತಿದೆ. ಈ ದಿನ ಭಾರತೀಯರೆಲ್ಲರೂ ಸಂಭ್ರಮಿಸುವ ದಿನವಾಗಿದೆ ಎಂದು ನಿಕಟ ಪೂರ್ವ ನಗರಪಾಲಿಕ ಸದಸ್ಯರಾದ ಪ್ರಮೀಳಾ ಭರತ್ ಹೇಳಿದರು.

ರಾಮನು ಭಾರತೀಯ ಅಧ್ಯಾತ್ಮದ, ಆದರ್ಶದ ಮೂಲ ಶಕ್ತಿ. ಅವರ ಆದರ್ಶಗಳನ್ನು ಪಾಲಿಸಬೇಕಿದೆ? ಎಂದು ಸಲಹೆ ನೀಡಿದರು.

ಯಾವುದೇ ಆಕ್ರಮಣಕಾರರ ದಾಳಿಗೂ ಜಗ್ಗದೇ ಬಹಳ ವರ್ಷಗಳ ಹೋರಾಟದ ನಂತರ ಅಯೋಧ್ಯೆಯಲ್ಲಿ ರಾಮಮಂದಿರ ಮತ್ತೆ ಗಟ್ಟಿಯಾಗಿ ತಲೆಯೆತ್ತಿ ನಿಂತಿದೆ. ಪ್ರಕೃತಿ ವಿಕೋಪಗಳಿಗೂ ಸ್ವಲ್ಪವೂ ಅಲುಗಾಡದಂತೆ ಭದ್ರವಾಗಿ 45 ಅಡಿ ಆಳದಿಂದ ಕಟ್ಟಲ್ಪಟ್ಟಿದೆ. ಬಹು ದಿನಗಳ ಹೋರಾಟದ ನಂತರದ ಗೆಲುವಿನ ಯಶಸ್ಸಿನ ದಿನ ಜ. 22 ರಂದು ನಾವೆಲ್ಲರೂ ಕಣ್ತುಂಬಿಕೊಳ್ಳಲಿದ್ದೇವೆ? ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ನಿಕಟಪೂರ್ವ ನಗರಪಾಲಿಕೆ ಸದಸ್ಯರಾದ ಸದಸ್ಯರಾದ ಪ್ರಮೀಳಾ ಭರತ್, ರಾಜ್ಯ ಅನ್ಯ ಭಾಷಾ ಸಂಚಾಲಕರಾದ ರಾಜೇಂದ್ರ, ವಾರ್ಡಿನ ಕಾರ್ಯದರ್ಶಿಯಾದ ಶ್ರೀನಿವಾಸ್, ವಾರ್ಡ್ ನ ಯುವ ಮೋರ್ಚಾ ಅಧ್ಯಕ್ಷರಾದ ಪ್ರವೀಣ್, ಗೋಪಿ, ಸುದರ್ಶನ್, ವಿಜ್ಞೇಶ್ವರ ಭಟ್ ,ಶರ್ಮ, ರಾಮು ,ರಾಜು ,ವಿನೋದ್, ಶಿವು, ಕಲ್ಕೆರೆ ಹರೀಶ್, ಪದ್ಮಾವತಿ, ಸುಕನ್ಯ, ಚಂದ್ರಕಲಾ, ಜ್ಯೋತಿ, ದೇವಸ್ಥಾನದ ಅರ್ಚಕರು ಉಪಸ್ಥಿತರಿದ್ದರು.



## ಕರುನಾಡು ರಾಜ್ಯೋತ್ಸವ ರತ್ನ ಪುರಸ್ಕಾರ ಪ್ರದಾನ ಸಮಾರಂಭದಲ್ಲಿ ಸಾಹಿತಿ ಬನ್ನೂರು ರಾಜು ಸಲಹೆ

# ಕವಿಗಳು ಸಮಾಜಮುಖಿಯಾಗಿ

**ಮೈಸೂರು:** ಇಡೀ ದೇಶವನ್ನು ಕಾಡುತ್ತಿರುವ ಎಲ್ಲಾ ರೀತಿಯ ಸಮಸ್ಯೆಗಳಿಗೂ ಕವಿಯಾದವರು ಕಿವಿಯಾಗಿ, ಕಣ್ಣಾಗಿ ಸ್ಪಂದಿಸಿ ತಮ್ಮ ಲೇಖನಿಯಿಂದ ಸಮಾಜಮುಖಿ ಕಾವ್ಯ ಕೃಷಿ ಮಾಡಬೇಕೆಂದು ಸಾಹಿತಿ ಬನ್ನೂರು ಕೆ.ರಾಜು ಹೇಳಿದರು.

ಕುವೆಂಪು ನಗರದ ಎರಡನೇ ಹಂತದ ನಿಮಿಷಾಂಬ ನಗರದ ಲ್ಲಿರುವ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರದ ಆವರಣದಲ್ಲಿ ಮಂಡ್ಯದ ಕರುನಾಡು ಸೇವಾ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಕರುನಾಡು ಕವಿಗೋಷ್ಠಿ ಹಾಗೂ ಕರುನಾಡು ರಾಜ್ಯೋತ್ಸವ ರತ್ನ ಪುರಸ್ಕಾರ ಪ್ರದಾನ ಸಮಾರಂಭವನ್ನು ಜ್ಯೋತಿ ಬೆಳಗುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಖಡ್ಗ ವಾಗಲಿ ಕಾವ್ಯ ಎಂಬ ಮಾತಿಗೆ ಅನ್ವರ್ಥವಾಗಿ ಕವಿಗಳು, ಸಾಹಿತಿಗಳು ತಮ್ಮ ಸಮಾಜೋಪಯೋಗಿ ಶ್ರೇಷ್ಠ ಬರವಣಿಗೆಯಿಂದ ಸಮಾಜವನ್ನು ತಿದ್ದಿ ತೀಡುವ ಜನೋಪಯೋಗಿಯಾದ ನಾಡು ಕಟ್ಟುವ ದೇಶೋದ್ಧಾರದ ಕೆಲಸ ಮಾಡಬೇಕೆಂದರು.

ಇವತ್ತಿನ ಕಾಲಘಟ್ಟದಲ್ಲಿ ನಮ್ಮದು ಧ್ವನಿ ಸತ್ತ ಮೂಕ ಸಮಾಜವಾಗಿದ್ದು ರಾಜ್ಯ, ದೇಶ, ಸೇರಿದಂತೆ ಇಡೀ ಜಗತ್ತು ಅನೇಕ ಸಾಮಾಜಿಕ ತಲ್ಲಣಗಳ ಪ್ರಕ್ಷುಬ್ಧ ಪರಿಸ್ಥಿತಿಯಿಂದ ಬಗೆ ಹರಿಯದ ಸಮಸ್ಯೆಗಳಿಂದ ಉತ್ತರವಿಲ್ಲದ ಪ್ರಶ್ನೆಗಳ ಸುಳಿಯಲ್ಲಿ ಬಳಲುತ್ತಿದೆ. ಹಾಗಾಗಿ ಇದಕ್ಕೆಲ್ಲ ಕವಿಗಳ ಲೇಖನಿ ಉತ್ತರವಾಗಬೇಕು. ನಮ್ಮಲ್ಲಿ ಎರಡು ರೀತಿಯ ಮಾತುಗಳುಂಟು. ಒಂದು ಹೃದಯದ ಅಥವಾ ಮನಸ್ಸಿನ ಮಾತು, ಮತ್ತೊಂದು ನಾಲಿಗೆಯ ಮಾತು. ವಿಪರ್ಯಾಸವೆಂದರೆ ಇವತ್ತು ಹೃದಯದ ಮಾತುಗಳಿಗಿಂತ ಹೆಚ್ಚಾಗಿ ನಾಲಿಗೆ ತುದಿಯ ಮಾತುಗಳೇ ವಿಜೃಂಭಿಸುತ್ತಿವೆ. ಹಾಗಾಗಿ ಇಂದು ಆತ್ಮಸಾಕ್ಷಿಯುಳ್ಳ ಹೃದಯದ ಮಾತುಗಳ ಅಗತ್ಯವಿದೆ. ಮನಸಾಕ್ಷಿಯುಳ್ಳ ಹೃದಯದ ಮಾತುಗಳಿಂದ ಮನುಷ್ಯತ್ವದ ಸಮಾಜವನ್ನು ಕಟ್ಟಬಹುದಾಗಿದ್ದು ಈ ದಿಸೆಯಲ್ಲಿ ಕವಿಗಳು ಕಾವ್ಯ ಕೃಷಿ ಮಾಡಬೇಕೆಂದು ತಿಳಿಸಿದರು.



ಪ್ರಾಸ್ತಾವಿಕ ಭಾಷಣ ಮಾಡಿದ ಕರುನಾಡು ಸೇವಾ ಟ್ರಸ್ಟ್ ನ ಅಧ್ಯಕ್ಷ ಎಂ.ಅಭಿನಂದನ್ ಅವರು ಕಾರ್ಯಕ್ರಮದ ಧ್ಯೇಯೋದ್ದೇಶ ಕುರಿತು ಸವಿವರವಾಗಿ ಮಾತನಾಡಿ ಎಲ್ಲ ರನ್ನೂ ಆತ್ಮೀಯವಾಗಿ ಸ್ವಾಗತಿಸಿ ದರು. ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಕ್ಷೇತ್ರಗಳ ಸಾಧಕರಾದ ಜಾನಪದ ಕ್ಷೇತ್ರದಿಂದ ಬಯಲಾಟ ಕಲಾವಿದರಾದ ಶಿವಣ್ಣಗೌಡ ಮಾದುರಾಯ ಬಿರಾದಾರ, ಶಿವಮೂರ್ತೆಪ್ಪಾ ಶಿದ್ದಪ್ಪ ಮೇನೆದಾರ ಸಾ, ಸಾಹಿತ್ಯ ಕ್ಷೇತ್ರದಿಂದ ಸಿದ್ದರಾಮ ಸಿ. ಸರಸಂಜಿ, ಡಾ.ಪಿ.ಎಂ.ಭೋಜೆ, ಮೌನೇಶ್, ಚಂದು ವಾಗೀಶ, ಕುರುವತ್ತಿಗೌಡ ಪೊಲೀಸ್ ಪಾಟೀಲ, ಪಿ.ಎಸ್.ಮುನಿಲಕ್ಷ್ಮಿ , ಕೆ.ಜಿ.ಹೊನ್ನಾದೇವಿ, ನಳಿನಿ, ಶಿಕ್ಷಣ ಕ್ಷೇತ್ರದಿಂದ ಸಿ. ಎಂ. ಜ್ಯೋತಿ, ಎಂ.ನಾಗರಾಜು, ಎನ್. ಎಂ. ಜನಿವಾರದ, ಸಮಾಜಸೇವಾ ಕ್ಷೇತ್ರದಿಂದ ಕೆ. ನಾಗೇಂದ್ರ, ಹಾಗೂ ಸಂಘಟನಾ ಕ್ಷೇತ್ರದಿಂದ ಉದಯ ರವಿ ಅವರಿಗೆ ಪ್ರಸ್ತುತ ಸಾಲಿನ ಕರುನಾಡು ರಾಜ್ಯೋತ್ಸವ ರತ್ನ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಇದೇ ವೇಳೆ ಕರುನಾಡು ಹೆಸರಿನಲ್ಲಿ ಕವಿ ಗೋಷ್ಠಿ ನಡೆಸಲಾಯಿತು.ಅನೇಕ ಮಂದಿ ಕವಿಗಳು ಕರುನಾಡು ಕವಿಗೋಷ್ಠಿಯಲ್ಲಿ ಭಾಗವಹಿಸಿ ತಮ್ಮ ಕವಿತೆಗಳನ್ನು ವಾಚಿಸಿ ಗಮನ ಸೆಳೆದರು. ಹೆಚ್. ಡಿ. ಕೋಟೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಿರಿಯ ತರಬೇತಿ ಅಧಿಕಾರಿ ಎಂ.ನಾಗರಾಜು ಅಧ್ಯಕ್ಷತೆ ವಹಿಸಿದ್ದರು. ಮಹಿಳಾ ಉದ್ಯಮಿ ಎನ್.ಜೆ.ಮಂಜುಳಾ, ನಿವೃತ್ತ ಯೋಧ ಮಧುಕುಮಾರ್, ಸಮಾಜ ಸೇವಕ ಎಂ.ಶಿವಪ್ಪ ಹಾಲುಮತ, ಹಿರಿಯ ನಾಗರಿಕರ ಹಗಲು ಯೋಗ ಕ್ಷೇಮ ಕೇಂದ್ರದ ಎಂ.ಪಿ.ಪ್ರಭು ಸ್ವಾಮಿ ಮತ್ತು ಟ್ರಸ್ಟ್ ನ ಅಧ್ಯಕ್ಷರಾದ ಎಂ.ಅಭಿನಂದನ್ ಮುಖ್ಯ ಅತಥಿಗಳಾಗಿ ಉಪಸ್ಥಿತರಿದ್ದರು. ಶಿಕ್ಷಕರಾದ ಎನ್.ಎಂ. ಜನಿವಾರದ ಅವರು ಈ ಸುಂದರ ಕಾರ್ಯಕ್ರಮವನ್ನು ನಿರೂಪಿಸಿದರು. ಪ್ರಾರಂಭದಲ್ಲಿ ಕವಿ ಮೌನೇಶ್ ಅವರು ಸುಶ್ರಾವ್ಯವಾಗಿ ಪ್ರಾರ್ಥನೆ ಮಾಡಿದರು.

# ಬೋಧನಾ ಶುಲ್ಕ ಪಾವತಿಸಲು ಅವಧಿ ವಿಸ್ತರಣೆ

**ರಾಮನಗರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2019-20, 2020-21, 2021-22 ಮತ್ತು 2022-23ರ (ಜುಲೈ ಆವೃತ್ತಿ) ದ್ವಿತೀಯ/ತೃತೀಯ ವರ್ಷದ ಬಿ.ಎ/ಬಿ.ಕಾಂ/ ಬಿ.ಎಸ್ಸಿ (ಜನರಲ್/ಹೋಮ್ ಸೈನ್ಸ್/ ಐಟಿ/ಬಿ.ಸಿ.ಎ/ಬಿ.ಬಿ.ಎ ಹಾಗೂ ಅಂತಿಮ ವರ್ಷದ ಎಂ.ಎ/ಎಂ.ಕಾಂ/ ಎಂ.ಬಿ.ಎ ಮತ್ತು ಎಂ.ಎಸ್ಸಿ ಪದವಿಗಳಿಗೆ ಪ್ರವೇಶಾತಿ ನವೀಕರಣಕ್ಕಾಗಿ ಬೋಧನಾ ಶುಲ್ಕ ಪಾವತಿಸಲು ಅಧಿಸೂಚನೆ ಹೊರಡಿಸಲಾಗಿದೆ. 400 ರೂ. ಗಳ ದಂಡಶುಲ್ಕದೊಂದಿಗೆ ಜ. 20ರ ವರೆಗೆ ಅಂತಿಮ ದಿನಾಂಕವನ್ನು ವಿಸ್ತರಿಸಲಾಗಿದ್ದು ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.ksoumysuru.ac.in ವೀಕ್ಷಿಸುವುದು ಹಾಗೂ ಪ್ರಾದೇಶಿಕ ನಿರ್ದೇಶಕರಾದ ಡಾ. ಕೆ. ನಂದಕುಮಾರಿ ದೂ.ಸಂಖ್ಯೆ: 9964495936 ಅಥವಾ ಕಚೇರಿ ದೂ.ಸಂಖ್ಯೆ: 8861732487, 8660460261, 9743184848, 9900356226 ಹಾಗೂ 8618501602 ಅನ್ನು ಸಂಪರ್ಕಿಸುವಂತೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟಿಬಿ ಮುಕ್ತ ಭಾರತ ಅಭಿಯಾನದ ಪ್ರಗತಿ ಪರಿಶೀಲನೆ ಸಭೆ ನಡೆಸಿದ ರಾಜ್ಯಪಾಲರು

**ಬೆಂಗಳೂರು:**ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ರಾಜಭವನದಲ್ಲಿ ಪ್ರಧಾನ ಮಂತ್ರಿ, ಟಿಬಿ ಮುಕ್ತ ಭಾರತ ಅಭಿಯಾನದ ಪ್ರಗತಿ ಪರಿಶೀಲನೆ ಸಭೆ ನಡೆಸಿದರು. ಈ ವೇಳೆ ಅನಿಲ್ ಟಿ.ಕೆ ಪ್ರಧಾನ ಕಾರ್ಯದರ್ಶಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಡಾ.ನವೀನ್ ಭಟ್-ಮಿಷನ್ ನಿರ್ದೇಶಕ ಎನ್‌ಎಚ್‌ಎಂ, ಡಾ.ಶಿವಯೋಗಪ್ಪ.ಯು - ಜಂಟಿ ನಿರ್ದೇಶಕ ಎನ್‌ಟಿಇಪಿ, ಡಾ.ಅನಿಲ್.ಎಸ್ - ಉಪನಿರ್ದೇಶಕ ಎನ್‌ಇಟಿಪಿ, ಡಾ.ಕಿರಣ್. ಕೆ -ಡಬ್ಲ್ಯುಎಚ್‌ಓ ಸಲಹೆಗಾರ ಎನ್‌ಟಿಇಪಿ ಉಪಸ್ಥಿತರಿದ್ದರು.

# ಶಿವಶಂಕರ್.ಎಲ್ ಅವರಿಗೆ ಪಿಎಚ್.ಡಿ ಪದವಿ

ಬೆಂಗಳೂರು: ಬೆಂಗಳೂರಿನ ಕೆಂಭತ್ತಹಳ್ಳಿಯ ಶಿವಶಂಕರ್. ಎಲ್ ಅವರಿಗೆ ಹಂಪಿಯ ಕನ್ನಡ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ನೀಡಿದೆ. ಬೆಂಗಳೂರಿನ ಸೇಂಟ್. ಜೋಸೆಫ್ ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ.ಪೂರ್ಣಿಮಾ ಬಿ.ಎನ್. ಅವರ ಮಾರ್ಗದರ್ಶನದಲ್ಲಿ, ಕನ್ನಡ ಸಾಹಿತ್ಯ ಅಧ್ಯಯನ ವಿಭಾಗದ ಶಿವಶಂಕರ್.ಎಲ್ ಅವರು ಮಂಡಿಸಿದ ಕನ್ನಡ ಚಿಂತನ ಸಾಹಿತ್ಯದಲ್ಲಿ ಪ್ರಭುತ್ವ ನಿರ್ವಚನದ ನೆಲೆಗಳು ಮಹಾಪ್ರಬಂಧವು ಅತ್ಯುತ್ತಮ ಶ್ರೇಣಿಯೊಂದಿಗೆ ಪಿಎಚ್.ಡಿ ಗೆ ಭಾಜನವಾಗಿದೆ ಎಂದು ಕುಲಸಚಿವರಾದ ಡಾ.ವಿಜಯ್ ಪೂಣಚ್ಚ ತಂಬಂಡ ತಿಳಿಸಿದ್ದಾರೆ. ಇದೇ ಜನವರಿ 10 ರಂದು ನಡೆಯಲಿರುವ ನುಡಿಹಬ್ಬದಲ್ಲಿ ಪಿಎಚ್.ಡಿ ಪದವಿ ಪ್ರಧಾನವಾಗಲಿದೆ.

# ಅರ್ಜಿ ಆಹ್ವಾನ

**ಮಂಡ್ಯ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿರುವ ಯುವಸ್ಪಂದನ ಕೇಂದ್ರದಲ್ಲಿ ಯುವ ಪರಿವರ್ತಕ ಹಾಗೂ ಯುವ ಸಮಾಲೋಚಕರಾಗಿ ಕಾರ್ಯನಿರ್ವಹಿಸಲು ಆಸಕ್ತಿಯಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತರು ಸ್ವವಿವರ ಗಳನ್ನೊಳಗೊಂಡ ಅರ್ಜಿಯನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಜನವರಿ 19 ಕೊನೆಯ ದಿನವಾಗಿರುತ್ತದೆ. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನವೀಯ ಮೌಲ್ಯಗಳ ಕುರಿತು ಕಾರ್ಯಾಗಾರ

**ಮೈಸೂರು:** ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್ತು (ಎಐಸಿಟಿಇ) ಪ್ರಯೋಜಿತ, 5 ದಿನಗಳ ರಾಷ್ಟ್ರೀಯ ಕಾರ್ಯಾಗಾರ ಭೋಧಕರ ಅಭಿರುದ್ಧಿ ಕಾರ್ಯಕ್ರಮ ಮೈಸೂರಿನ ವಿದ್ಯಾವರ್ಧಕ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂದು ಉದ್ಘಾಟನೆಯಾಯಿತು.

ಎಐಸಿಟಿಇ - ರಾಷ್ಟ್ರೀಯ ಸಮನ್ವಯ ಸಮಿತಿಯ (ನೈರುತ್ಯ ವಿಭಾಗ) ಪ್ರಾದೇಶಿಕ ಸಂಯೋಜಕರಾದ ಎ. ದೀಪೇಶ್ ಮುಖ್ಯ ಅಥಿತಿಗಳಾಗಿ ಆಗಮಿಸಿದ್ದರು.

ಕಾರ್ಯಕ್ರಮದ ಕುರಿತು ಮಾತನಾಡಿದ ದೀಪೇಶ್, ಈ 5 ದಿನಗಳ ಕಾರ್ಯಕ್ರಮದಲ್ಲಿ ಸಾರ್ವತ್ರಿಕ ಮಾನವೀಯ ಮೌಲ್ಯಗಳ ಕುರಿತು ರಾಷ್ಟ್ರೀಯ ಮಟ್ಟದಲ್ಲಿ ಇಂಜಿನಿಯರಿಂಗ್ ಶಿಕ್ಷಣದ ಭೋಧಕರಿಗೆ ಕಾರ್ಯಾಗಾರ ನಡೆಯುತ್ತಿದ್ದು, ರಾಜಸ್ಥಾನ, ಮಧ್ಯಪ್ರದೇಶ, ತಮಿಳುನಾಡು, ಕೇರಳ, ಸಿಕ್ಕಿಂ, ಬಿಹಾರ, ಆಂಧ್ರಪ್ರದೇಶ ಹಾಗೂ ಕರ್ನಾಟಕದ ವಿವಿಧ ಭಾಗಗಳಿಂದ ಸುಮಾರು 130 ಕ್ಕೂ ಹೆಚ್ಚು ಭೋಧಕರು ಭಾಗವಹಿಸಿದ್ದಾರೆ. ಬೆಂಗಳೂರಿನ ರಾಷ್ಟ್ರೀಯ ವಿದ್ಯಾಲಯ (ಆರ್ ವಿ) ಇಂಜಿನಿಯರಿಂಗ್ ಕಾಲೇಜು ಹಾಗೂ ಮೈಸೂರಿನ ವಿದ್ಯಾವರ್ಧಕ ತಾಂತ್ರಿಕ ಮಹಾವಿದ್ಯಾಲಯ ಕರ್ನಾಟಕದ ಎಐಸಿಟಿಇ ಅನುಮೋದಿತ ನೋಡಲ್ ಸೆಂಟರ್‌ಗಳಾಗಿ ಮೇಲಿನ ತರಬೇತಿ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು.

ವಿದ್ಯಾವರ್ಧಕ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ ಸದಾಶಿವೇಗೌಡ ಮಾತನಾಡಿ, ಈಗಾಗಲೇ 3 ದಿನಗಳ ಕಾರ್ಯಾಗಾರವನ್ನು ಕಳೆದ ವರ್ಷದಲ್ಲಿ ನಡೆಸಿದ್ದು, ಇದು ಅದರ ಮುಂದುವರೆದ ಭಾಗವಾಗಿದೆ. ಶಿಕ್ಷಕರು ಪ್ರತಿ ದೇಶದ ಅಮೂಲ್ಯ ಸಂಪತ್ತಾದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ತರಬೇತಿ ಕೊಡುವುದರ ಜೊತೆಗೆ ಅವರಲ್ಲಿ ಮಾನವೀಯ ಮೌಲ್ಯಗಳನ್ನು ಬಿತ್ತುವ ಕೆಲಸ ಮಾಡಬೇಕಾಗಿದೆ, ಅದರ ಅಂಗವಾಗಿ ಮೊದಲು ಶಿಕ್ಷಕರನ್ನು ತರಬೇತಿಗೊಳಿಸಿ ಅದನ್ನು ಆಚರಿಸುವ ಕಾರ್ಯಕ್ಕೆ ಅಣಿಮಾಡಲಾಗುತ್ತದೆ ಎಂದು ಕಾರ್ಯಕ್ರಮದ ರೂಪುರೇಷಗಳ ಬಗ್ಗೆ ತಿಳಿಸಿದರು.



ಇದೇ ಸಂದರ್ಭದಲ್ಲಿ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕರಾದ ಗುಂಡಪ್ಪ ಗೌಡ, ಕಾರ್ಯದರ್ಶಿ ಪಿ. ವಿಶ್ವನಾಥ್, ಖಜಾಂಜಿ ಶ್ರೀಶೈಲ ರಾಮಣ್ಣವರ್, ಪ್ರಾಂಶುಪಾಲರಾದ ಡಾ. ಬಿ ಸದಾಶಿವೇಗೌಡ ಹಾಗೂ ಪ್ರಧ್ಯಾಪಕರಾದ ಡಾ. ಆಯೇಷಾ ತರನ್ನುಮ್ ಹಾಗೂ ಎಐಸಿಟಿಇ ತರಬೇತಿ ಸಮಿತಿಯ ಪದಾಧಿಕಾರಿಗಳು ಇದ್ದರು.

# ಮಕ್ಕಳಿಗೆ ಶಿಕ್ಷಣದ ಜೊತೆಗೆ ಕ್ರೀಡೆ ಅಗತ್ಯ

**ರಾಮನಗರ:** ಕ್ರೀಡೆಗಳನ್ನು ಆಡುವುದರಿಂದ ಮಾನಸಿಕ ಹಾಗೂ ದೈಹಿಕ ಸಾಮರ್ಥ್ಯಗಳನ್ನು ಕಾಪಾಡಿಕೊಳ್ಳಬಹುದು. ಆದ್ದರಿಂದ ಪ್ರತಿಯೊಬ್ಬರೂ ಕೂಡ ಕ್ರೀಡೆಯಲ್ಲಿ ಭಾಗವಹಿಸುವಂತೆ ರಾಮನಗರ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸತೀಶ್ ಅವರು ತಿಳಿಸಿದರು.

ಅವರು ಡಿ. 9ರ ಮಂಗಳವಾರ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ರಾಮನಗರ ಜಿಲ್ಲಾ ಮಟ್ಟದ ಗ್ರಾಮೀಣ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮಕ್ಕಳು ಆನ್ ಲೈನ್ ಕ್ರೀಡೆಗಳಲ್ಲಿ ಆಸಕ್ತಿ ವಹಿಸುತ್ತಿದ್ದಾರೆ. ಯುವ ಪೀಳಿಗೆಯು ಗ್ರಾಮೀಣ ಕ್ರೀಡೆಗಳನ್ನು ಆಡಬೇಕು ಹಾಗೂ ಮುಂದಿನ ಪೀಳಿಗೆಯವರೆಗೆ ಬೆಳೆಸಬೇಕು, ಕ್ರೀಡಾಪಟುಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ವಿಜೇತರಾದರೇ ಕೆಲವೊಮ್ಮೆ ಸರ್ಕಾರಿ ಉದ್ಯೋಗಗಳನ್ನು ಸಹ ಪಡೆಯಬಹುದು ಎಂದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಅನಿತಾ ಅವರು ಮಾತನಾಡಿ, ಜಿಲ್ಲಾ ಮಟ್ಟದ ಗ್ರಾಮೀಣ ಕ್ರೀಡಾಕೂಟದಲ್ಲಿ ಗುಂಪು ಕ್ರೀಡೆಗಳಾದ ಕಬ್ಬಡಿ, ಖೋಖೋ, ವಾಲಿಬಾಲ್ ಕ್ರೀಡೆಗಳನ್ನು ಆಯೋಜನೆ ಮಾಡಲಾಗಿದೆ. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ಉತ್ತಮ ಮಟ್ಟದ ವ್ಯಕ್ತಿತ್ವ ರೂಪಿಸುತ್ತದೆ ಎಂದು ತಿಳಿಸಿದರು. ಜ್ಯೋತಿ ಭಾಪುಲೆ ಸಂಘದ ಅಧ್ಯಕ್ಷರು, ದೈಹಿಕ ಶಿಕ್ಷಕರು, ಕ್ರೀಡಾಪಟುಗಳು ಹಾಗೂ ಇತರರು ಉಪಸ್ಥಿತರಿದ್ದರು.



# Jjm ನಡಿ 1000ಕ್ಕಿಂತ ಹೆಚ್ಚು ಗ್ರಾಮಗಳ ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿವೆ

**ಚಿಕ್ಕಬಳ್ಳಾಪುರ:** ಗ್ರಾಮೀಣ ಪ್ರದೇಶದ ಪ್ರತಿ ಮನೆಗೂ ಶುದ್ಧ ಕುಡಿಯುವ ನೀರನ್ನು ಪೂರೈಸಲು ಉದ್ದೇಶಿಸಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜಲಜೀವನ್ ಮಿಷನ್ ಯೋಜನೆ ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು, ಯೋಜನೆಯನ್ನು ಸಾಕಾರಗೊಳಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕೆಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಅವರು ಮಂಗಳವಾರ ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲ್ಲೂಕಿನ ಮಳಮಾಚನಹಳ್ಳಿ ಮತ್ತಿತರ ಗ್ರಾಮಗಳಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ಕಾಮಗಾರಿಗಳಿಗೆ ಭೂಮಿ ಪೂಜೆ ನರವೇರಿಸಿ ಮಾತನಾಡಿದರು.

ಜಲಜೀವನ್ ಮಿಷನ್ ಯೋಜನೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಗತಿಯಲ್ಲಿದೆ. ಜಿಲ್ಲೆಯ 1600 ಕ್ಕೂ ಹೆಚ್ಚು ಗ್ರಾಮಗಳಲ್ಲಿ ಜಲಜೀವನ್ ಮಿಷನ್ ನಡಿ ಪ್ರತಿ ಮನೆಗೆ ನಳ ಸಂಪರ್ಕ ಒದಗಿಸುವ ಗುರಿ ಇದೆ. ಜೂನ್ 2023 ರಲ್ಲಿ ಕೇವಲ 600 ಗ್ರಾಮಗಳಲ್ಲಿ ಕಾಮಗಾರಿಗೆ ಟೆಂಡರ್ ಆಗಿತ್ತು. ಜೂನ್ ನಂತರದಿಂದ ಇಲ್ಲಿಯವರೆಗೆ 950 ಗ್ರಾಮಗಳಿಗೆ ಟೆಂಡರ್ ಕರೆಯಲಾಗಿದೆ. ರಾಜ್ಯದಲ್ಲಿ ಹೊಸ ಸರ್ಕಾರ ರಚನೆಯಾದ ಮೇಲೆ ಜಲಜೀವನ್ ಮಿಷನ್ ಕಾಮಗಾರಿಗಳ ವೇಗವನ್ನು ಹೆಚ್ಚಿಸಲಾಗಿದೆ. ಯೋಜನೆಯ ಪ್ರಯೋಜನವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು. ಇದಕ್ಕೆ ಗ್ರಾಮ ಪಂಚಾಯಿತಿ ಸದಸ್ಯರು, ಪಿಡಿಓಗಳು ಆಸಕ್ತಿ ವಹಿಸಿ ಹೆಚ್ಚಿನ ಸಹಕಾರ ನೀಡಬೇಕೆಂದರು.

ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ 69 ಗ್ರಾಮಗಳಲ್ಲಿ 4,305 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಇಂದು ಚಾಲನೆ ನೀಡಲಾಗಿದೆ ಎಂದರು.



23 ಸಾವಿರ ಕೋಟಿ ವೆಚ್ಚದ ಎತ್ತಿನ ಹೊಳೆ ಯೋಜನೆಯ ನೀರನ್ನು ಹರಿಸುವ ಕುರಿತು ಈಗಾಗಲೇ ಪ್ರಾಯೋಗಿಕವಾಗಿ ಪರೀಕ್ಷೆ ಮಾಡಲಾಗಿದೆ. ಈಗಾಗಲೇ ಪೈಪ್ ಲೈನ್ ಯೋಜನೆಯನ್ನು ಅಳವಡಿಸತಕ್ಕಂತ ಕಾಮಗಾರಿಗಳಾಗುತ್ತಿವೆ.ಈ ಯೋಜನೆಯಡಿ ಮುಂದೆ ಜಿಲ್ಲೆಯ ಯಾವವ ತಾಲ್ಲೂಕಿಗೆ ಎಲ್ಲಿಂದ ನೀರನ್ನು ತರುವುದು ಮತ್ತು ಶೇಖರಣೆ ಮಾಡುವುದರ ಕಾಮಗಾರಿಗಳು ಪ್ರಗತಿ ಹಂತದಲ್ಲಿವೆ ಇದರ ಜೊತೆಗೆ ಪ್ರತಿಯೊಂದು ಮನೆ ಮನೆಗೂ ಶುದ್ಧ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ಜಲ್ ಜೀವನ್ ಯೋಜನೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಮುಂದಾಗಿದ್ದೇವೆ. ಹೊಸದಾಗಿ ಪೈಪ್ ಗಳನ್ನು ಅಳವಡಿಸುವುದು, ಹಾಲಿ ಇರುವ ಬೋರ್ ವೆಲ್ ಗಳಲ್ಲಿ ನೀರಿನ ಕೊರತೆಯಾದಂತಹ ಸಂಧರ್ಭದಲ್ಲಿ ಹೊಸದಾಗಿ ಬೋರ್ ವೆಲ್ ಕೊರಿಯುವಂತಹದ್ದು ಈ ಯೋಜನೆಯಲ್ಲಿ ಸೇರಿದೆ ಎಂದರು

ಜಲ ಜೀವನ್ ಮಿಷನ್ ಯೋಜನೆಯಲ್ಲಿ ಪ್ರತಿಯೊಂದು ಮನೆಗೆ ನಳ ಮುಖಾಂತರ ನೀರನ್ನು ಕೊಡುವುದು ಒಂದು ಹಂತದಲ್ಲಿ ಸಮಸ್ಯೆಯನ್ನು ನೀಗಿಸುತ್ತದೆ. ಇದು ರಾಷ್ಟ್ರ ವ್ಯಾಪ್ತಿಯಲ್ಲಿ ರೂಪಿಸಿರುವಂತಹ ಕಾರ್ಯಕ್ರಮ. ಪ್ರತಿಯೊಂದು ಮನೆಗಳ ನಳಗಳ ಮೂಲಕ ನೀರಿನ ತೊಟ್ಟಿ ಇದ್ದವರು ಹಾಗೂ ಇಲ್ಲದವರು ನೀರಿನ ತೊಟ್ಟಿಗಳಿಗೆ ಪೈಪ್ ಕನೆಕ್ಷನ್ ಗೆ ಮೀಟರ್ ಅಳವಡಿಸಿಕೊಳ್ಳಬೇಕು. ಊರಿಂದ ಹೊರಗಡೆಯಿರುವಂತಹ ಮನೆಗಳನ್ನು ಈ ಯೋಜನೆಗೆ ಸೇರಿಸಬೇಕು ಎಂದರು. 1000ಕ್ಕಿಂತ ಹೆಚ್ಚು ಗ್ರಾಮಗಳ ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿವೆ ಇನ್ನೂ ಪೈಕಿ 150 ಗ್ರಾಮಗಳಲ್ಲಿನ ಕಾಮಗಾರಿಗಳು ಚಾಲನೆ ಗೊಳ್ಳ ಬೇಕಿದ್ದು,ಸದ್ಯದಲ್ಲೇ ಅಲ್ಲಿಯೂ ಸಹ ಚಾಲನೆ ನೀಡಲಾಗುವುದು ಎಂದರು ಈ ಯೋಜನೆಗೆ ಎಲ್ಲಾ ಗ್ರಾಮ ಪಂಚಾಯತಿಯ ಅಧ್ಯಕ್ಷರು ಮತ್ತು ಇತರ ಪದಾಧಿಕಾರಿಗಳು, ನಗರಸಭಾ ಸದಸ್ಯರು, ಸ್ಥಳೀಯ ಜನಪ್ರತಿನಿಧಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಹಕಾರ ನೀಡಬೇಕು ಎಂದರು.

ಮಳಮಾಚನ ಹಳ್ಳಿ ಗ್ರಾಮದಲ್ಲಿನ ನಿವೇಶನ ರಹಿತರಲ್ಲಿ 48 ಜನಕ್ಕೆ ಇಂದು ನಿವೇಶನ ಹಕ್ಕುಪತ್ರಗಳನ್ನು ವಿತರಣೆ ಮಾಡಿದ್ದೇವೆ, ಶಿಡ್ಲಘಟ್ಟ ನಗರದಲ್ಲಿ ಅಂಬೇಡ್ಕರ್ ಭವನವನ್ನು ನಗರೋತ್ಥಾನ ಯೋಜನೆಯಡಿ 4ಕೋಟಿ ವೆಚ್ಚದಲ್ಲಿ ನಿರ್ಮಾಣಕ್ಕೆ ಕ್ರಮ ವಹಿಸಲಾಗುತ್ತದೆ ಎಂದರು. ಶಾಸಕರಾದ ರವಿಕುಮಾರ್ ಅವರು ಮಾತನಾಡಿ, ಶಿಡ್ಲಘಟ್ಟ ಕ್ಷೇತ್ರದ ಮಳಮಾಚನಹಳ್ಳಿ ಗ್ರಾಮದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಸುಮಾರು 133 ಗ್ರಾಮಗಳಲ್ಲಿ 76ಕೋಟಿ ವೆಚ್ಚದ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮಾಡಲಾಗಿದೆ ಮತ್ತು ನಿವೇಶನ ರಹಿತ ಹಕ್ಕುಪತ್ರಗಳನ್ನು 48 ಜನಕ್ಕೆ ಸಚಿವರು ವಿತರಿಸಿದ್ದಾರೆ.ಶಿಡ್ಲಘಟ್ಟ ಕ್ಷೇತ್ರದ ಯಾವುದೇ ಸಮಸ್ಯೆಗಳನ್ನು ಸಚಿವರ ಗಮನಕ್ಕೆ ತಂದರೆ ಆ ಸಮಸ್ಯೆಗೆ ಸ್ಪಂದಿಸಿ ಈ ಕ್ಷೇತ್ರವನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಶ್ರಮಿಸುವ ಸಚಿವರಿಗೆ ಅಭಿನಂದನೆಗಳು. ತಾಲೂಕಿನಲ್ಲಿ ಹೈಟೆಕ್ ಮಾರ್ಕೆಟ್ ಮತ್ತು ಯುಜಿಡಿ ಹಾಗೂ ಇನ್ನಿತರ ಹಲವಾರು ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸುತ್ತಿದ್ದಾರೆ ಅವರ ಸಹಕಾರ ನಮ್ಮ ಕ್ಷೇತ್ರದ ಮೇಲಿರಲಿ ಎಂದು ತಿಳಿಸಿದರು. ಈ ವೇಳೆ ನಿವೇಶನ ರಹಿತ ಹಕ್ಕುಪತ್ರಗಳನ್ನು ಗ್ರಾಮದ ಎಲ್ಲ ಫಲಾನುಭವಿಗಳಿಗೆ ಸಚಿವರು ವಿತರಿಸಲಾಯಿತು. ಈ ಸಂದರ್ಭದಲ್ಲಿ ಶಿಡ್ಲಘಟ್ಟ ಕ್ಷೇತ್ರದ ತಹಶೀಲ್ದಾರ್ ಎಮ್.ಎನ್. ಸ್ವಾಮಿ,ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಿ.ಮುನಿರಾಜು, ಮಳಮಾಚನಹಳ್ಳಿಯ ಗ್ರಾ.ಪಂ.ಅಧ್ಯಕ್ಷೆ ಭಾಗ್ಯಮ್ಮ ಪಾಪಣ್ಣ, ಉಪಾಧ್ಯಕ್ಷ ಬಿ.ಕೆ.ಲೋಕೇಶ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಅಧಿಕಾರಿ ಚಂದ್ರಶೇಖರ್, ಆದಿನಾರಾಯಣಪ್ಪ, ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಸುಬ್ಬಾರೆಡ್ಡಿ, ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರ ಕುಮಾರ್, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಲಕ್ಷ್ಮಿ ನಾರಾಯಣ, ಗ್ರಾಮದ ಎಲ್ಲ ಗ್ರಾ.ಪಂ.ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಭಕ್ತರಹಳ್ಳಿಯ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಹಾಗೂ ಎಲ್ಲ ಫಲಾನುಭವಿಗಳು ಹಾಜರಿದ್ದರು.

## ಗೃಹ ರಕ್ಷಕರುಗಳ ನೇಮಕಾತಿ ಪ್ರಕ್ರಿಯೆ

**ಮಂಡ್ಯ:** ಜಿಲ್ಲಾ ಗೃಹರಕ್ಷಕ ದಳದಲ್ಲಿ ಗೃಹರಕ್ಷಕ ಸ್ವಯಂಸೇವಕರ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ. ಜಿಲ್ಲೆಯಲ್ಲಿ 12 ಗೃಹರಕ್ಷಕದಳ ಘಟಕಗಳು (ಮಂಡ್ಯ, ಮದ್ದೂರು, ಕೆ ಎಂ ದೊಡ್ಡಿ, ಮಳವಳ್ಳಿ, ಬೆಳಕವಾಡಿ, ಅರಕೆರೆ, ಶ್ರೀರಂಗಪಟ್ಟಣ, ಕಿಕ್ಕೇರಿ, ನಾಗಮಂಗಲ, ಪಾಂಡವಪುರ, ಕೆ ಆರ್ ಪೇಟೆ ಹಾಗೂ ಮೇಲುಕೋಟೆ) ಕಾರ್ಯನಿರ್ವಹಿಸುತ್ತಿದ್ದು 949 ಮಂದಿ ಗೃಹರಕ್ಷಕರ ಸಂಖ್ಯಾಬಲವನ್ನು ಹೊಂದಿರುತ್ತದೆ. ಪ್ರಸ್ತುತ ಖಾಲಿ ಇರುವ 38 ಸ್ಥಾನಗಳನ್ನು ತುಂಬಿಕೊಳ್ಳುವ ಗೃಹ ರಕ್ಷಕರ ನೇಮಕಾತಿ ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದೆ. ಸಂಸ್ಥೆಗೆ ಸೇರಲು ಕನಿಷ್ಟ ವಿದ್ಯಾರ್ಹತೆ 10ನೇ ತರಗತಿ ಪಾಸ್ ಆಗಿರಬೇಕು. ಸಮಾಜದ ಯಾವುದೇ ಸ್ಥಳದ ವ್ಯಕ್ತಿಯು ಸಂಸ್ಥೆಗೆ ಸೇರಬಹುದು. ವಯೋಮಿತಿ 19 ರಿಂದ 40 ವರ್ಷದವರಾಗಿರಬೇಕು. ಸ್ವಯಂ ಸೇವೆ ಮಾಡಲಿಚ್ಛಿಸುವವರು, ಯಾವುದೇ ವೃತ್ತಿಯಲ್ಲಿರುವವರು, ಸರ್ಕಾರಿ ನೌಕರರು ಗೃಹರಕ್ಷಕದಳ ಸದಸ್ಯತ್ವ ಪಡೆಯಬಹುದಾಗಿದೆ. ಗೃಹರಕ್ಷಕರಿಗೆ ಕರ್ತವ್ಯದ ಸಮಯದಲ್ಲಿ ಮತ್ತು ವಾರದ ಕವಾಯತುಗಳ ಹಾಜರಿಗೆ ಗೌರವಧನ ನೀಡಲಾಗುತ್ತದೆ. ಅದಕ್ಕಾಗಿ ಗೃಹರಕ್ಷಕರಾಗ ಬಯಸುವವರು ಕಡ್ಡಾಯವಾಗಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ಖಾತೆ ಹೊಂದಿರಬೇಕಾಗಿರುತ್ತದೆ. ಗೃಹರಕ್ಷಕ ಸದಸ್ಯರಾದವರಿಗೆ ಸ್ಥಳೀಯವಾಗಿ ಮೂಲ ತರಬೇತಿ ನೀಡಲಾಗುತ್ತದೆ ಹಾಗೂ ಹೆಚ್ಚಿನ ತರಬೇತಿಗೆ ಬೆಂಗಳೂರಿನಲ್ಲಿರುವ ಗೃಹರಕ್ಷಕದಳ ಮತ್ತು ಪೌರರಕ್ಷಣಾ ಅಕಾಡೆಮಿಯಲ್ಲಿ ನೀಡುವ ವಿಪತ್ತು ನಿರ್ವಹಣೆ ನಿಸ್ತಂತು ಚಾಲನಾ ತರಬೇತಿ, ಲಘು ಮತ್ತು ಪ್ರವಾಹ ರಕ್ಷಣೆ ಪ್ರಥಮ ಚಿಕಿತ್ಸೆ, ಮುಂದಾಳತ್ವ ತರಬೇತಿ, ಅಗ್ನಿಶಮನ ತರಬೇತಿ ವಿವಿಧ ತರಬೇತಿಗಳಿಗೆ ನಿಯೋಜಿಸಲಾಗುವುದು. ಈ ಸಂದರ್ಭದಲ್ಲಿ ಹಾಗೂ ಪ್ರಯಾಣ ವೆಚ್ಚ ಹಾಗೂ ತರಬೇತಿ ಭತ್ಯೆಗಳನ್ನು ಗೃಹರಕ್ಷಕ ದಳ ಸಂಸ್ಥೆಯಿಂದ ವೆಚ್ಚ ಬೆಳೆಸಲಾಗುತ್ತದೆ. ಈಗಾಗಲೇ ಸೇವೆಯಲ್ಲಿದ್ದು, ವಿವಿಧ ಪ್ರಕರಣಗಳ ಅಡಿಯಲ್ಲಿ ಸಮಲೋಪನೆಗೊಂಡಿರುವ ಗೃಹರಕ್ಷಕರಿಗೆ ಪುನಃ ಅರ್ಜಿ ವಿತರಿಸಲಾಗುವುದಿಲ್ಲ. ಗೃಹರಕ್ಷಕ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ ಎಂದು ಗೃಹರಕ್ಷಕ ದಳದ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧೆಡೆ ನೀರಿನ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಉತ್ತರ-2-1, ದಕ್ಷಿಣ-2-1, ನೈರುತ್ಯ -1, ನೈರುತ್ಯ - 4, ಪೂರ್ವ -1-2, ಪೂರ್ವ -2-2, ಆಗ್ನೇಯ - 2, ಆಗ್ನೇಯ ? 5, ಪಶ್ಚಿಮ-1-2 ಮತ್ತು ಪಶ್ಚಿಮ-2-2, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಜನವರಿ 11 ರಂದು ಬೆಳಿಗ್ಗೆ 9.30 ಗಂಟೆಯಿಂದ 11 ಗಂಟೆಯವರೆಗೆ ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ. ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂಟೌನ್, ಅಟ್ಟೂರು, ಜೆ.ಪಿ.ನಗರ-2, ಕೊತ್ತನೂರು ದಿಣ್ಣೆ, ವಿಜಯಬ್ಯಾಂಕ್ ಕಾಲೋನಿ, ಅರಕೆರೆ ಮೈಕೋ ಲೇಔಟ್, ಜೆ.ಪಿ.ನಗರ ? 13, ಜಯನಗರ 4ನೇ ಟಿ ಬ್ಲಾಕ್, ಜಯನಗರ 4ನೇ ಬ್ಲಾಕ್, ಹೊಂಬೇಗೌಡನಗರ, ಬೈರಸಂದ್ರ, ಎಲ್.ಎಲ್.ಆರ್, ಚಿಕ್ಕಲಾಲ್‌ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ -1, ಕತ್ರಿಗುಪ್ಪೆ, ಹೊಸಕೆರೆಹಳ್ಳಿ, ದೇವಗಿರಿ-1, ಇಟ್ಟಮಡು, ಬನಗಿರಿನಗರ, ಎ.ನಾರಾಯಣಪುರ, ದೊಡ್ಡನಕುಂದಿ, ವಿಜ್ಞಾನನಗರ, ಬಾಣಸವಾಡಿ, ಓ.ಎಂ.ಬಿ.ಆರ್., ಲಿಂಗರಾಜಪುರಂ, ಕಸ್ತೂರಿನಗರ, ಹಲಸೂರು, ದೊಮ್ಮಲೂರು, ಮಾರತ್ ಹಳ್ಳಿ, ಕೋರಮಂಗಲ- 12, ವಿಜಯನಗರ ಓ.ಎಚ್.ಟಿ, ಮೂಡಲಪಾಳ್ಯ, ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್.ಎಂ.ವಿ ಲೇಔಟ್, ಮೂಡಲಪಾಳ್ಯ ಸೇವಾ ಠಾಣೆಗಳಲ್ಲಿ ಅದಾಲತ್ ನಡೆಯಲಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್‌ಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾನೂನು ಸಲಹೆಗಾರರು / ಸಮಾಲೋಚಕರ ಹುದ್ದೆಗೆ ಅರ್ಜಿ

**ಬೆಂಗಳೂರು:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತಾಲಯದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾನೂನು ಸಲಹೆಗಾರರು / ಸಮಾಲೋಚಕರ ಸೇವೆಯನ್ನು ಪಡೆಯಲು ಅರ್ಹ ವಕೀಲರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕಾನೂನು ಸಲಹೆಗಾರರ 01 ಹುದ್ದೆಗೆ, ಅರ್ಜಿ ಸಲ್ಲಿಸಲು ಕೆ.ಎ.ಟಿ/ ಉಚ್ಚನ್ಯಾಯಾಲಯದಲ್ಲಿ ವಕೀಲರಾಗಿ ಕನಿಷ್ಠ 15 ರಿಂದ 20 ವರ್ಷಗಳ ಅನುಭವ ಹೊಂದಿರಬೇಕು. ಕಾನೂನು ಸಮಾಲೋಚಕರ 02 ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಕೆ.ಎ.ಟಿ/ ಉಚ್ಚನ್ಯಾಯಾಲಯದಲ್ಲಿ ವಕೀಲರಾಗಿ ಕನಿಷ್ಠ 3 ರಿಂದ 10 ವರ್ಷಗಳ ಅನುಭವ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ಜಾಲತಾಣ https://hfwcom.karnataka.gov.in ಗೆ ಸಂಪರ್ಕಿಸಬಹುದಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರ ಪ್ರವಾಸ

**ಬೆಂಗಳೂರು:** ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್ ಪಾಟೀಲ್ ಅವರು ಜನವರಿ 10 ಮತ್ತು 11 ರಂದು ನವದೆಹಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### ಕೆಡಿಪಿ ಸಭೆಗೆ ಗೈರಾಗುವ ಅಧಿಕಾರಿಗಳಿಗೆ ನೋಟಿಸ್ | ತಾಲೂಕು ಪಂಚಾಯಿತಿ ಇಒ ವಸಂತಕುಮಾರ್ ಸೂಚನೆ

# ಉದ್ಯೋಗಖಾತ್ರಿ ಪ್ರಗತಿಯಲ್ಲಿ ಕೆಂಕೆರೆ ಗ್ರಾಪಂ ತೀರಾ ಹಿನ್ನಡೆ

**ಹುಳಿಯಾರು:** ಪಂಚಾಯ್ತಿ ಮಟ್ಟದಲ್ಲಿ ನಡೆಯುವ ತ್ರೈಮಾಸಿಕ ಕೆಡಿಪಿ ಸಭೆಗೆ ಗೈರಾಗುವ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಕೆಂಕೆರೆ ಗ್ರಾಪಂ ಪಿಡಿಒ ಶೇಷಗಿರಿ ಅವರಿಗೆ ತಾಪಂ ಇಒ ವಸಂತಕುಮಾರ್ ಅವರು ಸೂಚನೆ ನೀಡಿದರು. ಅಲ್ಲದೆ ಹೀಗೆ ಪದೇ ಪದೇ ಸಭೆಗೆ ಗೈರಾಗುವ ಅಧಿಕಾರಿಗಳ ಮೇಲೆ ಕ್ರಮಕ್ಕೆ ಮೇಲಧಿಕಾರಿಗಳಿಗೆ ಪತ್ರ ಬರೆಯುವುದಾಗಿ ಎಚ್ಚರಿಕೆ ನೀಡಿದರು.

ಹುಳಿಯಾರು ಹೋಬಳಿಯ ಕೆಂಕೆರೆ ಗ್ರಾಮ ಪಂಚಾಯ್ತಿಯಲ್ಲಿ ಮಂಗಳವಾರ ಏರ್ಪಡಿಸಿದ್ದ ಕೆಡಿಪಿ ಸಭೆಯಲ್ಲಿ ಅವರು ತಿಳಿಸಿದರು.

ಉದ್ಯೋಗಖಾತ್ರಿ ಪ್ರಗತಿಯಲ್ಲಿ ಕೆಂಕೆರೆ ಗ್ರಾಮ ಪಂಚಾಯ್ತಿ ತೀರಾ ಹಿಂದಿದ್ದು ಉಳಿದ ಪಂಚಾಯ್ತಿಯಂತೆ ಪ್ರಗತಿ ಸಾಧಿಸಲು ತಿಳಿಸಿದರು. ಇದಕ್ಕೆ ಗ್ರಾಪಂ ಸದಸ್ಯರು ಕೆಲಸ ಮಾಡಲು ಕೆಲಸಗಾರರೇ ಸಿಗುವುದಿಲ್ಲ. ಜೆಸಿಬಿಯಲ್ಲಿ ಮಾಡಿಸಲು ಅನುಮತಿ ನೀಡಿದರೆ ಎಲ್ಲರೂ ಮಾಡುತ್ತಾರೆ ಎಂದು ಕೇಳಿಕೊಂಡರು.




ಸಮುದಾಯದ ಕೆಲಸಗಳನ್ನು ಮಾಡಲು ಕೆಲಸಗಾರರು ಸಿಗುತ್ತಾರೆ, ರೈತರ ಜಮೀನಿನಲ್ಲಿ ಮಾಡಲು ಸಿಗೋದಿಲ್ಲ ಅಂದರೆ ಏನರ್ಥ ಎಂದು ಪ್ರಶ್ನಿಸಿದರಲ್ಲದೆ 15 ನೇ ಹಣಕಾಸು ಯೋಜನೆಯಲ್ಲಿ ವಾರ್ಷಿಕ 30 ಲಕ್ಷ ರೂ. ಬರುತ್ತದೆ. ಇದರಲ್ಲಿ ಕುಡಿಯುವ ನೀರಿನ ಕಾಮಗಾರಿಗೆ ಖರ್ಚಾಗುತ್ತೆ. ಗ್ರಾಪಂ ಸದಸ್ಯರು ತಮ್ಮ ಊರಿಗೆ ನೆನಪಿನಲ್ಲಿ ಉಳಿಯುವ ಭವನ, ಕಟ್ಟಡ, ರಸ್ತೆ, ಚರಂಡಿ ಮಾಡಬೇಕೆಂದಿದ್ದರೆ ನರೇಗಾ ಸದ್ಬಳಕೆಗೆ ಮುಂದಾಗಬೇಕು ಎಂದು ಕಿವಿ ಮಾತು ಹೇಳಿದರು.

ಅಂಗನವಾಡಿ ಕಾರ್ಯಕರ್ತೆಯರು ಮಧ್ಯಾಹ್ನಕ್ಕೆ ಮಕ್ಕಳನ್ನು ಕಳುಹಿಸಿ ಮನೆಗೆ ಹೋಗುತ್ತಾರೆ. ಸಂಜೆ 4 ಗಂಟೆಯವರೆವಿಗೂ ಕೇಂದ್ರ ನಡೆಸುತ್ತಿಲ್ಲ ಎಂದು ಕೆಲ ಸದಸ್ಯರು ಆರೋಪಿಸಿದರು. ಕೆಂಕೆರೆ ಗ್ರಾಮದಲ್ಲಿ ಗರ್ಭಿಣಿಯರು ಕೇಂದ್ರಕ್ಕೆ ಬಂದು ಬಿಸಿಯೂಟ ಮಾಡುತ್ತಿಲ್ಲ. ಅವರ ಮನವೊಲಿಸಿ ಶೇ.100 ಪ್ರಗತಿ ಸಾಧಿಸುವಂತೆ ತಿಳಿಸಿದರು. ಇದಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕಿ ಲಕ್ಷ್ಮಮ್ಮ ಅವರು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಬರದಲೇಪಾಳ್ಯದ ರಸ್ತೆಯಲ್ಲಿ ಮೂರ್‍ನಲ್ಕು ವಿದ್ಯುತ್ ಕಂಬಗಳು ವಾಲಿದ್ದು ಆಗಲೋ ಈಗಲೋ ಬೀಳುವಂತಿದ್ದು ಸರಿಪಡಿಸುವಂತೆ ಹಾಗೂ ಕಂಪನಹಳ್ಳಿಯಲ್ಲಿಯಲ್ಲಿ ಕೆಲ ಕಂಬಗಳು ಶಿಥಿಲವಾಗಿದ್ದು ಬದಲಾಯಿಸುವಂತೆ ಸದಸ್ಯರು ಕೇಳಿಕೊಂಡರು. ಕೆಲ ಹಳ್ಳಿಗಳಲ್ಲಿ ಹಗಲಲ್ಲೂ ಬೀದಿ ದೀಪಗಳು ಉರಿಯುತ್ತಿದ್ದು ಬೆಳಗ್ಗೆ ಆಫ್ ಮಾಡುವಂತೆ ಮಾಡುವಂತೆ ಹೇಳಿದರು. ಇದಕ್ಕೆ ಬೆಸ್ಕಾಂ ಎಸ್‌ಒ ರಘುರಾಂ ಅವರು ಪ್ರತ್ಯೇಕ ವೈರಿಂಗ್ ಹಾಗೂ ಮೀಟರ್ ಅಳವಡಿಸಬೇಕಿಸದ್ದು ಇದರ ಬಾಬ್ತು ಹಣ ಪಂಚಾಯ್ತಿ ಭರಿಸಬೇಕು ಎಂದರು. ಇದಕ್ಕೆ ಇಒ ಅವರು 15 ನೇ ಹಣಕಾಸು ಹಣದಲ್ಲಿ ಮಾಡಿಸುವಂತೆ ಪಿಡಿಒ ಅವರಿಗೆ ಸೂಚಿಸಿದರು.

ಕೃಷಿ ಹಾಗೂ ಅರಣ್ಯ ಇಲಾಖೆಗಳು ಉದ್ಯೋಗಖಾತ್ರಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿಲ್ಲ ಎಂದು ಇಒ ಆಕ್ಷೇಪ ವ್ಯಕ್ತಪಡಿಸಿದರು. ಇದಕ್ಕೆ ಅರಣ್ಯ ಇಲಾಖೆಯ ನವೀನ್ ಅವರು ತಾಲೂಕಿನಲ್ಲಿ ಕೇವಲ 20 ಸಾವಿರ ಸಸಿಗಳನ್ನು ಮಾತ್ರ ಬೆಳೆಸುತ್ತಿದ್ದು ಒಂದೊಂದು ಪಂಚಾಯ್ತಿಗೆ ಏಳುನೂರರಿಂದ ಎಂಟುನೂರು ಸಸಿಗಳನ್ನು ಮಾತ್ರ ಕೊಡಬಹುದಾಗಿದೆ ಎಂದು ಅಸಾಯಕತೆ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಯಾಗಿ ಸಸಿ ಬೆಳೆಸಲು ಹಣದ ಕೊರತೆಯಿಲ್ಲ ನಿಮಗೆ ಎಷ್ಟು ಲಕ್ಷ ಬೆಳೆಸಲು ಸ್ಥಳವಕಾಶ ಇದೆಯೋ ಅಷ್ಟು ಗಿಡಗಳನ್ನು ಬೆಳಸಬಹುದಾಗಿದ್ದು ಇಲಾಖಾ ಮುಖ್ಯಸ್ಥರ ಜೊತೆ ಚರ್ಚಿಸಿ ಹೆಚ್ಚು ಸಸಿಗಳನ್ನು ಬೆಳೆಸುವುದಾಗಿ ತಿಳಿಸಿದರು.

ಗ್ರಾಪಂ ಅಧ್ಯಕ್ಷೆ ಗಂಗಮ್ಮ, ಉಪಾಧ್ಯಕ್ಷೆ ಮಹಾಲಕ್ಷ್ಮಿ, ಸದಸ್ಯರುಗಳಾದ ಕೆ.ಸಿ.ವಿಕಾಸ್, ನಾಗರಾಜು, ಗೌಸ್‌ಪೀರ್, ನವೀನ್‌ಕುಮಾರಿ, ಗಾಯಿತ್ರಮ್ಮ, ಭಾಗ್ಯಮ್ಮ, ಸಹೇರಾಬಾನು ಉಪಸ್ಥಿತರಿದ್ದರು.

### ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ: ಕುಮಾರ ಮಾಹಿತಿ

# ಅನಿಲ ವಿತರಣಾ ಜಾಲದ ಯೋಜನೆಗೆ ಸಿದ್ಧತೆ

**ಮಂಡ್ಯ:** ಜಿಲ್ಲೆಯಲ್ಲಿ ನಗರ ಅನಿಲ ವಿತರಣಾ ಜಾಲದ ಯೋಜನೆಗೆ ಸಿದ್ಧತೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಂಪ್ರೆಸ್ಡ್ ನೈಸರ್ಗಿಕ ಅನಿಲವನ್ನು ಕೊಳವೆಯ ಮೂಲಕ ಗೃಹ ಬಳಕೆಗಾಗಿ, ವಾಣಿಜ್ಯ, ಕೈಗಾರಿಕಾ ಗ್ರಾಹಕರಿಗೆ ಒದಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಕಂಪ್ರೆಸ್ಡ್ ನೈಸರ್ಗಿಕ ಅನಿಲದ ಪೈಪ್ ಲೈನ್ ಕೆಲಸವನ್ನು ಪ್ರಾರಂಭಿಸಲು ಬೇಕಿರುವ ಸ್ಥಳ, ಪೈಪ್ ಲೈನ್ ಅಳವಡಿಕೆ, ಪೈಪ್ ಲೈನ್ ಅಳವಡಿಕೆಯ ನಂತರ ರಸ್ತೆಯನ್ನು ಸರಿಪಡಿಸುವುದು ಸೇರಿದಂತೆ ಇತರೆ ಕೆಲಸಗಳ ಬಗ್ಗೆ ನೋಡಿಕೊಳ್ಳಲು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತುಷಾರಾ ಮಣಿ ಅವರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ ಎಂದರು.

ಕಂಪ್ರೆಸ್ಡ್ ನೈಸರ್ಗಿಕ ಅನಿಲದ ಪೈಪ್ ಲೈನ್ ಸಂಪರ್ಕ ಪಡೆಯುವುದು ಮನೆ ಮಾಲೀಕರ ಐಚ್ಛಿಕ ವಿಷಯವಾಗಿರುತ್ತದೆ ಎಂದರು. ಯೋಜನೆ ಅನುಷ್ಟಾನ ಮಾಡುತ್ತಿರುವ ಸಂಸ್ಥೆಯ ಮುಖ್ಯ ಇಂಜಿನಿಯರ್ ಚರಣ್ ಅವರು ಮಾತನಾಡಿ




ಜಿಲ್ಲೆಯ ಏಳು ನಗರ ಸ್ಥಳೀಯ ಸಂಸ್ಥೆಯ ಪ್ರದೇಶದಲ್ಲಿ ಬರುವ ನಗರಗಳ ಮನೆ-ಮನೆ ಭೇಟಿ ಮಾಡಿ ಸಿ.ಎನ್. ಜಿ ಪೈಪ್ ಲೈನ್ ಅಳವಡಿಕೆಯ ಅನುಕೂಲತೆಯ ಬಗ್ಗೆ ತಿಳಿಸಲಾಗುವುದು. ಎಲ್.ಪಿ. ಜಿ ಹಾಗೂ ಸಿ.ಎನ್ .ಜಿ ಗೆ ಇರುವ ವ್ಯತ್ಯಾಸವನ್ನು ಸಹ ತಿಳಿಸಲಾಗುವುದು ಎಂದರು.

ಜಿಲ್ಲೆಯಲ್ಲಿರುವ 13,54,715 ವಸತಿಗಳನ್ನು ಯೋಜನೆಯಡಿ ಗುರುತಿಸಲಾಗಿದೆ. ಇದಲ್ಲದೇ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಕೈಗಾರಿಕೆಗಳನ್ನು ಸಂಪರ್ಕಿಸಿ ಸಿ.ಎನ್. ಜಿ ಒದಗಿಸುವ ಬಗ್ಗೆ ವಿವರಿಸಲಾಗಿದೆ. ಜಿಲ್ಲೆಯಲ್ಲಿ 4 ಪೆಟ್ರೋಲ್ ಬಂಕ್ ಗಳಲ್ಲಿ ವಾಹನಗಳಿಗೆ ಸಿ.ಎನ್.ಜಿ ಇಂಧನ ಒದಗಿಸಲಾಗುತ್ತಿದೆ.

ಈ ಯೋಜನೆಯಡಿ ಎಲ್ಲಾ ಮುಂಜಗ್ರತಾ ಕ್ರಮಗಳನ್ನು ಕೈಗೊಂಡು ಕಾರ್ಯಕ್ರಮ ಅನುಷ್ಟಾನಗೊಳಿಸಲಾಗುವುದು ಎಂದರು. ನಿವೃತ್ತ ಪೊಲೀಸ್ ಅಧಿಕಾರಿ ಪ್ರಭಾಕರ್ ಸಿಂಧೆ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಗುರುರಾಜ್, ಜಿಲ್ಲಾ ನಗರಭಿವೃದ್ಧಿ ಕೋಶ ಯೋಜನಾ ನಿರ್ದೇಶಕಿ ಎನ್. ವಿ ತುಷಾರಾಮಣಿ, ನಗರ ಸಭೆ ಪೌರಾಯುಕ್ತ ಆರ್ ಮಂಜುನಾಥ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಎಚ್. ಎಸ್ ನಿರ್ಮಲಾ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಸಹಾಯಕ ನಿರ್ದೇಶಕ ಶ್ರೀನಿವಾಸ್ ಸೇರಿದಂತೆ ಇನ್ನಿತರು ಉಪಸ್ಥಿತರಿದ್ದರು.

## ಜಿಲ್ಲೆಯಲ್ಲಿ ತಾಯಿ ಮರಣವನ್ನು ತಡೆಗಟ್ಟಲು ಸಕಲ ಪ್ರಯತ್ನ ನಡೆಸಿ

**ಹೆ**ರಿಗೆಯ ಸಂದರ್ಭದಲ್ಲಿ ತಾಯಿಯ ಮರಣದ ಪ್ರಮಾಣ ಕಡಿಮೆ ಇದೆ. ಸರ್ಕಾರಿ ಹಗೂ ಖಾಸಗಿ ಆಸ್ಪತ್ರೆಗಳಲ್ಲಿ ವೈದ್ಯರು ಹೆರಿಗೆಯ ಸಂದರ್ಭದಲ್ಲಿ ತಾಯಿಯ ಮರಣ ತಡೆಗಟ್ಟಲು ಸಕಲ ಪ್ರಯತ್ನ ನಡೆಸಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಗೆ ಸಂಬಂಧಿಸಿದ ವಿವಿಧ ಕಾರ್ಯಕ್ತಮಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ಜಿಲ್ಲೆಯಲ್ಲಿ 2023ನೇ ಸಾಲಿನ ಅಕ್ಟೋಬರ್ ನಿಂದ ಡಿಸೆಂಬರ್ ತಿಂಗಳಲ್ಲಿ ನಡೆದಿರುವ ತಾಯಿ ಮರಣದ ವರದಿಯನ್ನು ಅವರು ಪರಿಶೀಲಿಸಿದ ನಂತರ ಗಭಿರ್ಣಿಯರಲ್ಲಿ ಸಮಾನ್ಯವಾಗಿ ಹೆರಿಗೆಯ ಸಂದರ್ಭದಲ್ಲಿ ಉಂಟಾಗುವ ಅನಿಮೀಯಾ, ರಕ್ತದ ಒತ್ತಡ ಸೇರಿದಂತೆ ಇನ್ನಿತರ ತೊಂದರೆಗಳ ಬಗ್ಗೆ ಯಾವ ರೀತಿ ಎಚ್ಚರಿಕೆ ವಹಿಸಬೇಕು ಎಂಬುದರ ಬಗ್ಗೆ ವೈದ್ಯರು ಹಾಗೂ ಆಶಾ ಕಾರ್ಯಕರ್ತೆಯರು ಅರಿವು ಮೂಡಿಸಿ. ಗಭಿರ್ಣಿಯರು ವೈದ್ಯರು ನೀಡುವ ಸಲಹೆ ಹಾಗೂ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಎಂದರು.

ಅನಿರೀಕ್ಷಿತ ಭೇಟಿ ನೀಡಿ: ಜಿಲ್ಲೆಯ ಸ್ಕ್ಯಾನಿಂಗ್ ಸೆಂಟರ್, ಕ್ಲಿನಿಕ್ ಹಾಗೂ ಆಸ್ಪತ್ರೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡಬೇಕು. ಪರಿಶೀಲನೆ ನಿರಂತರವಾಗಿ ನಡೆಯಬೇಕು ಎಂದರು.

ನಕಲಿ ವೈದ್ಯರನ್ನು ಪತ್ತೆ ಹಚ್ಚಿ: ನಕಲಿ ವೈದ್ಯರನ್ನು ಆರೋಗ್ಯ ಇಲಾಖೆ ತಮ್ಮಲ್ಲಿ ಇರುವ ಆಶಾ ಕಾರ್ಯಕರ್ತೆಯರು, ವೈದ್ಯಾಧಿಕಾರಿಗಳ ಮೂಲಕ ಪತ್ತೆ ಮಾಡಬಹುದು ಎಂದರು. ಜಿಲ್ಲೆಯಲ್ಲಿ ಅಲೋಪತಿ, ಹೋಮಿಯೋಪತಿ, ಆಯುಷ್ ಚಿಕಿತ್ಸೆ ನೀಡಲು ಪರವಾನಗಿ ಪಡೆದಿರುವ ವೈದ್ಯರು ಅದೇ ರೀತಿಯ ಚಿಕಿತ್ಸೆ ನೀಡಬೇಕು. ಇವುಗಳನ್ನು ಸಮಿತಿ ಭೇಟಿ ನೀಡಿದಾಗ ಪರಿಶೀಲಿಸಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಬೇಕು ಎಂದರು. ಹೃದಯ ವೈಶಾಲ್ಯ ಯೋಜನೆಯಡಿ 35 ಪಿ.ಹೆಚ್.ಸಿಗಳಿಗೆ ಇ.ಸಿ.ಜಿ ಯಂತ್ರವನ್ನು ಒದಗಿಸಲಾಗಿದೆ. ಡಿಸೆಂಬರ್ ಅಂತ್ಯದವರೆಗೆ 1405 ವ್ಯಕ್ತಿಗಳನ್ನು ತಪಾಸಣೆಗೆ ಒಳಪಡಿಸಿದ್ದು, ಅವರಲ್ಲಿ 274 ಮಂದಿಗೆ ಹೃದಯಕ್ಕೆ ಸಂಬಂಧಿಸಿದ ಖಾಯಿಲೆ ಪತ್ತೆ ಆಗಿದ್ದು, ಹೆಚ್ಚಿನ ಚಿಕಿತ್ಸೆ ಪಡೆಯಲು ತಿಳಿಸಲಾಗಿದೆ. ಈ ಯೋಜನೆಯಡಿ ಕೆಲವು ಪಿ.ಹೆಚ್ ಸಿ ಗಳ ಕೆಲಸ ತೃಪ್ತಿಕರವಾಗಿಲ್ಲ. ತಾಲ್ಲೂಕು ವೈದ್ಯಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಪಿ.ಹೆಚ್. ಸಿಗಳಲ್ಲಿ ಹೆಚ್ಚಿನ ತಪಾಸಣೆ ನಡೆಸಿ ಯಂತ್ರವನ್ನು ಸದುಪಯೋಗ ಪಡಿಸಿಕೊಂಡರೆ ಮುಂದಿನ ದಿನಗಳಲ್ಲಿ ಸಿ.ಎಸ್. ಆರ್ ಅನುದಾನದಡಿ ಉಳಿದಿರುವ ಪಿ.ಹೆಚ್.ಸಿ ಗಳಿಗೂ ಇ.ಸಿ.ಜಿ ಯಂತ್ರ ಒದಗಿಸಲು ಸಾಧ್ಯ ಎಂದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಮೋಹನ್, ಜಿಲ್ಲಾ ಸರ್ವೇಕ್ಷಣ ಅಧಿಕಾರಿ ಡಾ ಅನಿಲ್, ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿ ಎಚ್. ಎಸ್ ನಿರ್ಮಲಾ ಹಾಗೂ ಇನ್ನಿತರು ಉಪಸ್ಥಿತರಿದ್ದರು.

# ಕುವೆಂಪು ಕವಿತೆ, ಕಾದಂಬರಿಗಳು ಆಜರಾಮರ

**ಪಿರಿಯಾಪಟ್ಟಣ:** ಕುವೆಂಪು ನಾಡು ಕಂಡ ಶ್ರೇಷ್ಠ ಕವಿ, ಚಿಂತಕ ಮತ್ತು ಸಾಂಸ್ಕೃತಿಕ ರಾಯಭಾರಿಯಾಗಿದ್ದರು ಎಂದು ಬಿಜೆಪಿ ಮುಖಂಡ ಕೌಲನಹಳ್ಳಿ ಸೋಮಶೇಖರ್ ತಿಳಿಸಿದರು

ಪಟ್ಟಣದ ಕೆಂಪೇಗೌಡ ನೌಕರರ ಕ್ಷೇಮಾಭಿವೃದ್ಧಿ ಸಂಘದ ಕಚೇರಿಯಲ್ಲಿ ಏರ್ಪಡಿಸಲಾಗಿದ್ದ ಕುವೆಂಪು ಜಯಂತಿ ಕಾರ್ಯಕ್ರಮ , ಪ್ರತಿಭಾ ಪುರಸ್ಕಾರ , ನಿವೃತ್ತರಿಗೆ ಗೌರವ ಸಮರ್ಪಣೆ ಹಾಗೂ ಸಂಘದ ವತಿಯಿಂದ 2024 ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕುವೆಂಪುರವರು ಜಗತ್ತಿನ ಶ್ರೇಷ್ಠ ಸಾಹಿತಿಗಳಲ್ಲಿ ಒಬ್ಬರಾಗಿದ್ದು ನಾಡು, ನುಡಿ, ಭಾಷೆ ,ಗಡಿ ವಿಚಾರಕ್ಕೆ ಸಂಬಂಧಿಸಿದಂತೆ ಕುವೆಂಪುರವರು ಸಮಾಜದ ಸಾಕ್ಷಿ ಪ್ರಜೆಯಾಗಿಸಿದರು. ಸರ್ವರಿಗೂ ಸಮ ಬಾಳು ಮತ್ತು ಸಮಪಾಲು ಎಂಬ ಧ್ಯೇಯ ವಾಕ್ಯದಡಿ ಸಾಹಿತ್ಯ ಕಾದಂಬರಿಗಳನ್ನು ರಚಿಸಿ ಸಮಾಜದಲ್ಲಿನ ಶೋಷಿತ ಜನಾಂಗದವರ ದ್ವನಿಯಾಗಿದ್ದವರು ಕನ್ನಡ ಸಾಹಿತ್ಯ ಲೋಕದಲ್ಲಿ ಇಂದಿಗೂ ಕುವೆಂಪುರವರ ಕವಿತೆ ಕಾದಂಬರಿಗಳು ಆಜರಾಮರವಾಗಿವೆ ತಮ್ಮ ಕೃತಿಗಳ ಮೂಲಕ ಉತ್ತಮ ಸಂದೇಶಗಳನ್ನು ಸಾರಿದ ಕೀರ್ತಿ ಮತ್ತು ಕನ್ನಡ ಸಾಹಿತ್ಯ ಲೋಕಕ್ಕೆ ಪ್ರಥಮ ಜ್ಞಾನಪೀಠ ಪ್ರಶಸ್ತಿ ದೊರಕಿಸಿಕೊಟ್ಟ ಕೀರ್ತಿ ಕುವೆಂಪುರವರಿಗೆ ಸಲ್ಲುತ್ತದೆ. ಕುವೆಂಪುರವರ ತತ್ವ ಆದರ್ಶಗಳನ್ನು ನಾವೆಲ್ಲರೂ ಜೀವನದಲ್ಲಿ



ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಶಿಕ್ಷಕರಾದ ಕುಮಾರ್ ಮಾತನಾಡಿ ಕುವೆಂಪು ಸಾಹಿತ್ಯ ಕ್ಷೇತ್ರದ ಮೂಲಕ ಗೋಚರಿಕ ತತ್ವಗಳು ಹಾಗೂ ವಿಶ್ವಮಾನವ ಸಂದೇಶ ನೀಡಿದ ಕುವೆಂಪು ಅವರ ತತ್ವ ಆದರ್ಶಗಳು ಪಾಲನೆ ಅಗತ್ಯವಿದೆ. ಕುವೆಂಪುರವರು ಬರಿ ವ್ಯಕ್ತಿಯಾಗಿರಲಿಲ್ಲ ಅವರು ಒಂದು ಶಕ್ತಿ ಇದ್ದಂತೆ. ನಮ್ಮದು ಮನುಜ ಮತವಾಗಬೇಕು ವಿಶ್ವಪಥವಾಗಬೇಕು ಮನುಷ್ಯ ವಿಶ್ವಮಾನವಾನಗಬೇಕು ಎನ್ನುವ ಅವರ ಸಂದೇಶ ನಿಜಕ್ಕೂ ಮಹತ್ವದ. ಇದನ್ನು ಪ್ರತಿಯೊಬ್ಬರೂ ಅರಿಯುವಂತಾಗಬೇಕು ಎಂದು ತಿಳಿಸಿದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ರಾಮಚಂದ್ರ, ನಿವೃತ್ತ ಪೊಲೀಸ್ ಅಧಿಕಾರಿ ಪುಟ್ಟರಾಜು ಹಾಗೂ ಇನ್ನಿತರರು ಮಾತನಾಡಿ ಸಂಘದ ವತಿಯಿಂದ ನಡೆಸಿಕೊಂಡು ಬರುತ್ತಿರುವ ಈ ಕಾರ್ಯಕ್ರಮಗಳು ಅರ್ಥಪೂರ್ಣವಾಗಿದ್ದು ವಿದ್ಯಾರ್ಥಿಗಳಿಗೆ ಪ್ರೇರಕವಾಗಿ ನಿವೃತ್ತರಿಗೆ ಸ್ಪೂರ್ತಿದಾಯಕವಾಗಿ ಹಾಗೂ ಸಾಧಕರಿಗೆ ಚೈತನ್ಯ ತುಂಬುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಶಿವರಾಜ್ , ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮೋಹನ್ , ಸಂಘದ ಅಧ್ಯಕ್ಷ ರಮೇಶ್ ಸೇರಿದಂತೆ ಸುಧಾಕರ್, ಉದಯ್, ಅನಂತು, ಜೆ.ಟಿ ದಿನೇಶ್ ಕುಮಾರ್ ಹಾಗೂ ಸಂಘಟನೆಯ ಎಲ್ಲ ಪದಾಧಿಕಾರಿಗಳು ಮತ್ತು ಸದ್ಯಸರು ಹಾಜರಿದ್ದರು

# ಕರ್ನಾಟಕ ಸೇನಾಪಡೆ ಪ್ರತಿಭಟನೆ

**ಚಾಮರಾಜನಗರ:** ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಳೆದ 127 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ ಛತ್ರಿ ಹಿಡಿದು ಪ್ರತಿಭಟನೆ ನಡೆಸಲಾಯಿತು.

ನಗರದ ಚಾಮರಾಜೇಶ್ವರ ಉದ್ಯಾನವನದ ಮುಂಭಾಗದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ, ರಾಷ್ಟ್ರೀಯ ಹೆದ್ದಾರಿಯಲ್ಲಿ ಛತ್ರಿ ಹಿಡಿದು ಸರ್ಕಾರಗಳು, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ದ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಶ್ರೀನಿವಾಸಗೌಡ ಮಾತನಾಡಿ, ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಳೆದ 127 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ ಛತ್ರಿ ಹಿಡಿದು ಕಾವೇರಿ ನೀರಿನ ವಿಚಾರದಲ್ಲಿ ಸರ್ಕಾರಗಳು, ಕಾವೇರಿ ನೀರು ನಿರ್ವಹಣಾ ಮಂಡಳಿ ಛತ್ರಿ ಆಟ ಆಡುವ ಮೂಲಕ ಕರ್ನಾಟಕದ ಜನತೆಗೆ ಅನ್ಯಾಯ ಮಾಡಿದ್ದಾರೆ ಎಂದು ಆರೋಪಿಸಿ ಪ್ರತಿಭಟನೆ ನಡೆಸಲಾಗಿದೆ ಎಂದರು.

ತಮಿಳುನಾಡಿನಲ್ಲಿ ನೀರು ತುಂಬಿದ್ದರೂ ಕೂಡ ಕಾವೇರಿ ನೀರಿನ ವಿಚಾರದಲ್ಲಿ ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡಿಲ್ಲ. ಕರ್ನಾಟಕ ರಾಜ್ಯದ ಮೇಲೆ ಮಲತಾಯಿಧೋರಣೆ ಅನುಸರಿಸುತ್ತಿದೆ ಎಂದು ದೂರಿದರು.

ರೈತರ ಜೀವನಾಡಿಯಾದ ಕಾವೇರಿ ನೀರನ್ನು ಸಂರಕ್ಷಣೆ ಮಾಡಬೇಕು ಮಳೆ ಅಭಾವದಿಂದ ರಾಜ್ಯದಲ್ಲಿ ಜಲಾಶಯಗಳು ಬರಿದಾಗುತ್ತಿದ್ದು, ಎಲ್ಲತರದ ಬೆಳೆಗಳು ಸಂಪೂರ್ಣ ಒಣಗುತ್ತಿವೆ. ರಾಜ್ಯದಲ್ಲಿ ನೀರಿನ ಅಭಾವ ಇದ್ದು, ಮುಂದಿನ ದಿನಗಳಲ್ಲಿ ತೀವ್ರ ಬರಗಾಲ ಬರಲಿದೆ.ಹೀಗಾಗಿ ಕರ್ನಾಟಕ ಸರ್ಕಾರ ಎಚ್ಚೆತ್ತುಗೊಂಡು ತಮಿಳುನಾಡಿಗೆ ಬಿಟ್ಟಿರುವ ನೀರನ್ನು ನಿಲ್ಲಿಸಬೇಕು. ಕೇಂದ್ರ ಮಧ್ಯಪ್ರವೇಶಿಸಿ ಕರ್ನಾಟಕಕ್ಕೆ ನ್ಯಾಯ ಒದಗಿಸಿ ರಾಜ್ಯದ ಜನತೆಗೆ ನೀರು ಉಳಿಸಬೇಕು .ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದರು. ಪಣ್ಯದಹುಂಡಿ ರಾಜು, ಮಹೇಶ್ ಗೌಡ, ವೀರಭದ್ರ, ಲಿಂಗರಾಜು,ಚಾ.ರಾ.ಕುಮಾರ್, ಮಂಜು, ವೀರಭದ್ರ, ತಾಂಡವ ಮೂರ್ತಿ ಇತರರು ಭಾಗವಹಿಸಿದ್ದರು.



# ರೇಬೀಸ್ ಕಾಯಿಲೆ ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಿ

**ಚಿಕ್ಕಬಳ್ಳಾಪುರ:** ರೇಬೀಸ್ ತೀವ್ರವಾದ ವೈರಲ್ ಸೋಂಕಾಗಿದ್ದು,ಮಾರಣಾಂತಿಕವಾಗಿದೆ. ಇದು ಸಾಂಕ್ರಾಮಿಕ ರೋಗಗಳ ವರ್ಗದಲ್ಲಿ ಬರುತ್ತದೆ ಮತ್ತು ಸಾಕು ಪ್ರಾಣಿಗಳು ಅಥವಾ ಕಾಡು ಪ್ರಾಣಿಗಳಿಂದ ಹರಡುವುದರಿಂದ ಹೆಚ್ಚಿನ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸುವಂತೆ ಸಾರ್ವಜನಿಕರಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಾ|| ಭಾಸ್ಕರ್ ರವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಮಂಗಳವಾರ ಜಿಲ್ಲಾ ಪಂಚಾಯತ್ ಡಾ|| ಹೆಚ್.ನರಸಿಂಹಯ್ಯ ಮಿನಿ ಸಭಾಂಗಣದಲ್ಲಿ ಜರುಗಿದ ರಾಷ್ಟ್ರೀಯ ರೇಬೀಸ್ ನಿಯಂತ್ರಣ ಕಾರ್ಯಕ್ರಮ ಕುರಿತ ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಾನವರಲ್ಲಿ ರೇಬೀಸ್ ಕಾಯಿಲೆಯು ರೇಬೀಸ್ ಸೋಂಕಿತ ಪ್ರಾಣಿಗಳ ಕಡಿತದಿಂದ ಉಂಟಾಗುತ್ತದೆ. ಪ್ರಾಣಿಗಳ ಲಾಲಾರಸದ ಮೂಲಕ ವೈರಸ್ ಹರಡುತ್ತದೆ. ನಾಯಿಗಳು, ಹಸುಗಳು, ಕುದುರೆಗಳು, ಮೇಕೆಗಳು, ಮೊಲಗಳು ಮತ್ತು ಕಾಡು ಪ್ರಾಣಿಗಳಾದ ನರಿಗಳು, ಬಾವಲಿಗಳು ಹಾಗೂ ಕತ್ತೆಕಿರುಬಗಳು ಸೋಂಕಿಗೆ ಒಳಗಾಗಿದ್ದರೆ ರೇಬೀಸ್ ಹರಡಬಹುದು.

**ರೋಗ ಲಕ್ಷಣಗಳು:** ರೇಬೀಸ್ ಲಕ್ಷಣಗಳು ಮತ್ತು ಚಿಹ್ನೆಗಳು ರೋಗದ ಕೊನೆಯ ಹಂತಗಳವರೆಗೂ ಕಂಡುಬರುವುದಿಲ್ಲ. ಮೊದಲು ಕೆಲವು ದಿನಗಳವರೆಗೆ ಸುಸ್ತಾಗುವಿಕೆ, ಕಚ್ಚಿದ ಸ್ಥಳದಲ್ಲಿ ನೋವು, ತಲೆನೋವು, ಗಂಟಲು ನೋವು, ಜ್ವರ ಮತ್ತು ಜುಮ್ಮೆ, ಅತಿಯಾದ ಜೊಲ್ಲು ಸುರಿಸುವುದು, ನುಂಗಲು ತೊಂದರೆ, ನುಂಗಲು ಕಷ್ಟವಾಗುವುದರಿಂದ ನೀರಿನ ಭಯ, ಆತಂಕ, ಗಾಳಿಯ



ಭಯ ಉಂಟಾಗುವ ಲಕ್ಷಣಗಳು ಗೋಚರ ಆಗುತ್ತವೆ ಎಂದರು.

ಕಡಿತ ಭಾಗ (ಗಾಯ)ವನ್ನು ತಕ್ಷಣವೇ ಗಾಯವನ್ನು ಮತ್ತು ಅದರ ಸುತ್ತಲಿನ ಪ್ರದೇಶವನ್ನು ಸಾಕಷ್ಟು ಸಾಬೂನು ಮತ್ತು ನೀರಿನಿಂದ ತೊಳೆಯಿರಿ. ನಾಯಿ ಅಥವಾ ಕಾಡು ಪ್ರಾಣಿಗಳಿಂದ ಕಚ್ಚಿದ್ದರೆ ತಕ್ಷಣವೇ ಂಖಿಗಿ ಲಸಿಕೆಯನ್ನು ಪಡೆಯುವುದು. ಸಾಕುಪ್ರಾಣಿಗಳಿಗೆ ನಿಯಮಿತವಾಗಿ ರೇಬೀಸ್ ವಿರುದ್ಧ ಲಸಿಕೆ ಹಾಕಿಸುವುದು. 3ನೇ ವರ್ಗ ಕಡಿತವಾದಲ್ಲಿ ಇಮ್ಯುನೊಗ್ಲೊಬ್ಯುಲಿನ್ಸ್ ಲಸಿಕೆಯನ್ನು ಜಿಲ್ಲಾ ಆಸ್ಪತ್ರೆ/ಸಾರ್ವಜನಿಕ ಆಸ್ಪತ್ರೆಗಳಲ್ಲಿ ಪಡೆಯಬಹುದು ಎಂದರು.

### ಇಲಿ ಜ್ವರ

ಲೆಪ್ಟೋಸ್ಪೈರೋಸಿಸ್ ಅಥವಾ ಇಲಿ ಜ್ವರ ಎಂಬುದು ಲೆಪ್ಟೋಸ್ಪೈರ ಎಂಬ ಬ್ಯಾಕ್ಟೀರಿಯಾದಿಂದ ಉಂಟಾಗುವ ರೋಗ. ಈ ರೋಗವು ಮಾನವ ಹಾಗೂ ಪಶುಗಳಲ್ಲಿಯೂ ಕಂಡುಬರುತ್ತದೆ ಮತ್ತು ವಿಶ್ವವ್ಯಾಪಿಯಾಗಿದೆ. ಈ ರೋಗವು ಸೋಂಕಿತ ಪ್ರಾಣಿಗಳ ಜೊತೆಗಿನ ನೇರ ಸಂಪರ್ಕದಿಂದ ಹಬ್ಬುತ್ತದೆ. ಇದಲ್ಲದೆ ಪರೋಕ್ಷವಾಗಿ ಕಲುಷಿತ ಆಹಾರ, ಮಣ್ಣು ಮತ್ತು ನೀರಿನ ಸಂಪರ್ಕದಿಂದಲೂ ಸಹ ಹರಡುತ್ತದೆ.

### ರೋಗ ಲಕ್ಷಣಗಳು

ಚಳಿ ಜ್ವರ, ತಲೆನೋವು, ಮಾಂಸಖಂಡಗಳಲ್ಲಿ ನೋವು, ಮೈಕೈ ನೋವು, ತೀವ್ರತರ ರೋಗಗಳಲ್ಲಿ ಜಾಂಡೀಸ್ (ಕಾಮಾಲೆ),ರಕ್ತಸ್ರಾವ, ಮೂತ್ರಪಿಂಡ,ಯಕೃತ್ ವೈಫಲ್ಯದಿಂದ ಮರಣ ಸಂಭವಿಸಬಹುದು, ಚರ್ಮದ ಮೇಲೆ ದದ್ದುಗಳು ಮತ್ತು ದುಗ್ದರಸಗ್ರಂಥಿಗಳ ಊತ ಉಂಟಾಗುವ ಲಕ್ಷಣಗಳು ಕಂಡು ಬರುತ್ತದೆ ಎಂದು ತಿಳಿಸಿದರು.



### ಇಲಿ ಜ್ವರ ನಿಯಂತ್ರಣ ಕ್ರಮಗಳು

ಜಾನುವಾರುಗಳಿಗೆ ವರ್ಷಕ್ಕೊಮ್ಮೆ ಲಸಿಕೆ ಹಾಕುವುದು, ಸಾಕು ಪ್ರಾಣಿಗಳನ್ನು ಸಾಕುವ ಕುಟುಂಬದವರಿಗೆ ಲೆಪ್ಟೋಸ್ಪೈರೋಸಿಸ್ (ಇಲಿ ಜ್ವರ) ಬಗ್ಗೆ ಅರಿವು ಮೂಡಿಸಲು ಕ್ರಮವಹಿಸುವುದು. ಎಲ್ಲಾ ತಾಲ್ಲೂಕು ವ್ಯಾಪ್ತಿಯ ಹಾಲು ಒಕ್ಕೂಟ ಮಹಾಮಂಡಳಿ ರವರ ಸಹಯೋಗದೊಂದಿಗೆ ಜನರಲ್ಲಿ ಲೆಪ್ಟೋಸ್ಪೈರೋಸಿಸ್ ಬಗ್ಗೆ ಅರಿವು ಮೂಡಿಸುವುದು. ಜಾನುವಾರುಗಳನ್ನು ಕೊಟ್ಟಿಗೆಯೊಳಗೆ ಇಟ್ಟು ಸಾಕಲು ಮತ್ತು ವರ್ಷಕ್ಕೊಮ್ಮೆ ಲಸಿಕೆ ಹಾಕಿಸಬೇಕೆಂದು ರೈತರಲ್ಲಿ ಅರಿವು ಮೂಡಿಸುವುದು, ಹೊಸದಾಗಿ ಜಾನುವಾರುಗಳನ್ನು ಖರೀದಿಸುವಾಗ ಇಲಿ ಜ್ವರದ ಸೋಂಕಿನಿಂದ ಮುಕ್ತವಾಗಿರುವ ಸಾಕಾಣಿಕೆ ಕೇಂದ್ರಗಳಿಂದ ಜಾನುವಾರುಗಳನ್ನು ಖರೀದಿಸುವುದು ಈ ಎಲ್ಲ ಯುಕ್ತ ಕ್ರಮಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಗಳನ್ನು ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ನಿರ್ವಹಿಸಲು ಸೂಚಿಸಿದರು.

### ಇಲಿಜ್ವರದ ಚಿಕಿತ್ಸೆ

ತೀವ್ರ ತರಹದ ರೋಗವನ್ನು ಗುಣಪಡಿಸಲು ಪೆನ್ ಸಿಲಿನ್ ಆಂಟಿಬಯಾಟಿಕ್ ಅನ್ನು ರಕ್ತನಾಳದ ಮೂಲಕ ನೀಡಬೇಕಾಗುತ್ತದೆ. ಪೆನ್ ಸಿಲಿನ್ ಚುಚ್ಚುಮದ್ದು ನೀಡಿದ ನಂತರ ಹೀಮರ್ ರಿಯಾಕ್ಷನ್ ಆಗುವ ಸಂಭವವಿರುತ್ತದೆ. ಕಡಿಮೆ ತೀವ್ರತೆ ಹೊಂದಿರುವ ರೋಗಿಗಳಿಗೆ ಅಮಾಕ್ಸಿಸಿಲಿನ್, ಆಂಪಿಸಿಲಿನ್, ಡಾಕ್ಸಿಸೈಕ್ಲಿನ್ ಅಥವಾ ಎರಿಥ್ರೋಮೈಸಿನ್ ಆಂಟಿಬಯಾಟಿಕ್ ಗಳನ್ನು ನೀಡಬಹುದು. ಮೂರನೇ ಪೀಳಿಗೆಯ ಸೆಫೆಲೋಸ್ಪೋರಿನ್ ಆಂಟಿಬಯಾಟಿಕ್ ಗಳಾದ ಸೆಫ್ಟ್ರಿಯಾಕ್ಸೋನ್, ಸೆಫೊಟಾಕ್ಸಿಮ್ ಮತ್ತು ಕ್ವಿನಲೋನ್ ಆಂಟಿಬಯಾಟಿಕ್ ಗಳೂ ಕೂಡಾ ಪರಿಣಾಮಕಾರಿಯಾಗಿ ಕೆಲಸಮಾಡುತ್ತವೆ. ಬಹು ಅಂಗಾಂಗ ವೈಫಲ್ಯದಿಂದ ಬಳಲುತ್ತಿರುವ ರೋಗಿಗಳಿಗೆ ತೀವ್ರ ನಿಗಾ ಘಟಕದ (ಐ.ಸಿ.ಯು) ಚಿಕಿತ್ಸೆ ಅಗತ್ಯವಿರುತ್ತದೆ. ಜಿಲ್ಲಾ ಆಸ್ಪತ್ರೆಯ ಡಿ.ಪಿ.ಹೆಚ್.ಎಲ್. ಪ್ರಯೋಗಾಲಯದಲ್ಲಿ ಟರಿಒ ಜಟಟಚಿ ಮೂಖಾಂತರ ಪರೀಕ್ಷಿಸಿ ಕೊಂಡು ವೈದರಲ್ಲಿ ಚಿಕಿತ್ಸೆ ಪಡೆಯಬೇಕು ಎಂದರು.



## ಪ್ರಶಸ್ತಿ ಸ್ವೀಕಾರ

ಹುಬ್ಬಳ್ಳಿಯಲ್ಲಿ ಸಾರಥಿ ಪೆಡಾಗೋಗಿ ಎಂಬ ಹೆಸರಾಂತ ಸಂಸ್ಥೆಯ ಸಾರಥ್ಯದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಸೆಮಿನಾರ್‌ನಲ್ಲಿ ಪಾಲ್ಗೊಂಡ ಸಲುವಾಗಿ ತರಬೇನಹಳ್ಳಿಯ ಆಕ್ಸ್‌ಫರ್ಡ್ ಇಂಟರ್ನ್ಯಾಷನಲ್ ಪಬ್ಲಿಕ್ ಸ್ಕೂಲ್ ನ ಆಡಳಿತ ಅಧಿಕಾರಿ ವಿನಯ್ ಅವರು ಪ್ರಶಸ್ತಿ ಸ್ವೀಕರಿಸಿದರು. ಶಾಲೆಯ ಕಾರ್ಯದರ್ಶಿಗಳಾದ ಜಿ.ಎಸ್.ರವಿ, ಮುಖ್ಯೋಪಾಧ್ಯಾಯನಿ ಶ್ರುತಿ ಜಿ.ಎಂ, ಬೋಧಕ ಸಿಬ್ಬಂದಿ ವರ್ಗ ನಂಜುಂಡಯ್ಯ ಡಿ.ಎಸ್, ನಳಿನ ಕೆ,ಪಿ, ಮೇಘನಾ ಎ.ಪಿ, ಮಾನಸ, ಕಾವೇರಿ ಎಸ್‌ಎನ್, ಉಮಾಶಂಕರ್ ಬಿ, ಅಶ್ವಿನಿ ಹೆಚ್.ವಿ, ನಗ್ತಾ ಡಿ, ಪ್ರಿಯದರ್ಶಿನಿ ಸಿ.ಎಸ್, ಚಾಲಕ ವರ್ಗದವರಾದ ಜಗದೀಶ್, ಕಿರಣ್‌ಕುಮಾರ್, ಮಲ್ಲಿಕಾರ್ಜುನ, ಪ್ರಸನ್ನ, ರವೀಶ್ ಅಭಿನಂದಿಸಿದರು.

# ಯಡಬೆಟ್ಟ ಶ್ರೀಮಹದೇಶ್ವರ ದೇವಸ್ಥಾನ ಟ್ರಸ್ಟ್ ಕ್ಯಾಲೆಂಡರ್ ಬಿಡುಗಡೆ




**ಚಾಮಾಜನಗರ:** ಯಡಬೆಟ್ಟ ಶ್ರೀ ಮಹದೇಶ್ವರ ಸ್ವಾಮಿ ರಥೋತ್ಸವವು ದೀಪಾವಳಿ ಹಬ್ಬದಂದು ವಿಜೃಂಭನೆಯಿಂದ ನಡೆಯುತ್ತಿದ್ದು, ಬಹಳ ಹಳೆಯಾದ ಶಿಥಿಲಗೊಂಡಿರುವ ಸ್ವಾಮಿಯ ರಥ ನಿರ್ಮಿಸಲು ದಾನಿಗಳು ಹೆಚ್ಚಿನ ನೆರವು ನೀಡಬೇಕು ಎಂದು ಯಡಬೆಟ್ಟದ ಮಹದೇಶ್ವರ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಗೌಡಿಕೆ ನಾಗಣ್ಣ ಮನವಿ ಮಾಡಿದರು.

ತಾಲೂಕಿನ ಯಡಪುರ ಬಳಿ ಶ್ರೀ ಯಡಬೆಟ್ಟ ಮಹದೇಶ್ವರ ಸ್ವಾಮಿ ಟ್ರಸ್ಟ್ ವತಿಯಿಂದ ಪ್ರಕಟಿಸಿರುವ 2024ನೇ ಸಾಲಿನ ನೂತನ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಚಾಮರಾಜನಗರ ತಾಲೂಕಿನಲ್ಲಿರುವ ಪ್ರಸಿದ್ಧ ಶ್ರೀ ಯಡಬೆಟ್ಟ ಮಹದೇಶ್ವರ ಸ್ವಾಮಿ ದೇವಸ್ಥಾನದ ಅಭಿವೃದ್ದಿಗೆ ಸುತ್ತಮುತ್ತಲಿನ ಗ್ರಾಮಸ್ಥರ ಸಹಕಾರದೊಂದಿಗೆ ಟ್ರಸ್ಟ್ ರಚನೆ ಮಾಡಿಕೊಂಡು ಅಬಿವೃದ್ದಿಪಡಿಸಲು ಮುಂದಾಗಿದ್ದೇವೆ. ಪ್ರತಿ ಅಮಾವಾಸ್ಯೆ, ವಿಶೇಷ ಹಬ್ಬ ಹರಿದಿನಗಳಲ್ಲಿ ಸ್ವಾಮಿಗೆ ಪೂಜಾ ಕೈಂಕಾರ್ಯಗಳು ಭಕ್ತರ ಸಹಕಾರದಿಂದ ವೈಭವವಾಗಿ ನಡೆಯುತ್ತಿದೆ. ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿದೆ ಎಂದರು.

ಪ್ರತಿ ವರ್ಷದ ದೀಪಾವಳಿಯ ದಿನದಂದು ಮಹದೇಶ್ವರ ಸ್ವಾಮಿಯ ರಥೋತ್ಸವ ನಡೆಯುತ್ತಿದೆ. ಬಹಳ ವರ್ಷಗಳ ಹಳೆ ಕಾಲದ ರಥ ಇದ್ದಾಗಿದ್ದು, ಸಂಪೂರ್ಣವಾಗಿ ಶಿಥಿಲಗೊಂಡಿದೆ. ಪಿಡಬ್ಲು?ಯಡಿ ಇಲಾಖೆಯವರು ಸಹ ಈ ರಥ ರಥೋತ್ಸವ ನಡೆಸಲು ಸುರಕ್ಷತಾವಲ್ಲ ಎಂದು ಪ್ರಮಾಣ ಪತ್ರ ನೀಡಿದ್ದಾರೆ. ಸಾವಿರಾರು ಭಕ್ತರ ಸಮ್ಮುಖದಲ್ಲಿ ರಥೋತ್ಸವ ನಡೆಯುತ್ತಿದ್ದು, ಈ ದೀಪಾವಳಿಗೆ ಈ ರಥ ಸಿದ್ದ ಗೊಳಿಸಲು ಭಕ್ತರು ಉದಾರವಾಗಿ ದಾನ ಮಾಡಬೇಕು ಎಂದು ನಾಗಣ್ಣ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಟ್ರಸ್ಟ್ನ ಕಾರ್ಯದರ್ಶಿ ಎಂ.ಎನ್. ಮಹದೇವ್, ಸಹಕಾರ್ಯದರ್ಶಿ, ಪಟೇಲ್‌ಗುರುಮಲ್ಲಪ್ಪ, ಖಜಾಂಚಿ ಎಂ. ಕುಮಾರಸ್ವಾಮಿ, ನಿರ್ದೇಶಕರಾದ ಮಿಂಚು ನಾಗೇಂದ್ರ, ನಂಜುಂಡೇ ರಾಜ್ ಅರಸು, ಎಂ.ಲಿಂಗರಾಜು, ಶಿವಣ್ಣ ಶೆಟ್ಟಿ, ಅರ್ಚಕರಾದ ಎಂ. ಗುರುಸ್ವಾಮಿ, ನಾಗಭೂಷಣ ಆರಾಧ್ಯ ಇತರರು ಇದ್ದರು.

## ಸಾಧಕರಿಂದ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ ವತಿಯಿಂದ ಜನವರಿ 26 ರಂದು ನಡೆಯುವ 75ನೇ ಗಣರಾಜ್ಯೋತ್ಸವ ದಿನಾಚರಣೆಯ ದಿನದಂದು ಕಲೆ ಮತ್ತು ಸಂಸ್ಕೃತಿ ಕ್ಷೇತ್ರಗಳನ್ನು ಹೊರತುಪಡಿಸಿ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಂಡು ವಿಶಿಷ್ಟ ಕಾರ್ಯಸಾಧನೆ ಮಾಡಿ ಜಿಲ್ಲೆಯ ಕೀರ್ತಿಯನ್ನು ಎತ್ತಿ ಹಿಡಿದ ಸಾಧಕರನ್ನು ಸನ್ಮಾನ ಮಾಡಲು ಸಮಿತಿಗೆ (ಸಾಹಿತ್ಯ, ಜನಪದ, ವಿಜ್ಞಾನ ಮತ್ತು ಕ್ರೀಡೆ, ಸಮಾಜ ಸೇವೆ ಹಾಗೂ ಇತರೆ) ವಿವಿಧ ಕ್ಷೇತ್ರಗಳಲ್ಲಿ ಆಯ್ಕೆ ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಬಹುದು. ಈ ಜಿಲ್ಲೆಯಲ್ಲಿ ಕಲೆ ಮತ್ತು ಸಂಸ್ಕೃತಿ ಕ್ಷೇತ್ರಗಳನ್ನು ಹೊರತುಪಡಿಸಿ ರಾಷ್ಟ್ರ ಹಾಗೂ ರಾಜ್ಯ ಮಟ್ಟದ ವಿವಿಧ ಕ್ಷೇತ್ರದಲ್ಲಿ ಕಾರ್ಯಸಾಧನೆ ಮಾಡಿರುವವರು ಜನವರಿ 19 ರೊಳಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಆಸಕ್ತಿ ಉಳ್ಳವರು ಚಿಕ್ಕಬಳ್ಳಾಪುರ ಉಪವಿಭಾಗಾಧಿಕಾರಿಗಳ ಕಚೇರಿಗೆ ಅರ್ಜಿ ಸಲ್ಲಿಸಬಹುದೆಂದು ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ಮಂಡ್ಯ:** 66/11 ಕೆ.ವಿ ಬಸರಾಳು ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಜನವರಿ 10 ರಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಬಸರಾಳು, ಶಿವಪುರ, ಬೇಬಿ, ಕಂಬದಹಳ್ಳಿ, ಬಿದರಕಟ್ಟೆ, ಮಾರಸಿಂಗನಹಳ್ಳಿ, ಅಂಕುಶಾಪುರ, ಬೆನ್ನಹಟ್ಟಿ, ಶಾನಭೋಗನಹಳ್ಳಿ, ಬೊಮ್ಮನಹಳ್ಳಿ, ಅನುಕುಪ್ಪೆ, ಮನುಗನಹಳ್ಳಿ, ಎಂ.ಹಟ್ನ, ಗಣಿಗ ಹಾಗೂ ಸುತ್ತಮುತ್ತಲಿನ ಗ್ರಾಮಗಳು ಹಾಗೂ ಸುತ್ತ ಮುತ್ತಲಿನ ಗ್ರಾಮಗಳಿಗೆ ವಿದ್ಯುತ್‌ನಲ್ಲಿ ವ್ಯತಯ ಉಂಟಾಗುವುದು ಎಂದು ಸೆಸ್ಕ್ ಕಾ ಮತ್ತು ಪಾ ಮಂಡ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಆಸತ್ರೆಯಲಿ 45 ಗರ್ಭಿಣಿಯರಿಗೆ ಸೀಮಂತ

**ಯಳಂದೂರು:** ತಾಯ್ತನ ಎಂಬುದು ಪ್ರತಿ ಹೆಣ್ಣಿನ ಜೀವನದ ಸಡಗರದ ಮಹತ್ವದ ಘಟ್ಟ ಎಂದು ಆಸ್ಪತ್ರೆ ವೈದ್ಯಾಧಿಕಾರಿ ಶ್ರೀಧರ್ ಹೇಳಿದರು. ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಸಭಾಂಗಣದಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಮಂಡಳಿ ಹಾಗೂ ತಾಲ್ಲೂಕು ಆಸ್ಪತ್ರೆ ಸಂಯುಕ್ತವಾಗಿ ಆಯೋಜಿಸಿದ್ದ ಪ್ರಧಾನಮಂತ್ರಿ ಮಾತೃತ್ವ ಸುರಕ್ಷತಾ ದಿನ ಕಾರ್ಯಕ್ರಮದಲ್ಲಿ ಸೀಮಂತ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಎಲ್ಲಾ ಸ್ತ್ರೀಯರಿಗೂ ಮಗು ಪಡೆಯುವ ಸಂತಸ ಇದ್ದೇ ಇರುತ್ತದೆ. ಮಾತೃತ್ವ, ಪೋಷಣೆ ಬಗ್ಗೆ ತಿಳಿದಿರುತ್ತದೆ. ಆದರೆ, ಗರ್ಭಿಣಿಗೆ ಹೆರಿಗೆಯ ಮೊದಲು, ಹೆರಿಗೆ ಸಂದರ್ಭ ಹಾಗೂ ಮಗುವಿನ ಆರೈಕೆ ಬಗ್ಗೆ ಅರಿವು ಮೂಡಿಸುವ ಸಲುವಾಗಿ ರಾಷ್ಟ್ರೀಯ ಸುರಕ್ಷತಾ ಮಾತೃತ್ವ ದಿನದ ಬಗ್ಗೆ ಅರಿವು ಮೂಡಿಸಲಾಗುತ್ತದೆ ಎಂದರು. ಐಸಿಟಿಸಿ ವಿಭಾಗದ ಆಪ್ತ ಸಮಾಲೋಚಕ ಮಹೇಶ್ ಎಚ್ಐವಿ ಹಾಗೂ ಲೈಂಗಿಕ ರೋಗಗಳ ಬಗ್ಗೆ ಮಾಹಿತಿ ನೀಡಿ, ಹೆರಿಗೆಯನ್ನು ಆಸ್ಪತ್ರೆಗಳಲ್ಲಿ ಮಾಡಿಸಬೇಕು. ಇದರಿಂದ ಮಗು ಮತ್ತು ಗರ್ಭಿಣಿಯರ ಸುರಕ್ಷತೆ ಕಾಪಾಡಲು ಸಾಧ್ಯ ಎಂದು ತಿಳಿಸಿದರು. ಡಾ.ಶಶಿರೇಖಾ, ಗರ್ಭಧಾರಣೆ ಸಮಯದಲ್ಲಿ ಪೌಷ್ಠಿಕಾಂಶದ ಅವಶ್ಯಕತೆ ಬಗ್ಗೆ ಮಾಹಿತಿ ನೀಡಲಾಗುವುದು. ಪ್ರಸವಪೂರ್ವ ಆರೈಕೆ, ಎದೆಹಾಲಿನ ಮಹತ್ವ ಹಾಗೂ ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಲಾಗುತ್ತದೆ ಎಂದರು. ಡಾ.ನಾಗೇಂದ್ರಮೂರ್ತಿ, ಡಾ.ನಾಗೇಶ್, ಪುಟ್ಟು ಹಾಗೂ ಸುನಂದ ಇದ್ದರು.



## ವಿಕಸಿತ ಭಾರತ ಸಂಕಲ್ಪಯಾತ್ರೆ

**ಮಾಲೂರು:** ಪ್ರಧಾನಿ ನರೇಂದ್ರ, ಮೋದಿಯವರಜನಪರ ಯೋಜನೆಗಳನ್ನು ದೇಶದಕಟ್ಟಕಡೆಯ ವ್ಯಕ್ತಿಗೂತಲುಪಿಸುವುದರ ಮೂಲಕ ಜಾಗೃತಿ ಮೂಡಿಸುವಂತೆ ಸಂಸದಎಸ್ ಮುನಿಸ್ವಾಮಿ ತಿಳಿಸಿದರು. ಪಟ್ಟಣದ ಮಹಾರಾಜ ವೃತ್ತದಲ್ಲಿ ಪುರಸಭೆ ವತಿಯಿಂದ ಹಮ್ಮಿಕೊಂಡಿದ್ದ ವಿಕಸಿತ ಭಾರತ ಸಂಕಲ್ಪಯಾತ್ರೆಯಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ವಿಶ್ವಕಂಡ ಪ್ರಧಾನಿ ನರೇಂದ್ರ ಮೋದಿಯವರುದೇಶ ಮತ್ತುದೇಶದಲ್ಲಿನ ಪ್ರಜೆಗಳ ರಕ್ಷಣೆ ಮತ್ತು ಸುಭಿಕ್ಷತೆಗಾಗಿ ಹಲವಾರುಅಭಿವೃದ್ಧಿ ಯೋಜನೆಗಳನ್ನು ಜಾರಿಗೆತಂದಿದ್ದು. ಪ್ರತಿಯೊಬ್ಬರೂ ಆರೋಗ್ಯವಾಗಿ ಎಲ್ಲರಿಗೂ ಆರೋಗ್ಯಕಲ್ಪಿಸುವಉದ್ದೇಶದಿಂದ ಸುಮಾರು 5 ಲಕ್ಷ ರೂಗಳ ವರೆಗೂ ಉಚಿತ ಆರೋಗ್ಯ ವೆಚ್ಚವನ್ನುಆರೋಗ್ಯಆಯುಷ್ಮಾನ್ ಕಾರ್ಡ್ ಮೂಲಕ ಪಡೆಯಬಹುದಾಗಿದೆ. ಮನೆ ಮನೆಗೆ ಕುಡಿಯುವ ನೀರಿನ ಸಂಪರ್ಕಕಲ್ಪಿಸುವ ನಿಟ್ಟಿನಲ್ಲಿ ಜಲಜೀವನ್ ಯೋಜನೆ ಅಡಿಯಲ್ಲಿಕೋಲಾರಜಿಲ್ಲೆಗೆ 1080 ಕೋಟಿ ರೂಗಳ ಅನುದಾನವನ್ನು ಜಿಲ್ಲೆಯಎಂಟು ತಾಲೂಕುಗಳಿಗೆ ಬಿಡುಗಡೆ ಮಾಡಲಾಗಿದೆ. ಸ್ವಾವಲಂಬಿ ಜೀವನಕ್ಕಾಗಿದೇಶದಜನತೆಯನ್ನುಆರ್ಥಿಕವಾಗಿ ಸ್ವಾವಲಂಬನೆ ಬದುಕು ರೂಪಿಸುಲು ವಿವಿಧ ಯೋಜನೆಗಳಲ್ಲಿ ಕೌಶಲ್ಯತರಬೇತಿ ಹಾಗೂ ಸಾಲ ಸೌಲಭ್ಯವನ್ನು ನೀಡಲಾಗುತ್ತಿದೆ. ಹಿಂದುಳಿದ ಬಡವರಿಗೆ ಬೀದಿಬದಿ ವ್ಯಾಪಾರಿಗಳಿಗೆ ಆರ್ಥಿಕವಾಗಿ ಮುಂದೆ ಬರಲು ಮುದ್ರಾಯೋಜನೆ ಸೇರಿದಂತೆ ಹಲವಾರು ಯೋಜನೆಗಳನ್ನು ಬ್ಯಾಂಕ್ ಮೂಲಕ ಯಾವುದೇಆಧಾರವಿಲ್ಲದೆ ಸಾಲ ಸೌಲಭ್ಯಗಳನ್ನು ನೀಡಲು ಮುಂದಾಗಿದೆ ಎಂದರು.




# ಕಿರುನಾಟಕಗಳ ಸ್ಪರ್ಧೆ ರಂಜಿತ ತಂಡ ಪ್ರಥಮ



**ಹುಳಿಯಾರು:** ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ, ಕಾಲೇಜು, ಹುಳಿಯಾರು-ಕೆಂಕೆರೆ, ಇಲ್ಲಿನ ಸಾಂಸ್ಕೃತಿಕ ಸಂಘದ ವತಿಯಿಂದ ಏರ್ಪಡಿಸಿದ್ದ ''ಕಿರುನಾಟಕಗಳ ಸ್ಪರ್ಧೆ''ಯಲ್ಲಿ ವಿಜೇತರಾದವರಿಗೆ ಮಂಗಳವಾರ ಬಹುಮಾನ ವಿತರಿಸಲಾಯಿತು.

ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ವೀರಣ್ಣ ಎಸ್.ಸಿ. ಅವರು ಮಾತನಾಡಿ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಪಠ್ಯೇತರ ಚಟುವಟಿಕೆಗಳು ಸಹಕಾರಿಯಾಗಿದ್ದು, ಈ ನಿಟ್ಟಿನಲ್ಲಿ ರಂಗ ಅಭಿನಯ ಕೂಡ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ನೆರವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಸಂಚಾಲಕರಾದ ಡಾ. ಮೋಹನ್ ಕುಮಾರ್ ಮಿರ್ಲೆ ಅವರು ಪ್ರಾಸ್ತಾವಿಕ ನುಡಿಗಳನ್ನು ಆಡುತ್ತಾ, ವಿದ್ಯಾರ್ಥಿಗಳಲ್ಲಿ ಅಡಗಿರುವ ಅಭಿನಯ ಕೌಶಲ್ಯವನ್ನು ಗುರುತಿಸುವ ಉದ್ದೇಶದಿಂದ ಈ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ರಂಗಭೂಮಿಯು ಸಾಮಾಜಿಕ ಜಾಗೃತಿ ಮೂಡಿಸುವ ಪ್ರಭಾವಶಾಲಿ ಮಾಧ್ಯಮವಾಗಿದ್ದು, ರಂಗಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಕಲಾವಿದರ ಚಿಂತನಾ ಲಹರಿಗಳ ಮೇಲೂ ಇದು ಧನಾತ್ಮಕ ಪರಿಣಾಮ ಬೀರುತ್ತದೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಒಟ್ಟು ಏಳು ತಂಡಗಳು ಭಾಗವಹಿಸಿದ್ದು, ಐತಿಹಾಸಿಕ ಮತ್ತು ಪೌರಾಣಿಕ ಸಂಗತಿಗಳು, ಸಾಮಾಜಿಕ ಜಾಗೃತಿ, ಆರ್ಥಿಕ ಜಾಗೃತಿ, ಕನ್ನಡಾಭಿಮಾನ, ಸಂವಿಧಾನದ ಮಹತ್ವ, ಮಹಿಳಾ ಸಬಲೀಕರಣ, ಹಾಸ್ಯ, ಹೀಗೆ ವೈವಿಧ್ಯಮಯ ವಸ್ತು ವಿಷಯಗಳ ಕಿರು ನಾಟಕಗಳನ್ನು ಪ್ರದರ್ಶಿಸಿದರು.

''ಸಂವಿಧಾನ ಇಲ್ಲದೆ ಹೋದರೆ?!'' ಎಂಬ ಕಿರುನಾಟಕವನ್ನು ಅಭಿನಯಿಸಿದ ಅಂತಿಮ ಬಿ.ಎ. ವಿದ್ಯಾರ್ಥಿಗಳಾದ ರಂಜಿತ ಆರ್. ಮತ್ತು ತಂಡದವರು ಪ್ರಥಮ ಬಹುಮಾನ ಪಡೆದರೆ, ''ಮಹಿಳಾ ಸಬಲೀಕರಣ'' ಎಂಬ ಕಿರುನಾಟಕವನ್ನು ಅಭಿನಯಿಸಿದ ಅಂತಿಮ ಬಿ.ಕಾಂ. ವಿದ್ಯಾರ್ಥಿಗಳಾದ ಕೋಮಲ ಎನ್. ಮತ್ತು ತಂಡದವರು ದ್ವಿತೀಯ ಬಹುಮಾನ ಪಡೆದರು. ಇನ್ನು ''ಆರ್ಥಿಕ ವಂಚನೆ'' ಎಂಬ ಕಿರುನಾಟಕವನ್ನು ಅಭಿನಯಿಸಿದ ಪ್ರಥಮ ಬಿ.ಕಾಂ. ವಿದ್ಯಾರ್ಥಿಗಳಾದ ರಕ್ಷಿತ ಸಿ. ಮತ್ತು ತಂಡದವರು ತೃತೀಯ ಬಹುಮಾನ ಪಡೆದರು. ಈ ಕಿರುನಾಟಕ ಸ್ಪರ್ಧೆಯ ತೀರ್ಪುಗಾರರಾಗಿ ಪ್ರೊ. ಮಂಜುನಾಥ ಕೆ.ಎಸ್., ಡಾ. ಸುಷ್ಮಾ ಎಲ್. ಬಿರಾದಾರ್ ಮತ್ತು ಪ್ರೊ. ಸಂಗೀತಾ ಪಿ. ಅವರು ಕಾರ್ಯ ನಿರ್ವಹಿಸಿದ್ದರು. ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಮಲ್ಲಿಕಾರ್ಜುನ ಮತ್ತು ಕಾಲೇಜಿನ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಹೈನುಗಾರಿಕೆಯಿಂದ ಸ್ವಾವಲಂಬನೆ

## ಪಶುಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ಹೇಳಿಕೆ



**ಪಿರಿಯಾಪಟ್ಟಣ:** ಸರ್ಕಾರದ ಯೋಜನೆಗಳು ಗ್ರಾಮೀಣ ಜನರಿಗೆ ತಲುಪಿದಾಗ ಮಾತ್ರ ಆ ಯೋಜನೆ ಸಾರ್ಥಕತೆ ಪಡೆಯುತ್ತದೆ ಎಂದು ಪಶುಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ತಾಲೂಕಿನ ಬೆಟ್ಟದಪುರದ ಎಪಿಎಂಸಿ ಆವರಣದಲ್ಲಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಹಾಗೂ ಕರ್ನಾಟಕ ಸಹಕಾರ ಕುಕ್ಕುಟ ಮಹಾ ಮಂಡಳಿ ವತಿಯಿಂದ ಏರ್ಪಡಿಸಿದ್ದ ಗ್ರಾಮೀಣ ಮಹಿಳೆಯರಿಗೆ ನಾಟಿ ಕೋಳಿ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಆರ್ಥಿಕ ಸ್ವಾವಲಂಬನೆ, ಪೌಷ್ಟಿಕ ಆಹಾರ ಮತ್ತು ಉತ್ತಮ ಆರೋಗ್ಯಕ್ಕೆ ನಾಟಿಕೋಳಿ ಉತ್ತಮ ಆಹಾರವಾಗಿದ್ದು, ಕೇವಲ ಗ್ರಾಮೀಣ ಪ್ರದೇಶದ ಆಹಾರದ ಒಂದು ಭಾಗವಾಗಿದ್ದ ನಾಟಿ ಕೋಳಿ ಸಾಕಾಣಿಕೆ, ಈಗ ಒಂದು ಉದ್ಯಮವಾಗಿ ಬೆಳೆದಿದೆ, ಗ್ರಾಮೀಣ ಪ್ರದೇಶದ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬನೆ ಸಾಧಿಸಲು ಇದು ಸಹಕಾರಿಯಾಗಿದೆ. ನಾಟಿಕೋಳಿ ಸಾಕಣೆ ಕಡಿಮೆ ಖರ್ಚಿನಲ್ಲಿ ಹೆಚ್ಚಿನ ಆದಾಯವನ್ನು ಪಡೆಯಬಹುದು. ಹಾಗೆಯೇ ನಾಟಿ ಕೋಳಿ ಮೊಟ್ಟೆಯಿಂದ ಮನುಷ್ಯನ ಆರೋಗ್ಯವನ್ನು ವೃದ್ಧಿಸಿಕೊಳ್ಳಬಹುದು. ನಾಟಿ ಕೋಳಿ ಸಾಕಾಣಿಕೆಯಿಂದ ಗ್ರಾಮೀಣ ಭಾಗದ ಜನರಿಗೆ ಆರ್ಥಿಕವಾಗಿ ಮತ್ತು ಆರೋಗ್ಯ ದೃಷ್ಟಿಯಿಂದ ಹೆಚ್ಚು ಪ್ರಯೋಜನಕಾರಿಯಾಗಿದ್ದು ಈ ಉದ್ಯಮಕ್ಕೆ ಸರ್ಕಾರ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ ಎಂದರು.

ಗ್ರಾಮೀಣ ಭಾಗದ ರೈತರು ಉಪಕಸುಬಾದ ಹೈನುಗಾರಿಕೆಯ ಜೊತೆಗೆ ಕುಕ್ಕುಟ ಉದ್ಯಮವನ್ನು ಪ್ರಾರಂಭಿಸುವುದರಿಂದ ತನ್ನ ದೈನಂದಿನ ಖರ್ಚನ್ನು ಸರಿದೂಗಿಸುವ ಕೆಲಸವಾಗುತ್ತದೆ. ಮುಂದಿನ ದಿನಗಳಲ್ಲಿ ಕುಕ್ಕುಟ ಉದ್ಯಮ ದೊಡ್ಡ ಉದ್ಯಮವಾಗಿ ಬೆಳೆಯುವುದರಲ್ಲಿ ಯಾವುದೇ ಸಂಶಯವಿಲ್ಲ, ಮನುಷ್ಯನ ಆರೋಗ್ಯದ ದೃಷ್ಟಿಯಿಂದ ಫಾರಂ ಕೋಳಿಗಳನ್ನು ಹೆಚ್ಚು ಉಪಯೋಗಿಸದೆ ನಾಟಿ ಕೋಳಿಯನ್ನು ಉಪಯೋಗಿಸುವುದರ ಮೂಲಕ ಉದ್ಯಮವನ್ನು ಪ್ರೋತ್ಸಾಹಿಸಬೇಕಿದೆ ಎಂದರು.

ಈ ಕಾರ್ಯಕ್ರಮದ ಮೂಲಕ ಹಳ್ಳಿಯ ಕೆಲವು ಆಯ್ದ ರೈತರಿಗೆ 20 ನಾಟಿ ಕೋಳಿ ಮರಿಗಳನ್ನು ನೀಡುತ್ತಿದ್ದು, ಅವುಗಳನ್ನು ಸಾಕಿ ಆರ್ಥಿಕ ಸ್ವಾವಲಂಬನೆಯನ್ನು ಸಾಧಿಸುವ ಜೊತೆಗೆ ಮನುಷ್ಯನಿಗೆ ಅವಶ್ಯಕತೆ ಇರುವ ಪ್ರೋಟೀನ್ ಯುಕ್ತ ಮೊಟ್ಟೆಯನ್ನು ತಾವು ಉಪಯೋಗಿಸಿ ಎಂದರು.

### ಕೋಳಿ ಮರಿಗಳ ವಿತರಣೆ

**ಕಾರ್ಯಕ್ರಮದಲ್ಲಿ 500 ಫಲಾನುಭವಿಗಳಿಗೆ ತಲಾ 20 ಕೋಳಿಗಳನ್ನು ವಿತರಿಸಲಾಯಿತು.**

**ಕಾರ್ಯಕ್ರಮದಲ್ಲಿ ಕರ್ನಾಟಕ ಸಹಕಾರ ಕುಕ್ಕುಟ ಮಂಡಳಿಯ ಉಪಾಧ್ಯಕ್ಷ ಹರೀಶ್, ಮೈಸೂರು ವಿಭಾಗದ ಜಂಟಿ ನಿರ್ದೇಶಕ ಡಾ.ವೀರಭದ್ರಯ್ಯ, ತಹಶೀಲ್ದಾರ್ ಕುಂಞ ಅಹಮದ್, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುನಿಲ್ ಕುಮಾರ್, ತಾಲೂಕು ಆಶ್ರಯ ಸಮಿತಿಯ ಅಧ್ಯಕ್ಷ ನಿತಿನ್ ವೆಂಕಟೇಶ್, ಬೆಟ್ಟದಪುರ ಗ್ರಾಮ ಪಂಚಾಯತಿ ಅಧ್ಯಕ್ಷ ಅಯ್ಯರ್ ಗಿರೀಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಡಿ ಟಿ ಸ್ವಾಮಿ, ರಹಮತ್ ಜಾನ್ ಬಾಬು, ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕರಾದ ಡಾ. ಸೋಮಯ್ಯ, ಪಶು ವೈದ್ಯರಾದ ಡಾ.ಮಂಜೇಶ್, ಡಾ.ಚಾಮರಾಜ್, ಡಾ.ಸಂದೇಶ್, ಮುಖಂಡರಾದ ಇ.ಪಿ.ಲೋಕೇಶ್, ಕೆ.ಹೊಲದಪ್ಪ, ಪರಮೇಶ್, ಸರಸ್ವತಿ, ಅನಿತಾ ತೋಟಪಶೆಟ್ಟಿ, ಕುಂಜಪ್ಪ ಕಾರ್ನಾಡ್, ನೀಲಯ್ಯ , ಆಂಜನೇಯ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.**

### ಟಿವಿ ಮಾಧ್ಯಮಗಳನ್ನು ನಂಬಬೇಡಿ

**ದೇಶದಲ್ಲಿನ ಟಿವಿ ಮಾಧ್ಯಮಗಳನ್ನು ಬಿಜೆಪಿಯವರು ಖರೀದಿಸಿದ್ದಾರೆ. ಹಾಗಾಗಿ ಕಾಂಗ್ರೆಸ್ ಪಕ್ಷ ಸೇರಿದಂತೆ ಇತರೆ ಮಿತ್ರಪಕ್ಷಗಳು ಏನೇ ಒಳ್ಳೆಯ ಕೆಲಸ ಮಾಡಿದರೂ ಅವರು ಮಾಡಿದ ಒಳ್ಳೆಯ ಕೆಲಸಗಳನ್ನು ಅವರು ಬಿತ್ತರಿಸುವುದಕಿಂತ ಹೆಚ್ಚಾಗಿ ಕಾಂಗ್ರೆಸ್ ಪಕ್ಷದ ಮೇಲೆ ಅಪಪ್ರಚಾರ ಮಾಡುತ್ತಿದ್ದಾರೆ ಇವರು ಸತ್ಯ ಹೇಳುವುದಕೀಂತ ಹೆಚ್ಚಾಗಿ ಸುಳ್ಳು ಹೇಳುವ ಕೆಲಸ ಮಾಡುತ್ತಿದ್ದಾರೆ ಹಾಗಾಗಿ ಇವರನ್ನು ಜನ ನಂಬಬಾರದು ಎಂದರು. ಈ ಸಂದರ್ಭದಲ್ಲಿ ಪಶುಪಾಲನ ಮತ್ತು ಪಶುವೈದ್ಯಕೀಯ ಇಲಾಖೆಯ ಉಪ ನಿರ್ದೇಶಕ ಡಾ.ನಾಗರಾಜ್ ಹಾಗೂ ಕರ್ನಾಟಕ ಸಹಕಾರ ಕುಕ್ಕುಟ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕ ಡಾ. ಪ್ರಕಾಶ್ ಮಾತನಾಡಿದರು.**

## ಬಿಎಂಟಿಸಿ ನೂತನ ಎಂಡಿಯಾಗಿ ರಾಮಚಂದ್ರನ್ ನೇಮಕ

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಎಂಡಿಯಾಗಿದ್ದ ಹಿರಿಯ ಐಎಎಸ್ ಅಧಿಕಾರಿ ಜಿ.ಸತ್ಯವತಿ ಅವರನ್ನು ವರ್ಗಾವಣೆ ಮಾಡಲಾಗಿದೆ. ಒಂದೂವರೆ ವರ್ಷದಿಂದ ನಿಗಮದ ಎಂಡಿಯಾಗಿದ್ದ ಸತ್ಯವತಿ ಅವರಿಗೆ ಯಾವುದೇ ಹುದ್ದೆ ತೋರಿಸದೇ ವರ್ಗ ಮಾಡಲಾಗಿದೆ. ಅವರ ಜಾಗಕ್ಕೆ ಮತ್ತೊಬ್ಬ ಐಎಎಸ್ ಅಧಿಕಾರಿ ಸದ್ಯ ಬಿಬಿಎಂಪಿಯಲ್ಲಿ ವಿಶೇಷ ಆರ್ಥಿಕ ಆಯುಕ್ತರಾಗಿರುವ ಆರ್. ರಾಮಚಂದ್ರನ್ ಅವರನ್ನು ನೇಮಿಸಲಾಗಿದೆ. ಸತ್ಯವತಿ ವಿರುದ್ಧ ಸಾರಿಗೆ ಸಚಿವರಿಗೆ ಸಾಕಷ್ಟು ದೂರು ಬಂದಿತ್ತು. ಹೀಗಾಗಿ ಜಿ.ಸತ್ಯವತಿರನ್ನು ವರ್ಗಾವಣೆ ಮಾಡುವಂತೆ ಸಚಿವರಿಗೆ ಕೆಎಸ್ ಆರ್‌ಟಿಸಿ ಸ್ಟಾಫ್ ಆ?ಯಂಡ್ ವರ್ಕರ್ಸ್ ಫೆಡರೇಶನ್ ಮನವಿ ಮಾಡಿತ್ತು. ಈ ಆಧಾರದ ಮೇಲೆ ರಾಜ್ಯ ಸರ್ಕಾರ ಸತ್ಯವತಿ ಅವರಿಗೆ ಯಾವುದೇ ಹುದ್ದೆ ನೀಡದೆ ವರ್ಗಾವಣೆ ಮಾಡಿದೆ ಎಂದು ತಿಳಿದುಬಂದಿದೆ. ಯಾವುದೇ ಹುದ್ದೆ ನೀಡದೇ ಸತ್ಯವತಿಯನ್ನ ವರ್ಗಾವಣೆ ಮಾಡಿದ ಸರ್ಕಾರ, ಬಿಎಂಟಿಸಿಯ ನೂತನ ಎಂಡಿಯಾಗಿ ರಾಮಚಂದ್ರನ್ ಆರ್ ಅವರನ್ನು ನೇಮಕ ಮಾಡಿದೆ. ರಾಮಚಂದ್ರನ್ ಅವರು ಈ ಹಿಂದೆ ಬಿಬಿಎಂಪಿ ವಿಶೇಷ ಆಯುಕ್ತರಾಗಿ (ಚುನಾವಣಾ) ಕರ್ತವ್ಯ ನಿರ್ವಹಿಸುತ್ತಿದ್ದರು.

# ಹೋರಾಟಗಳಿಗೂ ಒಂದೇ ದಿನದಲ್ಲಿ ಫಲ ಸಿಗುವುದಿಲ್ಲ




**ಚನ್ನಪಟ್ಟಣ:** ಯಾವುದೆ ಹೋರಾಟಗಳಿಗೂ ಒಂದೇ ದಿನದಲ್ಲಿ ಫಲ ಸಿಗುವುದಿಲ್ಲ. ಕೆಆರ್‌ಎಸ್ ಜಲಾಶಯದ ಆಸುಪಾಸಿನಲ್ಲಿ ಕಲ್ಲುಗಣಿಗಾರಿಕೆ ನಿಷೇಧ ಮಾಡುವಂತೆ ಆಗ್ರಹಿಸಿ ನಾಲ್ಕು ವರ್ಷಗಳ ಹಿಂದೆ ಕಕಜ ವೇದಿಕೆಯು ಕೆಆರ್‌ಎಸ್‌ನಿಂದ ಬೆಂಗಳೂರು ವರೆಗೆ ಮಾಡಿದ ಆಂದೋಲನಕ್ಕೆ ಸುಪ್ರಿಂ ಕೋರ್ಟ್‌ನಿಂದ ಮಹತ್ವದ ಆದೇಶದ ಮೂಲಕ ಕೆಆರ್‌ಎಸ್ ಜಲಾಶಯದ ಆಸುಪಾಸಿನಲ್ಲಿ ಗಣಿಗಾರಿಕೆ ಮಾಡದಂತೆ ಫಲ ಸಿಕ್ಕಿದೆ. ಈ ನಿಟ್ಟಿನಲ್ಲಿ ಮೇಕದಾಟು ಯೋಜನೆಗೆ ಅಡಿಕಲ್ಲು ಹಾಕುವಂತೆ ನಾವು ನಡೆಸುವ ಹೋರಾಟಕ್ಕೆ ಮುಂದೆ ಫಲ ಸಿಗಲಿದೆ ಎಂದು ಕಕಜ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಅಭಿಪ್ರಾಯಿಸಿದರು.

ಕನ್ನಡ ನಾಮಫಲಕಗಳನ್ನು ಕಡ್ಡಾಯ ಮಾಡುವಂತೆ ಆಗ್ರಹಿಸಿ ಇಂಗ್ಲಿಷ್ ನಾಮಫಲಕಗಳನ್ನು ತೆರವು ಮಾಡಿದ ಕನ್ನಡಪರ ಹೋರಾಟಗಾರರನ್ನು ಬಂಧನದಿಂದ ಬಿಡುಗಡೆ ಮಾಡಿ ಅವರ ಮೇಲಿನ ಮೊಕದ್ದಮೆಗಳನ್ನು ವಾಪಸ್ ಪಡೆಯುವಂತೆ ಹಾಗೂಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಮಂಗಳವಾರ ನಡೆದ 97 ನೇ ದಿನದ ಹೋರಾಟದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರೈತ ಬಿತ್ತನೆ ಮಾಡಿದ ಆ ಬೆಳೆಯು ಆತನ ಕೈಗೆ ಸಿಗಲು ನಿಗಧಿತ ಕಾಲಾವಕಾಶ ಅಗತ್ಯ ಅದೇ ರೀತಿ ನಾಡು, ನುಡಿ, ಜಲ, ಭಾಷೆಯ ವಿಚಾರದಲ್ಲಿ ಸಮಸ್ಯೆ ಉಂಟಾದ ವೇಳೆ ನಾವು ಆರಂಬಿಸುವ ಹೋರಾಟಗಳಿಗೆ ಫಲ ಸಿಗಲು ಕಾಲಾವಕಾಸ ಪಡೆದುಕೊಳ್ಳುತ್ತದೆ. 2019 ರಲ್ಲಿ ಕೆಆರ್‌ಎಸ್ ಜಲಾಶಯದ ಸುತ್ತ ಕಲ್ಲು ಗಣಿಗಾರಿಕೆ ನಿಷೇಧ ಮಾಡುವಂತೆ ಆಗ್ರಹಿಸಿ ಮೊದಲ ಪ್ರತಿಭಟನೆಗೆ ದ್ವನಿ ಎತ್ತಿದ್ದೇ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯಿಂದ. ಈ ವೇಳೆ ಮೈಸೂರಿನಿಂದ ಬೆಂಗಳೂರಿನ ಫ್ರೀಡಂ ಪಾರ್ಕ್ ವರೆಗೆ ''ಕಲ್ಲುಗಣಿಗಾರಿಕೆ ನಿಲ್ಲಿಸಿ ಕೆಆರ್‌ಎಸ್ ಉಳಿಸಿ'' ಎಂದು 7 ದಿನಗಳ ಜಾಥಾ ಮಾಡಿ ಅಂದಿನ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರ್ಕಾರದ ಮುಖ್ಯಮಂತ್ರಿಗಳಾಗಿದ್ದ ಕ್ಷೇತ್ರದ ಶಾಸಕರಾದ ಹೆಚ್.ಡಿ.ಕುಮಾರಸ್ವಾಮಿಅವರಿಗೆ ಮನವಿ ಸಲ್ಲಿಸಿದ್ದೆವು. ಆದರೆ ಈ ಪ್ರಕರಣದಲ್ಲಿ ಮಂಡ್ಯದ ಪ್ರಭಾವಿ ಜೆಡಿಎಸ್ ಜನಪ್ರತಿನಿಧಿಗಳ ಸಂಬಂದಿಯೇ ಈ ಗಣಿಗಾರಿಕೆಯನ್ನು ನಡೆಸುತ್ತಿದ್ದ ಅನುಮಾನ ಇದ್ದ ನಿಟ್ಟಿನಲ್ಲಿ ಈ ಬಗ್ಗೆ ಅವರು ಹೆಚ್ಚು ಗಮನ ನೀಡಲಿಲ್ಲ. ಅಂದು ನಮ್ಮ ಹೋರಾಟಕ್ಕೆ ಸ್ಪಂದಿಸಿ ಅವರ ಸಂಪುಟದಿಂದಲೇ ಕೆಆರ್‌ಎಸ್ ಜಲಾಶಯದ ಆಸುಪಾಸು ಕಲ್ಲು ಗಣಿಕಾರಿಕೆ ನಿಲ್ಲಿಸಿದ್ದರೆ ಅದು ಅಂದಿನ ಸರ್ಕಾರಕ್ಕೆ ಹೆಸರು ತರುತ್ತಿತ್ತು;. ಆದರೆ ಕಾಲಾಯ ತಸ್ಮೈ ನಮಃ ಎಂಬ ನಿಟ್ಟಿನಲ್ಲಿ ಇಂದು ಸುಪ್ರಿಂ ಕೋರ್ಟ್ ಮೂಲಕ ಕಲ್ಲುಗಣಿಗಾರಿಕೆಗೆ ಬ್ರೇಕ್ ಬಿದ್ದಿದೆ ಎಂದು ರಮೇಶ್‌ಗೌಡರ ಸುಪ್ರಿಂ ಕೋರ್ಟ್‌ನ ತೀರ್ಪನ್ನು ಸ್ವಾಗತಿಸಿದರು.

ನಾಡಿನ ಒಳಿತಿಗಾಗಿ ನಾವು ಯಾವುದೇ ಹೋರಾಟಕ್ಕೆ ಮುಂದಾದರೂ ಅದರಿಂದ ಹಲವರಿಗೆ ಸಮಸ್ಯೆ ಉಂಟಾಗುತ್ತದೆ. ಅದೇ ನಿಟ್ಟಿನಲ್ಲಿ ಅಂದು ಕೆಆರ್‌ಎಸ್ ಜಲಾಶಯದ ಆಸುಪಾಸು ಕಲ್ಲುಗಣಿಗಾರಿಗೆ ನಿಷೇಧ ಮಾಡುವಂತೆ ವೇದಿಕೆ ಮಾಡಿದ ಹೋರಾಟದಲ್ಲಿ ನಮ್ಮವರನ್ನೇ ಬುಕ್ ಮಾಡಿಕೊಂಡಿದ್ದ ಗಣಿಮಾಲೀಕರು ನಮ್ಮನ್ನು ಬೆಂಕಿಇಟ್ಟು ಜೀವಂತ ಸುಡುವ ಸಂಚು ರೂಪಿಸಿದರು. ಜೊತೆಗೆ ಫ್ರೀಡಂ ಪಾರ್ಕ್‌ನಲ್ಲಿ ಸಹ ಪ್ರತಿಭಟನೆಯ ದಿಕ್ಕು ತಪ್ಪಿಸಿ ನಮ್ಮನ್ನು ಮುಗಿಸುವ ಸಂಚು ರೂಪಿಸಿದರು. ಆದರೆ ಕಾವೇರಿ ಮಾತೆಯ ಆಶೀರ್ವಾದ ಮುನ್ನೆಚ್ಚರದಿಂದ ಎಲ್ಲಾ ಸಂಚುಗಳಿಂದ ಪಾರಾದೆವು. ನಮ್ಮ ಆಂದೋಲನದಿಂದ ಈ ಕಲ್ಲುಗಣಿಗಾರಿಕೆಯಿಂದ ಕೆಲ ರಾಜಕಾಣಿಗಳು ಕಿಸೆಗೆ ಹೋಗುತ್ತಿದ್ದ ಕೋಟ್ಯಾಂತರ ರೂ. ಗೆ ಕತ್ತರಿಬಿದ್ದ ನಿಟ್ಟಿನಲ್ಲಿ ಅವರಿಂದಲೂ ನಮಗೆ ಸಾಕಷ್ಟ ಮಾನಸಿಕ ಸಮಸ್ಯೆ ಉಂಟು ಮಾಡಿದರು. ಆದರೆ ಈ ಎಲ್ಲವನ್ನು ಸಹಿಸಿ ನಾಡಿನ ಒಳಿತಿಕೆ ಶ್ರಮಿಸುತ್ತಿರುವ ನಮ್ಮ ಹೋರಾಟಕ್ಕೆ ನ್ಯಾಯದೇವತೆಯಿಂದ ನ್ಯಾಯಸಿಕ್ಕಿದ್ದು ಕೆಆರ್‌ಎಸ್ ಜಲಾಶಯದ ಸುತ್ತಲೂ 20 ಕಿಮೀ ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ಮಾಡದಂತೆ ಸುಪ್ರಿಂ ಕೋರ್ಟ್ ಆದೇಶ ನೀಡಿರುವುದು ನಮ್ಮ ಹೋರಾಟಕ್ಕೆ ಸಿಕ್ಕ ಫಲವಾಗಿದೆ. ಈ ನಿಟ್ಟಿನಲ್ಲಿ ಮೇಕೆದಾಟು ಯೋಜನೆಯ ಅಡಿಗಲ್ಲು ಹಾಕುವವರೆಗೆ ನಮ್ಮ ಈ ಹೋರಾಟವನ್ನು ನಿಲ್ಲಿಸುವ ಮಾತಿಲ್ಲ ಎಂದು ರಮೇಶ್‌ಗೌಡರು ತಿಳಿಸಿದರು.

## ಶಾಲಾ ಶಿಕ್ಷಕರ ವಿರುದ್ಧ ಎಫ್ಐಆರ್ : ಹೋಟೆಲ್-ಅಂಗಡಿ ಬೀಗ ತೆಗಿಸಲು ಆಗ್ರಹ

# ಬಡರೈತನ ಭೂಮಿ ಕಬಳಿಸಿದ ಶಿಕ್ಷಣ ಇಲಾಖೆ



**ಮಂಡ್ಯ :** ಮದ್ದೂರು ತಾಲ್ಲೂಕು ಕೆ.ಹೊನ್ನಲಗೆರೆ ಗ್ರಾಮದ ಶ್ರೀಮಲ್ಲೇಶ್ವರಸ್ವಾಮಿ ದೇವಾಲಯದ ಅರ್ಚಕರ ಕುಟುಂಬಕ್ಕೆ ಸೇರಿದ ಸರ್ವೇನಂ.104ರ 4.07ಗುಂಟೆ ಜಮೀನಿನಲ್ಲಿ ಸುಮಾರು ಎರಡು ಎಕರೆ ಜಾಗಕ್ಕೆ ಅತಿಕ್ರಮವಾಗಿ ಕಾಂಪೌಂಡ್ ನಿರ್ಮಾಣ ಮಾಡಿಕೊಂಡಿರುವ ಶಾಲಾ ಆಡಳಿತ ಮಂಡಳಿ ಸರ್ವೇ ಕಾರ್ಯಕ್ಕೆ ಅಡ್ಡಿಪಡಿಸಿ ಅರ್ಚಕರ ಕುಟುಂಬದ ಮೇಲೆ ಹಲ್ಲೆಗೆ ಯತ್ನಿಸಿರುವುದನ್ನು ಮಂಡ್ಯ ಜಿಲ್ಲಾ ಮುಜರಾಯಿ ದೇವಾಲಯಗಳ ಅರ್ಚಕರು, ಆಗಮಿಕರು ಮತ್ತು ನೌಕರರ ಸಂಘ ತೀವ್ರವಾಗಿ ಖಂಡಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಅರುಣ್‌ಕುಮಾರ್,ನೂರಾರು ವರ್ಷಗಳಿಂದ ಸರ್ವೇನಂ.104ರ ಜಾಗದಲ್ಲಿ ವ್ಯವಸಾಯ ಮಾಡಿಕೊಂಡು ಬಂದಿರುವ ರುದ್ರಮ್ಮ ಹಾಗೂ ಮಾದಪ್ಪ ಕುಟುಂಬದವರಿಗೆ ಜಿಲ್ಲಾ ಭೂನ್ಯಾಯ ಮಂಡಳಿ 1980ರಲ್ಲಿ ನಿಗದಿತ ಹಣವನ್ನು ಕಟ್ಟಿಸಿಕೊಂಡು ಕಾನೂನುಪ್ರಕಾರ ಖಾತೆ ಮಾಡಿಕೊಟ್ಟಿದೆ. ಅಂದಿನಿಂದ ಇಂದಿನವರೆಗೆ ಎಲ್ಲಾ ಭೂದಾಖಲಾತಿಗಳು ಇವರ ಹೆಸರಿನಲ್ಲೇ ಇದ್ದು ಕಂದಾಯವನ್ನು ಪಾವತಿಸಿಕೊಂಡು ಬಂದಿದ್ದಾರೆ ಎಂದು ದಾಖಲಾತಿಗಳನ್ನು ಹಾಜರುಪಡಿಸಿದರು.

ಆರ್‌ಟಿಸಿ, ಎಂ.ಆರ್. ಸೇರಿದಂತೆ ಎಲ್ಲಾ ದಾಖಲಾತಿಗಳನ್ನು ಹೊಂದಿರುವ ಅರ್ಚಕರ ಕುಟುಂಬದವರ ಜಮೀನಿನಲ್ಲಿ ಯಾವುದೇ ಕಟ್ಟಡ ನಿರ್ಮಾಣಮಾಡಬಾರದು ಎಂದು ಶಾಲಾ ಆಡಳಿತಮಂಡಳಿಗೆ ನೋಟೀಸ್ ನೀಡಿದ್ದರೂ ಅಂಗನವಾಡಿ, ಕಂಪ್ಯೂಟರ್ ಕೇಂದ್ರವನ್ನು ನಿರ್ಮಾಣಮಾಡಿ ಅರ್ಚಕರ ಕುಟುಂಬದ ಆಸ್ತಿಯನ್ನು ಮೂವತ್ತು ವರ್ಷಗಳಿಂದ ಬಿಟ್ಟುಕೊಡದೆ ವಂಚಿಸುತ್ತಿದ್ದಾರೆ.

ಶಾಲೆಯ ಆಟದ ಮೈದಾನಕ್ಕೆ ಸರಿಸುಮಾರು ಎರಡು ಎಕರೆಯಷ್ಟು ಜಾಗವನ್ನು ಕಾಂಪೌಂಡ್ ಹಾಕಿ ಅಕ್ರಮವಾಗಿ ಒತ್ತುವರಿಮಾಡಿಕೊಂಡಿದ್ದಾರೆ. ಅರ್ಚಕರ ಕುಟುಂಬದವರು ಯಾವುದೇ ದಾನ, ಕ್ರಯ, ಅನುಮತಿ ನೀಡದಿದ್ದರೂ ಗ್ರಾಮಪಂಚಾಯಿತಿ ಪಿಡಿಒ, ಅಧಿಕಾರಿಗಳು ಅತಿಕ್ರಮವಾಗಿ ಕಟ್ಟಡಗಳು, ಶೌಚಾಲಯ, ಬಸ್ ನಿಲ್ದಾಣ ನಿರ್ಮಿಸಿಕೊಂಡು ಜಮೀನಿನ ಒಳಗಡೆ ಪ್ರವೇಶಕ್ಕೂ ಅವಕಾಶ ನೀಡದೆ ಕಾಂಪೌಂಡ್ ನಿರ್ಮಿಸಿ ಕಿರುಕುಳ ನೀಡುತ್ತಿದ್ದಾರೆ ಎಂದರು.

ಅರ್ಚಕರ ಮೇಲೆ ಹಲ್ಲೆ : ಜ.6ರಂದು ಸ್ಥಳಪರಿಶೀಲನೆಗೆ ಮದ್ದೂರು ತಹಸೀಲ್ದಾರ್‌ರವರು ಆಗಮಿಸುವ ಸುಳಿವು ತಿಳಿದು ಸದರಿ ಜಾಗವನ್ನು ಅಳತೆ (ಹದ್ದುಬಸ್ತು) ಮಾಡಿಸಬಾರದೆಂಬ ದುರುದ್ದೇಶದಿಂದ ಕೆ.ಹೊನ್ನಲಗೆರೆ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕ ವೆಂಕಟೇಶ್ ಹಾಗೂ ದೈಹಿಕಶಿಕ್ಷಣ ಶಿಕ್ಷಕ ಸಂತೋಷ್ ಎಂಬುವವರು ಶಾಲೆಯ ಸಮಯದಲ್ಲಿ ಶಾಲಾಮಕ್ಕಳನ್ನು ಬಳಸಿಕೊಂಡು ಅರ್ಚಕರ ಕುಟುಂಬಕ್ಕೆ ಸೇರಿದ ಅಂಗಡಿಮನೆಯ ಮುಂದೆ ಪ್ರತಿಭಟನೆ ಮಾಡಿಸಿ ರಸ್ತೆ ತಡೆ ನಡೆಸಿ ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆ ಎಂದರು.

ಈ ಸಂದರ್ಭ ಬಳಸಿಕೊಂಡು ಗ್ರಾಮದ ಕೆಲವರು ಅಂಗಡಿ ಮುಂದೆ ಇದ್ದ ಬೆಂಚು, ಚೇರುಗಳನ್ನು ಬೀದಿಗೆ ಎಸೆದು ಅರ್ಚಕರ ಕುಟುಂಬದವರು ಜೀವನೋಪಾಯಕ್ಕಾಗಿ ನಡೆಸುತ್ತಿದ್ದ ಹೋಟೆಲ್ ಒಳಗೆ ನುಗ್ಗಿ ದಾಂಧಲೆ ನಡೆಸಿದ್ದಾರೆ. ಅರ್ಚಕ ಹೆಚ್.ಎಂ.ಪ್ರಕಾಶ್ ಅವರ ಪತ್ನಿ ಜಗದಾಂಭ ಹಾಗೂ ಮಗ ಹೆಚ್.ಪಿ.ಸಾಗರ್ ಎಂಬುವವರಿಗೆ ಅವಾಚ್ಯಶಬ್ಧಗಳಿಂದ ನಿಂದಿಸಿ ಪ್ರಾಣಬೆದರಿಕೆ ಒಡ್ಡಿದ್ದು ಪೊಲೀಸರು ರಕ್ಷಣೆ ನೀಡಬೇಕೆಂದು ಒತ್ತಾಯಿಸಿದರು.

ಗೋಷ್ಠಿಯಲ್ಲಿ ಕನ್ನಡಸೇನೆಯ ಉಪಾಧ್ಯಕ್ಷ ಎಂ.ಎಸ್.ಮಂಜುನಾಥ್‌ಬೆಟ್ಟಹಳ್ಳಿ, ಅರ್ಚಕರ ಸಂಘದ ಮದ್ದೂರು ತಾಲ್ಲೂಕು ಅಧ್ಯಕ್ಷ ಮೆಣಸಗೆರೆ ಶಿವಲಿಂಗಯ್ಯ ಮತ್ತಿತರರಿದ್ದರು.

### ನೆರವಿಗೆ ಬಾರದ ತಹಸೀಲ್ದಾರ್

**ಅರ್ಚಕರ ಹೋಟೆಲ್, ಅಂಗಡಿ ಮಳಿಗೆಗಳಿಗೆ ಕಾನೂನುಬಾಹಿರವಾಗಿ ಹಾಕಿರುವ ಬೀಗವನ್ನು ತಾಲ್ಲೂಕು ಆಡಳಿತ ತೆರವುಗೊಳಿಸಿ ಗಲಭೆಗೆ ಕುಮ್ಮಕ್ಕು ನೀಡಿದ ಶಿಕ್ಷಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ ಕನ್ನಡಸೇನೆ ಉಪಾಧ್ಯಕ್ಷ ಎಂ.ಎಸ್.ಮಂಜುನಾಥ್, ಶಿಕ್ಷಕರ ಮೇಲೆ ಎಫ್ಐಆರ್ ದಾಖಲಿಸಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಅಕ್ರಮವಾಗಿ ಒತ್ತುವರಿಯಾಗಿರುವ ಜಮೀನು ದಾಖಲಾತಿ ಅರ್ಚಕ ಹೆಚ್.ಎಂ.ಪ್ರಕಾಶ್ ಪರವಾಗಿದ್ದರೂ ತಾಲ್ಲೂಕು ದಂಡಾಧಿಕಾರಿ ದಾಖಲಾತಿಗಳ ಪರವಾಗಿ ನಿಲ್ಲದಿರುವುದು ಹಲವು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ ಎಂದು ಆರೋಪಿಸಿದರು. ಅಧಿಕಾರ ದುರ್ಬಳಕೆ ಮಾಡಿಕೊಂಡು ದೌರ್ಜನ್ಯವೆಸಗಿದ ಶಿಕ್ಷಕರ ವಿರುದ್ಧ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಜಿಲ್ಲಾಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲದರಿರುವುದು ಖಂಡನೀಯ. ಈ ಕೂಡಲೇ ತಪ್ಪಿತಸ್ಥ ಶಾಲಾಶಿಕ್ಷಕರನ್ನು ಅಮಾನತುಗೊಳಿಸಬೇಕೆಂದು ಆಗ್ರಹಿಸಿ ಡಿಡಿಪಿಐ, ಬಿಇಒ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದರು. ಸಂವಿಧಾನ ವಿರೋಧಿ ನಡೆ ಅನುಸರಿಸಿ ಅಕ್ರಮವಾಗಿ ಕಾಂಪೌಂಡ್ ನಿರ್ಮಾಣಮಾಡಿಕೊಂಡಿರುವ ಶಾಲೆಯವರು ಈ ಕೂಡಲೇ ಸರ್ವೇನಂ.104ರ ಜಾಗವನ್ನು ತೆರವುಗೊಳಿಸಲು ತಹಸೀಲ್ದಾರ್‌ರವರು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ ಅವರು ಸೂಕ್ತ ದಾಖಲಾತಿಗಳಿದ್ದರೂ ತಾಲ್ಲೂಕು ಆಡಳಿತ ಅರ್ಚಕರ ನೆರವಿಗೆ ಬಾರದಿರುವುದು ಖಂಡನೀಯ ಎಂದರು.**

# ಸಂಜೆ ಟಿಪ್ಸ್




## ಸೌಂಧ ಐದನೇ ಮಳಿಗೆ ಉದ್ಘಾಟನೆ

ಉದ್ಯಾನ ನಗರಿಯಲ್ಲಿ ಗ್ರಾಹಕರ ನೆಚ್ಚಿನ ಶಾಪಿಂಗ್ ತಾಣವಾಗಿ ವೇಗವಾಗಿ ಬೆಳೆಯುತ್ತಿರುವ ಸೌಂಧ್ ಬೆಂಗಳೂರಿನ ಫೀನಿಕ್ಸ್ ಮಾಲ್ ಆಫ್ ಏಷ್ಯಾದ ಹೃದಯ ಭಾಗದಲ್ಲಿ ತನ್ನ ಐದನೇ ಮಳಿಗೆಯನ್ನು ಹೆಮ್ಮೆಯಿಂದ ಅನಾವರಣಗೊಳಿಸಿದೆ. ಈ ಅತ್ಯಾಕರ್ಷಕ ಸೇರ್ಪಡೆಯು ದೇಶದಲ್ಲಿ ಬ್ರ್ಯಾಂಡ್ನ 34ನೇ ಮಳಿಗೆಯಾಗಿದ್ದು, ಕೈಗೆಟುಕುವ ಬೆಲೆಯಲ್ಲಿ ಪುರುಷರು ಮತ್ತು ಮಹಿಳೆಯರ ಐಷಾರಾಮಿ ಉಡುಗೆಗಳಿಗೆ ಸಮಗ್ರ, ಏಕನಿಲುಗಡೆ-ಶಾಪ್ನ ಭರವಸೆ ನೀಡುತ್ತದೆ. ಅಕ್ಟೋಬರ್ನಲ್ಲಿ ತಮ್ಮ ಇಂದಿರಾನಗರದ ಮಳಿಗೆಯ ಯಶಸ್ವಿ ಪ್ರಾರಂಭದ ವಿಜಯದ ಮೇಲೆ ಹೊಸ ಮಳಿಗೆ ಆರಂಭಿಸಿರುವ ಸೌಂಧ್, ಫೀನಿಕ್ಸ್ ಮಾಲ್ ಆಫ್ ಏಷ್ಯಾದಲ್ಲಿ ತನ್ನ ಇತ್ತೀಚಿನ ಮಳಿಗೆಯ ಪ್ರವೇಶದೊಂದಿಗೆ ಮಾರುಕಟ್ಟೆಯಲ್ಲಿ ಉತ್ತಮ ಸಾಧನೆ ತೋರುವ ತನ್ನ ಬದ್ಧತೆಯನ್ನು ಪುನರುಚ್ಚರಿಸಿದೆ. ಫ್ರಾಂಚೈಸ್ ಪಾಲುದಾರರಾದ ರಿತು ಪಟೋಡಿಯಾ ಮತ್ತು ಉದಯನ್ ಪಟೋಡಿಯಾ ಅವರ ಸಹಯೋಗದೊಂದಿಗೆ ಹೊಸ ಮಳಿಗೆ ಆರಂಭಗೊಂಡಿದೆ. ಹೊಸ ಮಳಿಗೆ ಕುರಿತು ಕುರಿತು ತಮ್ಮ ಆಲೋಚನೆಗಳನ್ನು ಹಂಚಿಕೊಂಡ ಶ್ರೀ ಸರಬ್ಜೀತ್ ಸಲುಜಾ, ಸಂಸ್ಥಾಪಕ ಮತ್ತು ಸಿಇಒ, ಸೌಂಧ್ ಅವರು ಹೇಳಿದರು, 'ಸೌಂಧ್ನ ಪ್ರಯಾಣವು ಸಾಟಿಯಿಲ್ಲದ ಶಾಪಿಂಗ್ ಅನುಭವವನ್ನು ಸೃಷ್ಟಿಸುವ ಉತ್ಸಾಹದಿಂದ ಪ್ರೇರೇಪಿತವಾಗಿದೆ. ನಗರದಲ್ಲಿ ನಮ್ಮ ಐದನೇ ಮಳಿಗೆಯ ಪ್ರಾರಂಭವು ಗ್ರಾಹಕರ ಅಪಾರ ಪ್ರೀತಿ ಮತ್ತು ಬೆಂಬಲಕ್ಕೆ ಸಾಕ್ಷಿಯಾಗಿದೆ. ಬೆಂಗಳೂರಿನ ಜನರು ನಮ್ಮ ಮೇಲೆ ಪ್ರೀತಿಯ ಧಾರೆ ಎರೆದಿದ್ದಾರೆ. ಈ ಹೊಸ ಮಳಿಗೆಯೊಂದಿಗೆ, ನಗರದಲ್ಲಿ ರೋಮಾಂಚಕ ಶಾಪಿಂಗ್ ಅನುಭವವನ್ನು ಹೆಚ್ಚಿಸಲು ನಾವು ಬಯಸುತ್ತೇವೆ.'

## ದಾಸವಾಳ ಟೀ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಒಣ ದಾಸವಾಳ ದಳ – 1 ಕಪ್, ನೀರು – 2 ಕಪ್, 1 ಲೀಟರ್
ಸಕ್ಕರೆ ಪುಡಿ – 1 ಕಪ್, ತಂಪಾದ ನೀರು – 1 ಲೀಟರ್, ಐಸ್ ಕ್ಯೂಬ್ಸ್ – ಅಗತ್ಯಕ್ಕೆ ತಕ್ಕಂತೆ

### ಮಾಡುವ ವಿಧಾನ

ಮೊದಲಿಗೆ ಒಂದು ಪಾತ್ರೆಯಲ್ಲಿ 2 ಕಪ್ ನೀರು ಹಾಕಿ, ಅದರಲ್ಲಿ ಒಣಗಿದ ದಾಸವಾಳ ದಳಗಳನ್ನು ಸೇರಿಸಿ, ಬಿಸಿ ಮಾಡಿ. ನಂತರ ಕುದಿ ಬಂದ ತಕ್ಷಣ ಉರಿಯನ್ನು ಕಡಿಮೆ ಮಾಡಿ, ಸುಮಾರು 15 ನಿಮಿಷಗಳ ಕಾಲ ಕುದಿಸಿಕೊಳ್ಳಬೇಕು. ಮತ್ತೊಂದು ಪಾತ್ರೆಯಲ್ಲಿ 1 ಲೀಟರ್ ತಂಪಾದ ನೀರಿಗೆ ಸಕ್ಕರೆ ಪುಡಿ ಹಾಕಿ ಅದು ಕರಗುವತನಕ ಮಿಶ್ರಣ ಮಾಡಿ. ದಾಸವಾಳ ಹಾಗೂ ನೀರಿನ ಮಿಶ್ರಣವನ್ನು ಶಾಖದಿಂದ ತೆಗೆದುಹಾಕಿ ಸುಮಾರು 30 ನಿಮಿಷ ತಣ್ಣಗಾಗಲು ಬಿಡಿ. 30 ನಿಮಿಷಗಳ ನಂತರ ದಾಸವಾಳದ ದಳಗಳನ್ನು ನೀರಿನಿಂದ ಪ್ರತ್ಯೇಕಿಸಿ ನಂತರ ಸಕ್ಕರೆ ಸೇರಿಸಿದ ನೀರಿಗೆ ದಾಸವಾಳದ ದ್ರವವನ್ನು ಸೇರಿಸಿ ಮಿಶ್ರಣ ಮಾಡಿ. ಕೊನೆಯಲ್ಲಿ ಐಸ್ ಕ್ಯೂಬ್ ಸೇರಿಸಿ ಗ್ಲಾಸ್ಗಳಲ್ಲಿ ಬಡಿಸಿ, ದಾಸವಾಳ ಟೀಯನ್ನು ಕುಡಿಯಿರಿ.

## ಸ್ತನ ಕ್ಯಾನ್ಸರ್ ಇರಲಿ ಜಾಗೃತೆ

### ಹೆಲ್ತ್ ಟಿಪ್ಸ್



ಸ್ತನದಲ್ಲಿ ಉಂಡೆಯ ಆವಿಷ್ಕಾರವು ವ್ಯಕ್ತಿಗಳಿಗೆ ಆತಂಕಕಾರಿ ಅನುಭವವಾಗಬಹುದು, ಫೈಬ್ರೊಸಿಸ್ಟಿಕ್ ಸ್ತನ ಕಾಯಿಲೆ, ಮಾಸ್ಟಿಟಿಸ್ ಮತ್ತು ಸ್ತನ ಕ್ಯಾನ್ಸರ್ ಸೇರಿದಂತೆ ವಿವಿಧ ಸಂಭಾವ್ಯ ಪರಿಸ್ಥಿತಿಗಳ ಬಗ್ಗೆ ಕಳವಳವನ್ನು ಉಂಟುಮಾಡುತ್ತದೆ. ನಿಖರವಾದ ರೋಗನಿರ್ಣಯ, ಸಮಯೋಚಿತ ಹಸ್ತಕ್ಷೇಪ ಮತ್ತು ಸರಿಯಾದ ನಿರ್ವಹಣೆಗಾಗಿ ಈ ಘಟಕಗಳ ನಡುವೆ ವ್ಯತ್ಯಾಸವನ್ನು ಕಂಡುಹಿಡಿಯುವುದು ಬಹಳ ಮುಖ್ಯ. ಫೈಬ್ರೊಸಿಸ್ಟಿಕ್ ಸ್ತನ ಬದಲಾವಣೆಗಳು ಸಾಮಾನ್ಯ ಮತ್ತು ಕ್ಯಾನ್ಸರ್ ಅಲ್ಲದವು, ಇದು ಸ್ತನದಲ್ಲಿ ಉಂಡೆಗಳ ರಚನೆ ಅಥವಾ ದಪ್ಪನಾದ ಅಂಗಾಂಶದ ಪ್ರದೇಶಗಳಿಗೆ ಕಾರಣವಾಗುತ್ತದೆ. ಈ ಬದಲಾವಣೆಗಳು ಸಾಮಾನ್ಯವಾಗಿ ಋತುಚಕ್ರದ ಸಮಯದಲ್ಲಿ ಹಾರ್ಮೋನುಗಳ ಏರಿಳಿತಗಳಿಂದ ಉಂಟಾಗುತ್ತವೆ ಮತ್ತು ಋತುಚಕ್ರದ ಉದ್ದಕ್ಕೂ ಗಾತ್ರ ಮತ್ತು ಮೃದುತ್ವದಲ್ಲಿ ಏರಿಳಿತಗೊಳ್ಳುವ ಬಹು ಸಣ್ಣ, ಚಲಿಸಬಲ್ಲ ಉಂಡೆಗಳಾಗಿ ವಿಶಿಷ್ಟವಾಗಿ ಪ್ರಕಟವಾಗುತ್ತದೆ ಎಂದು ಅಪೋಲೋ ಆಸ್ಪತ್ರೆಯ ಡಾ.ನಂದಾ ರಜನೀಶ್ ತಿಳಿಸಿದ್ದಾರೆ. ಫೈಬ್ರೊಸಿಸ್ಟಿಕ್ ಬದಲಾವಣೆಗಳಿಗೆ ಸಂಬಂಧಿಸಿದ ರೋಗಲಕ್ಷಣಗಳಲ್ಲಿ ಸ್ತನ ನೋವು, ಮೃದುತ್ವ, ಊತ ಮತ್ತು ದ್ರವ ತುಂಬಿದ ಚೀಲಗಳ ಉಪಸ್ಥಿತಿ ಸೇರಿವೆ. ಈ ಬದಲಾವಣೆಗಳು ಸ್ತನ ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸದಿದ್ದರೂ, ಅವರು ಅಸ್ವಸ್ಥತೆಯನ್ನು ಉಂಟುಮಾಡಬಹುದು ಮತ್ತು ಹೆಚ್ಚು ಸಂಬಂಧಿಸಿದ ಪರಿಸ್ಥಿತಿಗಳ ಲಕ್ಷಣಗಳನ್ನು ಅನುಕರಿಸಬಹುದು.

ಮಾಸ್ಟಿಟಿಸ್ ಸ್ತನ ಅಂಗಾಂಶದ ಉರಿಯೂತವನ್ನು ಸೂಚಿಸುತ್ತದೆ, ಹಾಲುಣಿಸುವ ಮಹಿಳೆಯರಲ್ಲಿ ಸಾಮಾನ್ಯವಾಗಿ ಹಾಲಿನ ನಾಳದಅಡಚಣೆ ಅಥವಾ ಬ್ಯಾಕ್ಟೀರಿಯಾದ ಸೋಂಕಿನಿಂದ ಉಂಟಾಗುತ್ತದೆ. ಇದು ಸ್ತನದಲ್ಲಿ ಕೆಂಪು, ಉಷ್ಣತೆ, ಊತ ಮತ್ತು ಮೃದುತ್ವದ ಸ್ಥಳೀಯ ಪ್ರದೇಶವನ್ನು ಒದಗಿಸುತ್ತದೆ, ಆಗಾಗ್ಗೆ ಜ್ವರ ಮತ್ತು ಜ್ವರ ತರಹದ ರೋಗಲಕ್ಷಣಗಳೊಂದಿಗೆ ಇರುತ್ತದೆ. ನಾಳಗಳೊಳಗೆಹಾಲಿನ ಹರಿವಿನ ಅಡಚಣೆಯು ಹಾಲಿನ ಶೇಖರಣೆಗೆ ಕಾರಣವಾಗಬಹುದು, ಉರಿಯೂತ ಮತ್ತು ನಂತರದ ಸೋಂಕನ್ನುಉಂಟುಮಾಡುತ್ತದೆ. ಮಾಸ್ಟೈಟಿಸ್ ಅನ್ನು ಪರಿಹರಿಸಲು ಮತ್ತು ತೊಡಕುಗಳನ್ನು ತಡೆಗಟ್ಟಲು ಪ್ರತಿಜೀವಕಗಳು ಮತ್ತುಮುಂದುವರಿದ ಹಾಲುಣಿಸುವಿಕೆ ಅಥವಾ ಹಾಲಿನ ಅಭಿವ್ಯಕ್ತಿ ಸೇರಿದಂತೆ ತ್ವರಿತ ಗುರುತಿಸುವಿಕೆ ಮತ್ತು ಚಿಕಿತ್ಸೆಯು ನಿರ್ಣಾಯಕವಾಗಿದೆ. ಸ್ತನ ಕ್ಯಾನ್ಸರ್ ಸ್ತನ ಅಂಗಾಂಶದೊಳಗಿನ ಅಸಹಜ ಕೋಶಗಳ ಅನಿಯಂತ್ರಿತ ಬೆಳವಣಿಗೆಯನ್ನು ಒಳಗೊಂಡಿರುತ್ತದೆ ಮತ್ತುಸುತ್ತಮುತ್ತಲಿನ ಅಂಗಾಂಶಕ್ಕಿಂತ ಭಿನ್ನವಾಗಿ ಭಾಸವಾಗುವ ಒಂದು ಗಡ್ಡೆ ಅಥವಾ ದಪ್ಪವಾಗುವುದು. ಆದಾಗ್ಯೂ, ಎಲ್ಲಾ ಸ್ತನಉಂಡೆಗಳೂ ಕ್ಯಾನ್ಸರ್ ಅನ್ನು ಸೂಚಿಸುವುದಿಲ್ಲ, ಮತ್ತು ಅನೇಕ ಹಾನಿಕರವಲ್ಲದ ಪರಿಸ್ಥಿತಿಗಳು ಅದರ ಪ್ರಸ್ತುತಿಯನ್ನುಅನುಕರಿಸುತ್ತವೆ.

ಕಾಳಜಿಯನ್ನು ಖಾತರಿಪಡಿಸುವ ಗುಣಲಕ್ಷಣಗಳೆಂದರೆ, ಸ್ಥಿರವಾದ ಮತ್ತು ಋತುಚಕ್ರದೊಂದಿಗೆ ಬದಲಾಗದೆ ಇರುವ ಏಕಾಂಗಿ,ದೃಢವಾದ ಗಡ್ಡೆ, ಮೇಲಿನ ಚರ್ಮದಲ್ಲಿನ ಬದಲಾವಣೆಗಳು (ಡಿಂಪ್ಲಿಂಗ್ ಅಥವಾ ಪುಕ್ಕರಿಂಗ್ನಂತಹವು), ಮೊಲೆತೊಟ್ಟುಗಳ ಹಿಂತೆಗೆದುಕೊಳ್ಳುವಿಕೆ, ಡಿಸ್ಚಾರ್ಜ್ ಅಥವಾ ಸ್ತನ ಗಾತ್ರ ಅಥವಾ ಆಕಾರದಲ್ಲಿ ನಿರಂತರ ಬದಲಾವಣೆಗಳು. ಮ್ಯಾಮೊಗ್ರಾಮ್ಗಳು, ಅಲ್ಟ್ರಾಸೌಂಡ್ಗಳು ಮತ್ತು ಬಯಾಪ್ಸಿಗಳು ಸೇರಿದಂತೆ ರೋಗನಿರ್ಣಯದ ತಂತ್ರಗಳು ಕ್ಯಾನ್ಸರ್ ಕೋಶಗಳಉಪಸ್ಥಿತಿಯನ್ನು ದೃಢೀಕರಿಸುವಲ್ಲಿ ಸಹಾಯ ಮಾಡುತ್ತವೆ ಮತ್ತು ಶಸ್ತ್ರಚಿಕಿತ್ಸೆ, ಕಿಮೊಥೆರಪಿ, ವಿಕಿರಣ ಚಿಕಿತ್ಸೆ ಅಥವಾ ಉದ್ದೇಶಿತ ಚಿಕಿತ್ಸೆಗಳನ್ನು ಒಳಗೊಂಡಿರುವ ಚಿಕಿತ್ಸೆಯ ಸರಿಯಾದ ಕೋರ್ಸ್ ಅನ್ನು ನಿರ್ಧರಿಸುತ್ತದೆ.ಫೈಬ್ರೊಸಿಸ್ಟಿಕ್ ಸ್ತನ ಕಾಯಿಲೆ, ಮಾಸ್ಟಿಟಿಸ್ ಮತ್ತು ಸ್ತನ ಕ್ಯಾನ್ಸರ್ ನಡುವಿನ ವ್ಯತ್ಯಾಸಗಳನ್ನು ಅರ್ಥಮಾಡಿಕೊಳ್ಳುವುದು ಆತಂಕವನ್ನು ನಿವಾರಿಸುವಲ್ಲಿ ಮತ್ತು ಸರಿಯಾದ ಕ್ರಮಗಳಿಗೆ ಮಾರ್ಗದರ್ಶನ ನೀಡುವಲ್ಲಿ ಪ್ರಮುಖವಾಗಿದೆ.

## ಫೇಶಿಯಲ್ ಟಿಪ್ಸ್

ಪಾರ್ಟಿ ಅಥವಾ ಮದುವೆಗೆ ಹೋಗುವಾಗ ಹುಡುಗಿಯರು ಸಾಕಷ್ಟು ಸಿದ್ಧತೆಗಳನ್ನು ಮಾಡಿಕೊಳ್ತಾರೆ. ದುಬಾರಿ ಸೌಂದರ್ಯ ಉತ್ಪನ್ನಗಳನ್ನು ಬಳಸ್ತಾರೆ. ಕೆಲಸಕ್ಕೆ ಹೋಗುವ ಹುಡುಗಿಯರಿಗೆ ಸಾಕಷ್ಟು ಸಮಯ ಸಿಗೋದಿಲ್ಲ. ಕೆಲವೊಮ್ಮ ಕಚೇರಿಯಿಂದ ಮದುವೆಗೆ ಹೋಗುವ ಸಂದರ್ಭ ಬರುತ್ತೆ. ಈ ವೇಳೆ ಬ್ಯೂಟಿ ಪಾರ್ಲರ್ ಗೆ ಹೋಗಲು ಸಾಧ್ಯವಿಲ್ಲ. ಒಂದು ವೇಳೆ ನೀವೂ ಕಚೇರಿಯಿಂದ ಮದುವೆ, ಸಮಾರಂಭಕ್ಕೆ ಹೋಗುವವರಾಗಿದ್ದರೆ ಸರಳ ಉಪಾಯದ ಮೂಲಕ ಸೌಂದರ್ಯವನ್ನು ದುಪ್ಪಟ್ಟು ಮಾಡಿಕೊಳ್ಳಬಹುದು. ಸಿಂಪಲ್ ಫೇಶಿಯಲ್ ನಿಮ್ಮ ಸೌಂದರ್ಯ ಹೆಚ್ಚಿಸಲು ನೆರವಾಗುತ್ತದೆ. ಫೇಶಿಯಲ್ ಗೆ ಬೇಕಾಗುವ ಸಾಮಗ್ರಿ : 2 ಚಮಚ ಜೇನುತುಪ್ಪ, 2 ಚಮಚ ಕಿತ್ತಳೆ ರಸ, ಒಂದು ಚಮಚ ಸಕ್ಕರೆ, ಎರಡು ಚಮಚ ನಿಂಬೆ ರಸ. ನಿಮಿಷದಲ್ಲಿ ನಿಮ್ಮ ಮುಖದ ಸೌಂದರ್ಯ ಹೆಚ್ಚಿಸುವ ಜೇನುತುಪ್ಪ, ನಿಂಬು ರಸ, ಕಿತ್ತಳೆ ಹಣ್ಣಿನ ರಸ, ಸಕ್ಕರೆಯನ್ನು ಒಂದು ಪಾತ್ರೆಗೆ ಹಾಕಿ ಮಿಕ್ಸ್ ಮಾಡಿ. ಮುಖವನ್ನು ಸ್ವಚ್ಛವಾಗಿ ತೊಳೆದು ಮುಖಕ್ಕೆ ಈ ಮಿಶ್ರಣವನ್ನು ಹಚ್ಚಿಕೊಳ್ಳಿ. ಕೈನಿಂದ ಮೃದುವಾಗಿ ಮಸಾಜ್ ಮಾಡಿ. 10 ನಿಮಿಷ ಬಿಟ್ಟು ತಣ್ಣನೆಯ ನೀರಿನಲ್ಲಿ ಮುಖವನ್ನು ತೊಳೆಯಿರಿ. ಕೆಲವೇ ನಿಮಿಷದಲ್ಲಿ ನಿಮ್ಮ ಮುಖ ಹೊಳಪು ಪಡೆಯಲಿದೆ.

### ಬ್ಯೂಟಿ ಟಿಪ್ಸ್



# ಮಾಲ್ಡೀವ್ಸ್: ಸಾವಿರಾರು ಭಾರತೀಯರಿಂದ ಪ್ರಯಾಣ ರದ್ದು..!



ಭಾರತ ಮತ್ತು ಮಾಲ್ಡೀವ್ಸ್ ನಡುವೆ ನಡೆಯುತ್ತಿರುವ ವಿವಾದ ತಣ್ಣಗಾಗುವ ಲಕ್ಷಣ ಕಾಣ್ತಿಲ್ಲ. ಇದರ ಪರಿಣಾಮ ದಿನ ದಿನಕ್ಕೂ ಹೆಚ್ಚುತ್ತಿದೆ. ಭಾರತೀಯರಲ್ಲಿ ದೇಶದ ಬಗ್ಗೆ ಪ್ರೀತಿ ಹಾಗೂ ಪ್ರಧಾನಿ ನರೇಂದ್ರ ಮೋದಿ ಬಗ್ಗೆ ಗೌರವ ಹೆಚ್ಚಾಗಿದೆ. ಮಾಲ್ಡೀವ್ಸ್ ವಿರುದ್ಧ ಕೋಪ ಸ್ಪಷ್ಟವಾಗ್ತಿದೆ.

ಇದೇ ಕಾರಣಕ್ಕೆ ಮಾಲ್ಡೀವ್ಸ್ಗೆ ಹೋಗುವ 300 ರಿಂದ 400 ಪ್ರಯಾಣಿಕರು ಪ್ರತಿದಿನ ವಿಮಾನವನ್ನು ರದ್ದು ಮಾಡ್ತಿದ್ದಾರೆ.

ಮಾಲ್ಡೀವ್ಸ್, ಭಾರತೀಯರ ಅಚ್ಚುಮೆಚ್ಚಿನ ಪ್ರವಾಸಿ ತಾಣ. ಅಲ್ಲಿಗೆ ಹೋಗುವ ಭಾರತೀಯರ ಸಂಖ್ಯೆ ಹೆಚ್ಚಿದೆ. ಆದ್ರೆ ವಿವಾದದ ನಂತ್ರ ಭಾರತೀಯರು ಮಾಲ್ಡೀವ್ಸ್ ಪ್ರವಾಸ ರದ್ದು ಮಾಡ್ತಿದ್ದಾರೆ. ಇದು ಮಾಲ್ಡೀವ್ಸ್ ಮೇಲೆ ಮಾತ್ರವಲ್ಲ ಇಂಡಿಯನ್ ಏರ್ಲೈನ್ಸ್ನ ಮೇಲೆಯೂ ಪರಿಣಾಮ ಬೀರುತ್ತಿದೆ.

ಪ್ರತಿ ದಿನ ಮಾಲ್ಡೀವ್ಸ್ ಗೆ ಎಂಟು ವಿಮಾನಗಳು ಹಾರಾಟ ನಡೆಸುತ್ತವೆ. ಬೇರೆ ಬೇರೆ ನಗರದಿಂದ ಮಾಲ್ಡೀವ್ಸ್ ಗೆ ನೇರ ವಿಮಾನ ಹಾರಾಟ ನಡೆಯುತ್ತದೆ. ಇವುಗಳಲ್ಲಿ 3 ವಿಮಾನಗಳು ಮುಂಬೈನಿಂದ ನೇರವಾಗಿ ಮಾಲ್ಡೀವ್ಸ್ಗೆ ಹೋಗುತ್ತವೆ. ಇದಲ್ಲದೆ, ಹೈದರಾಬಾದ್, ಕೊಚ್ಚಿ, ಬೆಂಗಳೂರು ಮತ್ತು ದೆಹಲಿಯಿಂದ ಮಾಲ್ಡೀವ್ಸ್ಗೆ ನೇರ ವಿಮಾನ ಸೌಲಭ್ಯವಿದೆ.

ಈ ವಿಮಾನದ ಮೂಲಕ ಪ್ರತಿ ದಿನ ಸುಮಾರು 1,200–1,300 ಮಂದಿ ಭಾರತೀಯರು ಮಾಲ್ಡೀವ್ಸ್ ಗೆ ಹೋಗ್ತಿದ್ದರು. ಈಗ ಸುಮಾರು ಶೇಕಡಾ 20 ರಿಂದ 30 ರಷ್ಟು ಪ್ರಯಾಣಿಕರು ತಮ್ಮ ಪ್ರಯಾಣವನ್ನು ರದ್ದುಗೊಳಿಸುತ್ತಿದ್ದಾರೆ ಎಂದು ಬ್ಲೂ ಸ್ಟಾರ್ ಏರ್ ಟ್ರಾವೆಲ್ ಸರ್ವಿಸಸ್ ನ ನಿರ್ದೇಶಕ ಮಾಧವ್ ಓಜಾ ಹೇಳಿದ್ದಾರೆ.

ಈ ಮಧ್ಯೆ ಪ್ರಯಾಣ ಬುಕಿಂಗ್ ಅಪ್ಲಿಕೇಶನ್ ಇಚಿಜಒಥಿಖಿಡಿರಿ ಮಾಲ್ಡೀವ್ಸ್ಗೆ ಪ್ರಯಾಣ ಬುಕಿಂಗ್ ತೆಗೆದುಕೊಳ್ಳುವುದನ್ನು ನಿಲ್ಲಿಸಿದೆ. ಪ್ರಧಾನಿ ಮೋದಿ ಹಾಗೂ ಭಾರತದ ಜೊತೆ ನಾವಿದ್ದೇವೆ ಎಂದಿರುವ ಮಾಲೀಕರು ಮಹತ್ವದ ನಿರ್ಧಾರ ಕೈಗೊಂಡಿದ್ದಾರೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಮಾತಿನ ವೈಖರಿ, ಕೋಪ ಜಾಸ್ತಿ, ಯಾರಿಗೂ ಹೆದರುವುದಿಲ್ಲ, ಯಾವುದೇ ವಿಚಾರವನ್ನು ಕೂಲಂಕುಶವಾಗಿ ವಿಚಾರಿಸಿ.

**ವೃಷಭ:** ಕಠಿಣ ಸಮಸ್ಯೆ, ಚಂಚಲ ಬುದ್ಧಿ, ವಾದ ವಿವಾದಗಳಿಂದ ಕಲಹ, ಜ್ಞಾಪಕ ಶಕ್ತಿ ಕಡಿಮೆ, ಅಕಾಲ ಭೋಜನ.

**ಮಿಥುನ:** ಮಾತೃವಿನಿಂದ ಸಹಾಯ, ತಾಳ್ಮೆ ಅಗತ್ಯ, ಋಣ ಬಾಧೆ, ಮನಸ್ತಾಪ, ಅಲ್ಪ ಲಾಭ ಅಧಿಕ ಖರ್ಚು.

**ಕಟಕ:** ವಿದ್ಯಾರ್ಥಿಗಳಿಗೆ ಉತ್ತಮ, ವಸ್ತ್ರ ಖರೀದಿ, ಪ್ರಿಯ ಜನರ ಭೇಟಿ, ಪರಸ್ಥಳವಾಸ, ಮಾಡುವ ಕೆಲಸದಲ್ಲಿ ಅಡೆತಡೆ.

**ಸಿಂಹ:** ನಿಮ್ಮ ಪ್ರಯತ್ನಗಳಿಗೆ ಉತ್ತಮ ಫಲ, ಕೆಲಸದಲ್ಲಿ ಒತ್ತಡ ಜಾಸ್ತಿ, ಮನಸ್ಸಿಗೆ ಬೇಸರ, ವ್ಯರ್ಥ ಧನ ಹಾನಿ.

**ಕನ್ಯಾ:** ಪುಣ್ಯಕ್ಷೇತ್ರ ದರ್ಶನ, ಇಷ್ಟ ವಸ್ತುಗಳ ಖರೀದಿ, ಸುಖ ಭೋಜನ, ಮಾತಿನ ಮೇಲೆ ಹಿಡಿತವಿರಲಿ.

**ತುಲಾ:** ಸಾಲಬಾಧೆ, ಪತಿ ಪತ್ನಿಯರಲ್ಲಿ ವಿರಸ, ಪಾಪ ಬುದ್ಧಿ, ಶತ್ರು ಬಾಧೆ, ಅನ್ಯ ಜನರಲ್ಲಿ ಪ್ರೀತಿ ವಿಶ್ವಾಸ.

**ವೃಶ್ಚಿಕ:** ಹಣಕಾಸಿನ ಸಮಸ್ಯೆ, ಹಿರಿಯರ ಹಿತನುಡಿ, ಮಾನಹಾನಿ, ಶೀತ ಸಂಬಂಧ ಕಾಯಿಲೆ, ರಿಯಲ್ ಎಸ್ಟೇಟ್ನವರಿಗೆ ಅಲ್ಪ ಲಾಭ.

**ಧನಸ್ಸು:** ಪರರಿಗೆ ಉಪಕಾರ, ಅನಿರೀಕ್ಷಿತ ಧನ ಲಾಭ, ಮನಶಾಂತಿ, ದಾಂಪತ್ಯದಲ್ಲಿ ಪ್ರೀತಿ, ದೂರ ಪ್ರಯಾಣ.

**ಮಕರ:** ವೈಯಕ್ತಿಕ ಕೆಲಸಗಳು ಕೈಗೂಡುವುದು, ನೆಮ್ಮದಿ ಸಂತೋಷ, ವಾತ ಪಿತ್ತ ರೋಗಗಳಿಂದ ಮುಕ್ತಿ.

**ಕುಂಭ:** ಹಿರಿಯರ ಮಾತಿಗೆ ಗೌರವ, ರಾಜ ಸನ್ಮಾನ, ವ್ಯವಹಾರದಲ್ಲಿ ದೃಷ್ಟಿ ದೋಷ, ಉದರಬಾಧೆ.

**ಮೀನ:** ಧಾರ್ಮಿಕ ಕಾರ್ಯಗಳಲ್ಲಿ ಒಲವು, ಅಧಿಕ ಕೆಲಸದಿಂದ ವಿಶ್ರಾಂತಿ, ಯತ್ನ ಕಾರ್ಯಗಳಲ್ಲಿ ಜಯ.

## ವಿಶ್ವ ಹಿಂದಿ ದಿನ




ಇಂದು ಜನವರಿ 10 ವಿಶ್ವ ಹಿಂದಿ ದಿನ. ಪ್ರತಿ ವರ್ಷ ಜನವರಿ 10 ರಂದು ವಿಶ್ವದಾದ್ಯಂತ 'ವಿಶ್ವ ಹಿಂದಿ ದಿನವನ್ನು ಆಚರಣೆ ಮಾಡಲಾಗುತ್ತದೆ. ಭಾರತದಲ್ಲಿ ಅತಿ ಹೆಚ್ಚು ಜನರು ಬಳಸುವ ಭಾಷೆ ಅಂದರೆ ಅದು ಹಿಂದಿ ಭಾಷೆ. ದೇಶದ ಯಾವುದೇ ಮೂಲೆಗೂ ಹೊದರು ಸಂವಹನಕ್ಕಾಗಿ ಹೆಚ್ಚು ಜನರು ಬಳಸುವ ಭಾಷೆ ಹಿಂದಿ. ಹಿಂದಿ ಒಮದು ಭಾಷೆ ಎನ್ನುವುದಕ್ಕಿಂತ ಭಾರತೀಯ ಸಾಂಸ್ಕೃತಿಕ ಜ್ಞಾನವನ್ನು ಜನ ಸಾಮನ್ಯರಿಗೆ ತಲುಪಿಸುವ ಸರಳ ಮಾಧ್ಯಮವಾಗಿದೆ.

ಪ್ರತಿ ವರ್ಷ ಜನವರಿ 10 ರಂದು ವಿಶ್ವ ಹಿಂದಿ ದಿನ ವನ್ನು ಆಚರಣೆ ಮಾಡಲಾಗುತ್ತದೆ. ಹಿಂದಿ ಬಾಷೆಯನ್ನು ವಿಶ್ವ ಭಾಷೆಯನ್ನಾಗಿ ಬೆಳೆಸುವ ಉದ್ದೇಶದಿಂದ ಪ್ರತೀ ವರ್ಷ 'ವಿಶ್ವ ಹಿಂದಿ ದಿನ' ಆಚರಣೆ ಮಾಡಲಾಗುತ್ತಿದೆ.

ಹಿಂದಿ ಭಾಷೆ ದೇವನಾಗರಿ ಲಿಪಿಯಲ್ಲಿದ್ದು ಇದು ವೈಜ್ಞಾನಿಕ ಲಿಪಿಯಾಗಿದೆ. ವಿಶ್ವದ ಭಾಷೆಗಳ ಸಾಂಕೇತಿಕತೆಯ ಕ್ಷಮತೆಯೂ ಈ ದೇವನಾಗಿರಿ ಲಿಪಿಯಲ್ಲಿದೆ ಎನ್ನುವುದು ಅನೇಕ ವಿದ್ವಾಂಸರ ಅಭಿಪ್ರಾಯವಾಗಿದೆ. ವಿಶ್ವದ ಅನೇಕ ದೇಶಗಳಲ್ಲಿ ಹಿಂದಿ ಭಾಷೆಯನ್ನು ಆಡು ಬಾಷೆಯನ್ನಾಗಿ ಬಳಸಲಾಗುತ್ತಿದೆ.

ಪ್ರತಿ ವರ್ಷ ಜನವರಿ 10 ರಂದು ವಿಶ್ವ ಹಿಂದಿ ದಿನ ವನ್ನು ಆಚರಣೆ ಮಾಡಲಾಗುತ್ತದೆ. 1975 ಜನವರಿ 10 ರಂದು ನಾಗಪುರದಲ್ಲಿ ಮೊದಲ 'ವಿಶ್ವ ಹಿಂದಿ ಸಮ್ಮೇಳನ'ವನ್ನು ಆಚರಿಸಲಾಯಿತು. 2006 ಜನವರಿ 10 ರಂದು ಅಂದಿನ ಪ್ರಧಾನ ಮಂತ್ರಿಗಳಾಗಿದ್ದ ಮನಮೋಹನ್ ಸಿಂಗ್ ಅವರು ಮೊದಲ ವಿಶ್ವ ಹಿಂದಿ ದಿನದ ಆಚರಣೆಗೆ ಚಾಲನೆ ನೀಡಿದರು. ಇಂದು ವಿಶ್ವದ ಅನೇಕ ರಾಷ್ಟ್ರಗಳಲ್ಲಿ ವಿಶ್ವ ಹಿಂದಿ ದಿವಸ್ ಆಚರಿಸಲಾಗುತ್ತದೆ.

2005 ರಲ್ಲಿ ಜೂನ್ 8 ರಂದು ನಡೆದ ವಿಶ್ವ ಹಿಂದಿ ಸಮ್ಮೇಳನದ ಅನುಸರಣಾ ಸಮಿತಿಯ ಸಭೆಯಲ್ಲಿ, ಪ್ರತಿ ವರ್ಷ ಜನವರಿ 10 ಅನ್ನು ವಿಶ್ವ ಹಿಂದಿ ದಿನವನ್ನಾಗಿ ಆಚರಿಸಲು ನಿರ್ಧರಿಸಲಾಯಿತು. ಅದರಂತೆ 2006 ರ ಜನವರಿ 10 ರಂದು ಮೊದಲ ಬಾರಿಗೆ ವಿಶ್ವ ಹಿಂದಿ ದಿನವನ್ನು ಆಚರಿಸಲಾಯಿತು. ಜಗತ್ತಿನಾದ್ಯಂತ ಸುಮಾರು 420 ಮಿಲಿಯನ್ ಜನರು ಹಿಂದಿಯನ್ನು ಮೊದಲ ಭಾಷೆಯಾಗಿ ಮಾತನಾಡುತ್ತಾರೆ. ಮತ್ತು ಸುಮಾರು 120 ಮಿಲಿಯನ್ ಜನರು ಹಿಂದಿಯನ್ನು ಎರಡನೇ ಭಾಷೆಯಾಗಿ ಬಳಸುತ್ತಾರೆ.

ಹಿಂದಿ ತನ್ನ ಹೆಸರನ್ನು ಪರ್ಷಿಯನ್ ಪದ 'ಹಿಂದ್' ಅಂದರೆ ಸಿಂಧೂ ನದಿಯ ಭೂಮಿ ನಿಂದ ಎರವಲು ಪಡೆದುಕೊಂಡಿದೆ. ಹಾಗೇಯೆ ಅವತಾರ, ಬಂಗಲೆ, ಗುರು, ಜಂಗಲ್, ಖಾಕಿ, ಕರ್ಮ, ಲೂಟಿ, ಮಂತ್ರ, ನಿರ್ವಾಣ, ಪಂಚ್, ಪೈಜಾಮ್, ಪಾನಕ, ಶಾಂಪೂ, ಥಗ್, ಟೈಫೂನ್ ಮತ್ತು ಯೋಗ ಸೇರಿದಂತೆ ಹಲವು ಪದಗಳನ್ನು ಇಂಗ್ಲಿಷ್ ಪದಗಳನ್ನು ಹಿಂದಿಯಿಂದ ಎರವಲು ಪಡೆಯಲಾಗಿದೆ.

ಸಂಜೆ ಮುಗಿಲು
ಬುಧವಾರ
10.1.2024



# ಜನೌಷಧ ಕೃಷಿ ಪತ್ತಿನ ಸಂಘಗಳ ಮೂಲಕ ಹಳ್ಳಿಯ ಬಡಜನರಿಗೂ ತಲುಪಲಿವೆ






**ನವದೆಹಲಿ:** ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಸೋಮವಾರ ಐದು ರಾಜ್ಯಗಳಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳ ಕಾರ್ಯಾಚರಣೆಗಾಗಿ ಸ್ಟೋರ್ ಕೋಡ್ಗಳನ್ನು ವಿತರಿಸಿದರು. ಈಗ, ಪಿಎಂ ಜನೌಷಧಿ ಕೇಂದ್ರಗಳಲ್ಲಿ ಲಭ್ಯವಿರುವ ಕೈಗೆಟುಕುವ ಮತ್ತು ಉತ್ತಮ ಗುಣಮಟ್ಟದ ಔಷಧಿಗಳನ್ನು ಕಂಅಖ ಮೂಲಕ ಗ್ರಾಮೀಣ ಪ್ರದೇಶದ ಬಡವರಿಗೆ ತಲುಪಿಸಲಾಗುವುದು ಎಂದು ಶಾ ಹೇಳಿದರು.

ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ ಮತ್ತು ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರ ಪ್ರವೀಣ ಮಾರ್ಗದರ್ಶನದಲ್ಲಿ, ಕಂಅಖ ನ್ನು ಬಹುಕ್ರಿಯಾತ್ಮಕವಾಗಿ ಪರಿವರ್ತಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಸಹಕಾರ ಚಳುವಳಿಯನ್ನು ಉತ್ತೇಜಿಸುತ್ತಾ ಅದಕ್ಕೆ ಹೊಸದಿಕ್ಕು ನೀಡುತ್ತಿರುವ ಶಾ, ರಾಷ್ಟ್ರವ್ಯಾಪಿ 2,373 ಕೃಷಿ ಪತ್ತಿನ ಸಂಘಗಳಲ್ಲಿ ಜನೌಷಧಿ ಕೇಂದ್ರಗಳ ಸ್ಥಾಪನೆಗೆ ಮುನ್ನುಡಿ ಬರೆಯುತ್ತಿದ್ದಾರೆ.

ಶಾರವರ ದೂರದೃಷ್ಟಿಯ ಈ ಹೆಜ್ಜೆಯು ಕೈಗೆಟುಕುವ ಔಷಧಿಗಳ ಪ್ರಯೋಜನಗಳು ಕಂಅಖ ಮೂಲಕ ಗ್ರಾಮೀಣ ಬಡವರಿಗೆ ಮತ್ತು ರೈತರಿಗೆ ಲಭ್ಯವಾಗಲಿದೆ. ಈ ಹಿಂದೆ, ನಗರ ಪ್ರದೇಶಗಳಲ್ಲಿ ನೆಲೆಸಿರುವ ಬಡವರು ಜನೌಷಧಿ ಕೇಂದ್ರಗಳ ಪ್ರಾಥಮಿಕ ಫಲಾನುಭವಿಗಳಾಗಿದ್ದರು.

ಮೋದಿ ಸರ್ಕಾರದ ಅಡಿಯಲ್ಲಿ, ಕಳೆದ ಒಂದು ದಶಕದಲ್ಲಾದ ಗಮನಾರ್ಹ ಸುಧಾರಣೆಗಳು ಭಾರತದ ಫಾರ್ಮಾ ಕ್ಷೇತ್ರವನ್ನು ಜಾಗತಿಕವಾಗಿ ಮುಂಚೂಣಿಯಲ್ಲಿರಿಸಿದೆ. ಒಂದು ಕಾಲದಲ್ಲಿ ತನ್ನ ಜನಸಂಖ್ಯೆಗೆ ಔಷಧಿಗಳನ್ನು ಪಡೆಯಲು ಹೆಣಗಾಡುತ್ತಿದ್ದ ರಾಷ್ಟ್ರವು, ಇಂದು ಹಿಂದಿನದಕ್ಕೆ ಸಂಪೂರ್ಣ ವ್ಯತಿರಿಕ್ತವಾಗಿ ಜಗತ್ತಿನೆಲ್ಲೆಡೆಗೆ ಔಷಧಿಗಳನ್ನು ಕಳುಹಿಸುತ್ತಿದೆ. ಅಮಿತ್ ಶಾ ಅವರ ನೀತಿಗಳಿಂದ, ಭಾರತೀಯ ಜನೌಷಧಿ ಕೇಂದ್ರಗಳ ಮೂಲಕ 60 ಕೋಟಿಗೂ ಹೆಚ್ಚು ಸೌಲಭ್ಯ ವಂಚಿತ ವ್ಯಕ್ತಿಗಳು ಇದರ ಫಲಾನುಭವಿಗಳಾಗಲಿದ್ದಾರೆ. ಇದರಿಂದ ಜೆನೆರಿಕ್ ಔಷಧಿಗಳ ವಿತರಣೆಯು ಹಳ್ಳಿಹಳ್ಳಿಗೂ ಸುವ್ಯವಸ್ಥಿತವಾಗಿ ತಲುಪಲಿದೆ.

ಮೋದಿಯವರ ಆಡಳಿತದಲ್ಲಿ ಸಹಕಾರಿ ಉಪಕ್ರಮಗಳ ಮೇಲೆ ಹೆಚ್ಚಿನ ಗಮನಹರಿಸುವಿಕೆಯಿಂದ ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ರಕ್ಷಣೆ ಗಣನೀಯ ಸುಧಾರಣೆಯನ್ನು ಕಂಡಿದೆ. ಸಹಕಾರ ಮತ್ತು ಆರೋಗ್ಯದ ಸಮಾಗಮವು ಸಮೃದ್ಧಿ ಮತ್ತು ಉತ್ತಮ ಆರೋಗ್ಯದ ಸಂಗಮ ಎಂಬುದು ಶಾರ ನಂಬಿಕೆ. ಪ್ರಸ್ತುತ, ಕರ್ನಾಟಕ, ಗುಜರಾತ್, ಜಮ್ಮು ಮತ್ತು ಕಾಶ್ಮೀರ, ,ಮಧ್ಯಪ್ರದೇಶ, ಮಹಾರಾಷ್ಟ್ರ, ತಮಿಳುನಾಡು, ಪಶ್ಚಿಮ ಬಂಗಾಳ ಮತ್ತು ಈಶಾನ್ಯ ರಾಜ್ಯಗಳಾದ್ಯಂತ ಗ್ರಾಮೀಣ ಪ್ರದೇಶಗಳಲ್ಲಿ ಸುಮಾರು 2,300 ಪಿಎಸಿಎಸ್ಗಳು ಕೈಗೆಟುಕುವ ಬೆಲೆಯಲ್ಲಿ ಔಷಧಿಗಳನ್ನು ವಿತರಿಸುತ್ತಿವೆ ಎಂದರು

# ಯುವತಿ ವೇಷದಲ್ಲಿ ಪರೀಕ್ಷೆ ಬರೆಯಲು ಬಂದ ಯುವಕ..!

ಫರೀದ್ಕೋಟ್(ಪಂಜಾಬ್) : ಪರೀಕ್ಷೆಯಲ್ಲಿಪಾಸ್ ಆಗಲು ಜನ ಏನೆಲ್ಲಾ ಸರ್ಕಸ್ ಮಾಡುತ್ತಾರೋ ಆದರೆ ಸಿಕ್ಕಿಬಿಳದೇ ಉಳಿಯಲು ಸಾಧ್ಯವೇ ಇಲ್ಲ ಎಂಬುದನ್ನು ಮಾತ್ರ ಅರ್ಥಮಾಡಿಕೊಳ್ಳುತ್ತಿಲ್ಲ. ಇಲ್ಲೊಬ್ಬ ಯುವಕ ಹುಡುಗಿ ವೇಷತೊಟ್ಟು ಪರೀಕ್ಷೆ ಬರೆಯಲು ಬಂದು ಸಿಕ್ಕಿಬಿದ್ದಿದ್ದಾನೆ. ಬಾಬಾ ಫರೀದ್ ವಿಶ್ವವಿದ್ಯಾಲಯದಲ್ಲಿ ಅರೆವೈದ್ಯಕೀಯ ಸಿಬ್ಬಂದಿ ನೇಮಕಾತಿ ಪರೀಕ್ಷೆಯಲ್ಲಿ ವಂಚನೆ ಎಸಗಲು ಯತ್ನಿಸಿದ ಪ್ರಕರಣ ಬೆಳಕಿಗೆ ಬಂದಿದೆ. ಕೋಟಕಪುರದ ಡಿಎವಿ ಶಾಲೆ ಪರೀಕ್ಷಾ ಕೇಂದ್ರದಲ್ಲಿ ಕೊಠಡಿ ಪ್ರವೇಶದ ವೇಳೆ ಬಯೊಮೆಟ್ರಿಕ್ ಮೇಲೆ ಬೆರಳು ಇಟ್ಟಾಗ ಬೆರಳಚ್ಚು ಮ್ಯಾಚ್ ಆಗಲಿಲ್ಲ ಆಗ ಅನುಮಾನ ಬಂದು ತಪಾಸಣೆ ನಡೆಸಿದಾಗ ವ್ಯಕ್ತಿ ಅವಳಲ್ಲ ಅವನು ಎಂಬುದು ತಿಳಿದು ಬಂದಿದೆ. ಯುವಕ, ಯುವತಿಯ ರೀತಿ ಬಟ್ಟೆ ಹಾಕಿಕೊಂಡು ಪರೀಕ್ಷಾ ಕೇಂದ್ರಕ್ಕೆ ಬಂದಿದ್ದ ಅಷ್ಟೇ ಅಲ್ಲ ಆತ ತಂದಿದ್ದ ಗುರುತಿನ ಚೀಟಿ, ಆಧಾರ್ ಕಾರ್ಡ್ ಕೂಡ ನಕಲಿಯಾಗಿತ್ತು . ಫಜಿಲ್ಕಾ ಜಿಲ್ಲೆಯ ಬಾಲಕ ಅಂಗ್ರೇಜ್ ಸಿಂಗ್ ಎಂಬಾತ ಅದೇ ಜಿಲ್ಲೆಯ ಪರಮ್ಜಿತ್ ಕೌರ್ ಎಂಬ ಬಾಲಕಿಯ ಪರವಾಗಿ ಪರೀಕ್ಷೆಗೆ ಬಂದಿದ್ದ. ಇದು ಎರಡನೇ ಪರೀಕ್ಷೆಯಾಗಿದ್ದು ಮೊದಲ ಪರೀಕ್ಷೆಯಲ್ಲಿ ಬಾಲಕಿಯೇ ಪೇಪರ್ ಬರೆದಿದ್ದಾಳೆ. ಎರಡನೇ ಬಾರಿ ಬಾಲಕ ಬಂದಿದ್ದು ಆತನನ್ನ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಇನ್ನು ಬಾಲಕಿಯ ಫಾರ್ಮ್ ತಿರಸ್ಕರಿಸಲಾಗಿದೆ ಎಂದು ವಿಶ್ವವಿದ್ಯಾಲಯದ ಉಪಕುಲಪತಿ ಡಾ.ರಾಜೀವ್ ಸೂದ್ ತಿಳಿಸಿದ್ದಾರೆ.



# ಒಂದೇ ಕುಟುಂಬದ ಐವರು ಮಕ್ಕಳು ಸಾವು

**ಉತ್ತರ ಪ್ರದೇಶ:** ಮನೆಯಲ್ಲಿ ಮಲಗಿದ್ದ ಒಂದೇ ಕುಟುಂಬದ ಐವರು ಮಕ್ಕಳು ಸಾವನ್ನಪ್ಪಿರುವ ಘಟನೆ ಉತ್ತರ ಪ್ರದೇಶದ ಅಮ್ರೋಹಾ ಜಿಲ್ಲೆಯಲ್ಲಿ ನಡೆದಿದೆ. ಚಿಂತಾಜನಕ ಸ್ಥಿತಿಯಲ್ಲಿದ್ದ ಇಬ್ಬರನ್ನು ಸ್ಥಳೀಯ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ವರದಿಯಾಗಿದೆ.

ಮನೆಯೊಳಗೆ ಕಲ್ಲಿದ್ದಿಲನ್ನು ಸುಟ್ಟಿದ್ದರು, ಅದರ ಹೊಗೆ ದಟ್ಟವಾಗಿ ತುಂಬಿತ್ತು, ಆಮ್ಲಜನಕ ಕೊರತೆಯಿಂದ ಸಾವು ಸಂಭವಿಸಿರಬಹುದು ಎಂದು ಪೊಲೀಸರು ತಿಳಿಸಿದ್ದಾರೆ. ಸೋಮವಾರ ರಾತ್ರಿ ಕುಟುಂಬದ ಏಳು ಮಂದಿ ಒಂದೇ ಮನೆಯಲ್ಲಿ ಮಲಗಿದ್ದರು. ಮಂಗಳವಾರ ಸಂಜೆಯಾದರೂ ಬಾಗಿಲು ತೆರೆಯದೇ ಇದ್ದಾಗ ಅಕ್ಕಪಕ್ಕದ ಮನೆಯವರಿಗೆ ಅನುಮಾನ ಬಂದಿತ್ತು. ಬಾಗಿಲು ಮುರಿದು ಮನೆಗೆ ನುಗ್ಗಿದ್ದಾರೆ. ರಹೀಜುದ್ದೀನ್ ಎಂಬುವರಿಗೆ ಸೇರಿದ ಮನೆಯಾಗಿದ್ದು, ಅವರ ಮೂವರು ಮಕ್ಕಳು ಮತ್ತು ಅವರ ಸಂಬಂಧಿಕರ ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ. ಪತ್ನಿ ಹಾಗೂ ಸಹೋದರನ ಸ್ಥಿತಿ ಚಿಂತಾಜನಕವಾಗಿದೆ ಎಂದು ತಿಳಿಸಿದ್ದಾರೆ.

ಎಸ್ಪಿ ಕುನ್ವರ್ ಅನುಪಮ್ ಸಿಂಗ್ ಸೇರಿದಂತೆ ಭಾರೀ ಪೊಲೀಸ್ ಪಡೆ ಮತ್ತು ಆಡಳಿತ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ವಿಷಯದ ಬಗ್ಗೆ ಮಾಹಿತಿ ಪಡೆದುಕೊಂಡು ತನಿಖೆ ಆರಂಭಿಸಿದರು. ಇಂಗಾಲದ ಡೈಆಕ್ಸೈಡ್, ಕಾರ್ಬನ್ ಮಾನಾಕ್ಸೈಡ್, ಹಾನಿಕಾರಕ ಅನಿಲಗಳು ಕೊಠಡಿಯಲ್ಲಿರುವಾಗ ಕೋಣೆಯ ಬಾಗಿಲು ಮುಚ್ಚಿದರೆ ಅದು ಉಸಿರುಗಟ್ಟುವಿಕೆಗೆ ಕಾರಣವಾಗಬಹುದು, ದೀರ್ಘಕಾಲ ಅದನ್ನು ಉಸಿರಾಡುವುದರಿಂದ ಸಾವು ಸಂಭವಿಸಬಹುದು ವೈದ್ಯರು ತಿಳಿಸಿದ್ದಾರೆ.

# ರಾಮಮಂದಿರ ಉದ್ಘಾಟನೆ ದಿನ ಶಾಲಾ, ಕಾಲೇಜುಗಳಿಗೆ ರಜೆ ಬಂದ್

**ಲಖನೌ:** ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಸಮಾರಂಭದ ಹಿನ್ನೆಲೆಯಲ್ಲಿ ಜನವರಿ 22 ರಂದು ರಾಜ್ಯದಾದ್ಯಂತ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ರಜೆ ಘೋಷಿಸಲು ಸೂಚನೆ ನೀಡಿದ್ದಾರೆ. ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆಯ ದಿನದಂದು ರಾಜ್ಯದಲ್ಲಿ ಮದ್ಯದಂಗಡಿಗಳನ್ನು ಬಂದ್ ಮಾಡಲಾಗುವುದು ಎಂದು ಸಿಎಂ ಯೋಗಿ ಆದಿತ್ಯನಾಥ್ ಹೇಳಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಸಿಎಂ ಯೋಗಿ ಅದಿತ್ಯನಾಥ್ ಅವರು, ಅಯೋಧ್ಯೆಯಲ್ಲಿ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆ ಒಂದು ರಾಷ್ಟ್ರೀಯ ಉತ್ಸವ ಆಗಿದೆ. ಶತಮಾನಗಳ ಕಾಯುವಿಕೆಯ ನಂತರ ಈ ಶುಭ ಗಳಿಗೆ ಬಂದಿದೆ. ಈ ಸಂದರ್ಭದಲ್ಲಿ ರಾಜ್ಯದ ಎಲ್ಲ ಸರ್ಕಾರಿ ಕಚೇರಿಗಳನ್ನು ದಿವ್ಯಸ್ವರೂಪದಲ್ಲಿ ಅಲಂಕರಿಸಲಾಗುವುದು. ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ಜನವರಿ 22 ರಂದು ರಜೆ ಘೋಷಿಸಲು ಸೂಚನೆ ನೀಡಿದ್ದೇನೆ. ಬನ್ನಿ ಎಲ್ಲರೂ ಒಟ್ಟಾಗಿ ರಾಮೋತ್ಸವವನ್ನು ಆಚರಿಸೋಣ ಎಂದು ಕರೆ ನೀಡಿದ್ದಾರೆ.





## ಅಯೋಧ್ಯೆ ರಾಮ ಮಂದಿರದ 'ಸ್ವರ್ಣ ದ್ವಾರ'ದ ಮೊದಲ ಫೋಟೋ ಬಿಡುಗಡೆ

**ನವದೆಹಲಿ :** ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ರಾಮ ಮಂದಿರದ ಭವ್ಯ ಉದ್ಘಾಟನೆಗೆ ಮುಂಚಿತವಾಗಿ, ದೇವಾಲಯದ ಚಿನ್ನದ ಲೇಪಿತ ಬಾಗಿಲುಗಳ ಮೊದಲ ಫೋಟೋ ಮಂಗಳವಾರ ಬಿಡುಗಡೆ ಆಗಿದೆ. ದೇವಾಲಯದ ಗರ್ಭಗುಡಿ ಅಥವಾ ಗರ್ಭಗೃಹದಲ್ಲಿ ಭಾರವಾದ ಚಿನ್ನದ ಲೇಪಿತ ಬಾಗಿಲುಗಳನ್ನು ಸ್ಥಾಪಿಸಲಾಗಿದ್ದು, ಅಲ್ಲಿ ದೇವರ ವಿಗ್ರಹವನ್ನು ಜನವರಿ 22 ರಂದು ಪ್ರತಿಷ್ಠಾಪಿಸಲಾಗುವುದು. ಹೈದರಾಬಾದ್ ಮೂಲದ ಕುಶಲಕರ್ಮಿಯೊಬ್ಬರು ಈ ಬಾಗಿಲನ್ನು ನಿರ್ಮಿಸಿದ್ದಾರೆ. ಲಕ್ಷಾಂತರ ಜನರ ಧಾರ್ಮಿಕ ಮತ್ತು ಸಾಂಸ್ಕೃತಿಕ ಪ್ರಾಮುಖ್ಯತೆಯ ಕೇಂದ್ರ ಬಿಂದುವಾದ ಭವ್ಯ ರಾಮ ಮಂದಿರದ 'ಪ್ರಾಣ ಪ್ರತಿಷ್ಠಾಪನೆ' ಅಥವಾ ಪ್ರತಿಷ್ಠಾಪನಾ ಸಮಾರಂಭವು ಜನವರಿ 22 ರಂದು ಅಯೋಧ್ಯೆಯಲ್ಲಿ ನಡೆಯಲಿದೆ. ಪ್ರಧಾನಿ ನರೇಂದ್ರ ಮೋದಿ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.



# ಲಾಲು ಪ್ರಸಾದ್ ಯಾದವ್ ಕುಟುಂಬದ ವಿರುದ್ಧ ಇಡಿ ಚಾರ್ಜ್ ಶೀಟ್ ಸಲ್ಲಿಕೆ

**ನವದೆಹಲಿ:** ಉದ್ಯೋಗಕ್ಕಾಗಿ ಭೂಮಿ ಹಗರಣದ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇಡಿ) ಮಂಗಳವಾರ ಒಟ್ಟು 4,751 ಪುಟಗಳ ಚಾರ್ಜ್ ಶೀಟ್ ನ್ನು ನ್ಯಾಯಾಲಯಕ್ಕೆ ಸಲ್ಲಿಸಿದೆ.



ಬಿಹಾರದ ಮಾಜಿ ಸಿಎಂ ರಾಬ್ರಿ ದೇವಿ, ಅವರ ಪುತ್ರಿಯರಾದ ಮಿಸಾ ಭಾರತಿ ಮತ್ತು ಹೇಮಾ ಯಾದವ್, ಹೃದಯಾನಂದ್ ಚೌಧರಿ ಮತ್ತು ಅಮಿತ್ ಕತ್ಯಾಲ್ ಅವರ ಹೆಸರನ್ನು ಆರೋಪಪಟ್ಟಿಯಲ್ಲಿ ಹೆಸರಿಸಲಾಗಿದೆ. ಎಬಿ ಎಕ್ಸ್‌ಪೋರ್ಟ್ ಮತ್ತು ಎಕೆ ಇನ್ಫೋಸಿಸ್ಟಮ್ಸ್ ಎಂಬ ಎರಡು ಸಂಸ್ಥೆಗಳ ಮೇಲೂ ಆರೋಪ ಮಾಡಲಾಗಿದೆ.

ಚಾರ್ಜ್ ಶೀಟ್ ಮತ್ತು ದಾಖಲೆಗಳ ಇ-ಪ್ರತಿಯನ್ನು ಇಂದೇ ಸಲ್ಲಿಸುವಂತೆ ವಿಶೇಷ ಸಿಬಿಐ ನ್ಯಾಯಾಧೀಶ ವಿಶಾಲ್ ಗೋಗ್ನೆ ಇಡಿಗೆ ಸೂಚಿಸಿದ್ದಾರೆ. ಈ ವಿಷಯವನ್ನು ಜನವರಿ 16, 2024 ರಂದು ಪರಿಗಣನೆಗೆ ಪಟ್ಟಿ ಮಾಡಲಾಗಿದೆ. ಇಡಿ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಮನೀಶ್ ಜೈನ್ ಮತ್ತು ವಕೀಲ ಇಶಾನ್ ಬೈಸ್ಲಾ ಅವರು ಯಾದವ್ ಕುಟುಂಬದ ಸದಸ್ಯರು ಅಪರಾಧದ ಆದಾಯದ ಫಲಾನುಭವಿಗಳು ಎಂದು ನ್ಯಾಯಾಲಯಕ್ಕೆ ತಿಳಿಸಿದರು.

# ಹೊಸ ಕೊರೊನಾ ಸಕ್ರಿಯ ಪ್ರಕರಣ

**ನವದೆಹಲಿ :** ದೇಶದಲ್ಲಿ 475 ಹೊಸ ಕೋವಿಡ್ ಪ್ರಕರಣಗಳನ್ನ ದಾಖಲಿಸಿದೆ, ಸೋಂಕಿನ ಸಕ್ರಿಯ ಪ್ರಕರಣಗಳ ಸಂಖ್ಯೆ 3,919 ರಷ್ಟಿದೆ ಎಂದು ಆರೋಗ್ಯ ಸಚಿವಾಲಯ ಮಂಗಳವಾರ ತಿಳಿಸಿದೆ. 24 ಗಂಟೆಗಳಲ್ಲಿ ಕರ್ನಾಟಕದಿಂದ ಮೂವರು, ಛತ್ತೀಸ್ಗಢದಿಂದ ಇಬ್ಬರು ಮತ್ತು ಅಸ್ಸಾಂನಿಂದ ಒಬ್ಬರು ಸೇರಿದಂತೆ ಆರು ಸಾವುಗಳು ವರದಿಯಾಗಿವೆ ಎಂದು ಸಚಿವಾಲಯದ ಅಂಕಿ ಅಂಶಗಳು ತಿಳಿಸಿವೆ. ಡಿಸೆಂಬರ್ 5, 2023 ರವರೆಗೆ ದೈನಂದಿನ ಪ್ರಕರಣಗಳ ಸಂಖ್ಯೆ ಎರಡಂಕಿಗಳಿಗೆ ಇಳಿದಿತ್ತು, ಆದರೆ ಹೊಸ ರೂಪಾಂತರ ಮತ್ತು ಶೀತ ಹವಾಮಾನ ಪರಿಸ್ಥಿತಿಗಳ ಹೊರಹೊಮ್ಮುವಿಕೆಯ ನಂತರ ಪ್ರಕರಣಗಳು ಹೆಚ್ಚಾಗಲು ಪ್ರಾರಂಭಿಸಿದವು. ಡಿಸೆಂಬರ್ 5ರ ನಂತರ, ಡಿಸೆಂಬರ್ 31, 2023 ರಂದು 841 ಹೊಸ ಪ್ರಕರಣಗಳು ವರದಿಯಾಗಿವೆ, ಇದು 0 ಆಗಿತ್ತು. ಮೇ 2021 ರಲ್ಲಿ ವರದಿಯಾದ ಗರಿಷ್ಠ ಪ್ರಕರಣಗಳಲ್ಲಿ ಶೇಕಡಾ 2 ರಷ್ಟಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಒಟ್ಟು ಸಕ್ರಿಯ ಪ್ರಕರಣಗಳಲ್ಲಿ, ಇವರಲ್ಲಿ ಹೆಚ್ಚಿನವರು (ಸುಮಾರು 92 ಪ್ರತಿಶತ) ಮನೆ ಪ್ರತ್ಯೇಕತೆಯಲ್ಲಿ ಚೇತರಿಸಿಕೊಳ್ಳುತ್ತಿದ್ದಾರೆ. ಪ್ರಸ್ತುತ ಲಭ್ಯವಿರುವ ದತ್ತಾಂಶವು ಜೆಎನ್ .1 ರೂಪಾಂತರವು ಹೊಸ ಪ್ರಕರಣಗಳಲ್ಲಿ ಘಾತೀಯ ಏರಿಕೆಗೆ ಕಾರಣವಾಗುವುದಿಲ್ಲ ಅಥವಾ ಆಸ್ಪತ್ರೆಗೆ ದಾಖಲಾಗುವುದು ಮತ್ತು ಸಾವಿನ ಹೆಚ್ಚಳಕ್ಕೆ ಕಾರಣವಾಗುವುದಿಲ್ಲ ಎಂದು ಮೂಲಗಳು ತಿಳಿಸಿವೆ.

# ಫ್ರಾನ್ಸ್ನ ಅತ್ಯಂತ ಕಿರಿಯ ಪ್ರಧಾನಿಯಾಗಿ ಗೇಬ್ರಿಯಲ್ ಅಟಲ್ ಆಯ್ಕೆ

ಫ್ರಾನ್ಸ್ನ ನೂತನ ಪ್ರಧಾನಿಯಾಗಿ ಗೇಬ್ರಿಯಲ್ ಅಟಲ್ ಅವರು ಆಯ್ಕೆಯಾಗಿದ್ದಾರೆ. ಫ್ರಾನ್ಸ್ನ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರು ಗೇಬ್ರಿಯಲ್ ಅಟಲ್ ಅವರನ್ನು ಪ್ರಧಾನಿ ಸ್ಥಾನಕ್ಕೆ ಸೂಚಿಸಿದ್ದು, ಅದರಂತೆ ಅವರ ನೇಮಕ ಮಾಡಲಾಗಿದೆ ಎಂದು ಫ್ರಾನ್ಸ್ನ ಅಧ್ಯಕ್ಷರ ಸಚಿವಾಲಯವು ತಿಳಿಸಿದೆ. ಇದರೊಂದಿಗೆ 34 ವರ್ಷದ ಗೇಬ್ರಿಯಲ್ ಕಿರಿಯ ಪ್ರಧಾನಿಯಾಗಿದ್ದು, ಹಾಗೂ ಮೊದಲ ಬಾರಿಗೆ ಸಲಿಂಗಕಾಮಿಯೊಬ್ಬರು ದೇಶದ ಪ್ರಧಾನಿಯಾದಂತಾಗಿದೆ. ನಿನ್ನೆ ರಾಜೀನಾಮೆ ನೀಡಿದ ಮಾಜಿ ಪ್ರಧಾನಿ ಎಲಿಜಬೆತ್ ಬೋರ್ನ್ ಅವರ ಉತ್ತರಾಧಿಕಾರಿಯಾಗಿ ಗೇಬ್ರಿಯಲ್ ಅಟಲ್ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಗೇಬ್ರಿಯಲ್ ಅಟ್ಟಲ್ ಅವರು ದೇಶದ ಅತ್ಯಂತ ಜನಪ್ರಿಯ ರಾಜಕಾರಣಿಗಳಲ್ಲಿ ಒಬ್ಬರಾಗಿದ್ದು, ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ಸರ್ಕಾರದ ವಕ್ತಾರರಾಗಿ ಕಾರ್ಯನಿರ್ವಹಿಸಿದ್ದಾರೆ. ಅದಲ್ಲದೇ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರ ನಿಕಟವರ್ತಿಯು ಆಗಿದ್ದಾರೆ. ಒಬ್ಬ ಬುದ್ಧಿವಂತ ಸಚಿವರಾಗಿ ಹಾಗೂ ಸ್ಪಷ್ಟ ಆಡಳಿತವನ್ನು ನೀಡುವ ವ್ಯಕ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

# ಜಪಾನ್‌ನಲ್ಲಿ ಪ್ರಬಲ ಭೂಕಂಪ

ಜಪಾನ್ನಲ್ಲಿ ಒಂದೇ ದಿನ 155 ಬಾರಿ ಭೂಕಂಪ ಸಂಭವಿಸಿದ ಬೆನ್ನಲ್ಲೇ ಇದೀಗ ಮತ್ತೆ 6.0 ತೀವ್ರತೆಯಲ್ಲಿ ಭೂಮಿ ಕಂಪಿಸಿದೆ.ಈಗಾಗಲೇ ಭೂಕಂಪದ ಹೊಡೆತದಿಂದ ತತ್ತರಿಸಿರುವ ಜಪಾನ್ಗೆ ಸುನಾಮಿ ಎಚ್ಚರಿಕೆಯನ್ನೂ ನೀಡಲಾಗಿತ್ತು. ಆದರೆ ಈ ಬಾರಿ ಭೂಕಂಪನ ಸಂಭವಿಸಿದ್ದು, ಸುನಾಮಿ ಎಚ್ಚರಿಕೆ ನೀಡಿಲ್ಲ. ಈವರೆಗೂ ಜಪಾನ್ನಲ್ಲಿ 200 ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ, 100 ಕ್ಕೂ ಹೆಚ್ಚು ಮಂದಿ ನಾಪತ್ತೆಯಾಗಿದ್ದಾರೆ.



# ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುವುದು ಖಚಿತ – ಅಣ್ಣಾಮಲೈ



**ಚೆನ್ನೈ:** ಕೇಂದ್ರದಲ್ಲಿ ಮಾತ್ತೆ ಬಿಜೆಪಿ ಅಧಿಕಾರಕ್ಕೆ ಬರುವುದು ಖಚಿತ ಬರಲಿದೆ ಎಂದು ಅಣ್ಣಾಮಲೈ ಹೇಳಿದ್ದಾರೆ. ಈ ಸಂಬಂಧ ಮಾತನಾಡಿದ ಅವರು,ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಸ್ಪಷ್ಟ ಬಹುಮತದೊಂದಿಗೆ ಗೆದ್ದು ಬಿಜೆಪಿ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದರು. ಬಿಜೆಪಿ ಅಧಿಕಾರಕ್ಕೆ ಬರುವುದಂತೂ ಖಚಿತ. 400 ಅಥವಾ 450 ಸ್ಥಾನಗಳಲ್ಲಿ ಗೆದ್ದು ಅಧಿಕಾರ ಹಿಡಿಯಲಿದೆ ಎಂಬುದಷ್ಟೇ ಮುಂದಿರುವ ಪ್ರಶ್ನೆ ಎಂದು ಅವರು ಹೇಳಿದ್ದಾರೆ.

ಬಿಜೆಪಿ ಗೆಲುವಿಗೆ ತಮಿಳುನಾಡಿನ ಕೊಡುಗೆ ಎಷ್ಟು? ದೇಶದ ವಿವಿಧ ಭಾಗಗಳ ಪಾಲುದಾರಿಕೆ ಏನು ಎಂಬುದು ಈಗಿನ ಚರ್ಚೆಯ ವಿಷಯ ಎಂದು ಅವರು ಹೇಳಿದ್ದಾರೆ.

2024 ಬಿಜೆಪಿ ಪಾಲಿಗೆ ಐತಿಹಾಸಿಕ ವರ್ಷ ಆಗಿರಲಿದೆ. ಸ್ಥಿರ ಸರ್ಕಾರ ಹಾಗೂ ದೃಢವಾದ ಪ್ರಧಾನಿಯನ್ನು ಜನರು ಬಯಸುತ್ತಿದ್ದಾರೆ. ದೇಶಕ್ಕೆ ಬಲಿಷ್ಠ ಪ್ರಧಾನಿ ಬೇಕಿದೆ ಎಂದು ಅವರು ತಿಳಿಸಿದ್ದಾರೆ. ಸಾರ್ವತ್ರಿಕ ಚುನಾವಣೆಯು ರಾಜ್ಯಗಳನ್ನು ಅವಲಂಬಿಸಿಲ್ಲ. ಹಾಗಾಗಿ ತಮಿಳುನಾಡಿನಲ್ಲೂ ಬಿಜೆಪಿ ಗಮನಾರ್ಹ ಸಾಧನೆ ಮಾಡಲಿದ್ದು, ರಾಜ್ಯದಿಂದ ಬಿಜೆಪಿ ಅಭ್ಯರ್ಥಿಗಳು ಗೆದ್ದು ಇತಿಹಾಸ ರಚಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ.

# ದಕ್ಷಿಣ ಕೊರಿಯಾದಲ್ಲಿ ನಾಯಿ ಮಾಂಸಕ್ಕೆ ನಿಷೇಧ

ದಕ್ಷಿಣ ಕೊರಿಯಾದ ರಾಷ್ಟ್ರೀಯ ಅಂಸೆಬ್ಲಿ ಅಥವಾ ಸಂಸತ್ತು ದೇಶದಲ್ಲಿ ನಾಯಿ ಮಾಂಸ ಸೇವನೆಯನ್ನು ನಿಷೇಧಿಸುವ ವಿಶೇಷ ಮಸೂದೆಯನ್ನು ಅಂಗಿಕರಿಸಲಾಗಿದೆ.

ಇತ್ತೀಚಿನ ವರ್ಷಗಳಲ್ಲಿ ದಕ್ಷಿಣ ಕೊರಿಯಾದಲ್ಲಿ ನಾಯಿ ಮಾಂಸ ಸೇವನೆ ಮಾಡುವವರ ಸಂಖ್ಯೆ ಹೆಚ್ಚಾಗಿದ್ದು, ಇದರ ಬೆನ್ನಲ್ಲಿಯೇ ಈ ಅಭ್ಯಾಸವನ್ನು ಕೊನೆ ಮಾಡಲು ಸರ್ಕಾರವೇ ಈ ನಿರ್ಧಾರ ಮಾಡಲಾಗಿದೆ.

ನಾಯಿಗಳ ಸಂತಾನೋತ್ಪತ್ತಿ, ಮಾಂಸಕ್ಕಾಗಿ ನಾಯಿಗಳನ್ನು ಕತ್ತರಿಸುವುದು ಹಾಗೂ ಮಾರಾಟ ಮಾಡುವದನ್ನು ತಡೆಯಲು ಈ ಮಸೂದೆಯನ್ನು ಮಂಡಿಸಲಾಗಿದೆ.

ಜಾರಿಯಾಗಿರುವ ಮಸೂದೆಯ ಪರವಾಗಿ ಸಂಸತ್ತಿನಲ್ಲಿ 208 ಮತಗಳು ಬಂದಿದ್ದು, ಈ ಸಂದರ್ಭದಲ್ಲಿ ಇಬ್ಬರು ಸದಸ್ಯರು ಗೈರಾಗಿರುವುದರೊಂದಿಗೆ ಈ ಮಸೂದೆ ಅಂಗೀಕಾರವಾಗಿದೆ ಎಂದು ಯೋನ್ಹಾಪ್ ನ್ಯೂಸ್ ಏಜೆನ್ಸಿ ಮಾಹಿತಿ ನೀಡಿದೆ. ದೇಶದಲ್ಲಿ ಪ್ರಾಣಿಗಳ ಹಕ್ಕುಗಳ ಜಾಗೃತಿ ಮತ್ತು ಸಾಕುಪ್ರಾಣಿಗಳ ಮಾಲೀಕರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆಡಳಿತಾರೂಢ ಪೀಪಲ್ ಪವರ್ ಪಾರ್ಟಿ ಮತ್ತು ಪ್ರಮುಖ ವಿರೋಧ ಪಕ್ಷ ಡೆಮಾಕ್ರಟಿಕ್ ಪಾರ್ಟಿ ಜಂಟಿಯಾಗಿ ಈ ನಿರ್ಧಾರಕ್ಕೆ ಬಂದಿದೆ ಎನ್ನಲಾಗಿದೆ. ನಾಯಿ ಮಾಂಸ ಉದ್ಯಮದಲ್ಲಿಯೇ ಈವರೆಗೂ ಬದುಕು ಕಂಡುಕೊಂಡಿದ್ದ ಜನರಿಗೆ ಉದ್ಯೋಗಗಳನ್ನು ಬದಲಾಯಿಸಲು ಸಹಾಯ ಮಾಡಲು ಕೇಂದ್ರದಿಂದ ಸಬ್ಸಿಡಿಗಳನ್ನು ನೀಡಲಾಗುತ್ತದೆ ಎಂದೂ ಮಸೂದೆಯಲ್ಲಿ ಸೂಚಿಸಲಾಗಿದೆ.



# ರಾಮಮಂದಿರ ಉದ್ಘಾಟನೆ ಮೂಲಕ ಬಿಜೆಪಿ ಗಿಮಿಕ್ ಶೋ ಮಾಡುತ್ತಿದೆ; ದೀದಿ

**ಜಾಯ್‌ನಗರ:** ಲೋಕಸಭೆ ಚುನಾವಣೆಗೆ ಮುನ್ನ ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಮಾಡುವ ಮೂಲಕ ಬಿಜೆಪಿ ಗಿಮಿಕ್ ಶೋನಲ್ಲಿ ತೊಡಗಿದೆ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಂಗಳವಾರ ಆರೋಪಿಸಿದ್ದಾರೆ.

'ಇತರ ಸಮುದಾಯಗಳನ್ನು ಹೊರಗಿಡುವ ಉತ್ಸವಗಳನ್ನು ತಾನು ಬೆಂಬಲಿಸುವುದಿಲ್ಲ' ಎಂದು ಟಿಎಂಸಿ ವರಿಷ್ಠರು ಪ್ರತಿಪಾದಿಸಿದ್ದಾರೆ.

ದಕ್ಷಿಣ 24 ಪರಗಣ ಜಿಲ್ಲೆಯ ಜಾಯ್‌ನಗರದಲ್ಲಿ ಸಾರ್ವಜನಿಕ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಧರ್ಮದ ಆಧಾರದ ಮೇಲೆ ಜನಸಾಮಾನ್ಯರನ್ನು ವಿಭಜಿಸುವುದರಲ್ಲಿ ನನಗೆ ನಂಬಿಕೆ ಇಲ್ಲ ಎಂದು ಹೇಳಿದರು.

'ಎಲ್ಲಾ ಸಮುದಾಯದ ಜನರನ್ನು ಒಟ್ಟಿಗೆ ಕರೆದುಕೊಂಡು ಹೋಗುವ ಮತ್ತು ಒಗ್ಗಟ್ಟಿನ ಬಗ್ಗೆ ಮಾತನಾಡುವ ಉತ್ಸವಗಳನ್ನು ನಾನು ನಂಬುತ್ತೇನೆ. ಬಿಜೆಪಿ ಇದನ್ನು (ರಾಮಮಂದಿರ ಉದ್ಘಾಟನೆ) ನ್ಯಾಯಾಲಯದ ಸೂಚನೆಯ ಮೇರೆಗೆ ಮಾಡುತ್ತಿದೆ. ಆದರೆ, ಅದನ್ನು ಲೋಕಸಭೆ ಚುನಾವಣೆಗೆ ಮುನ್ನ ಗಿಮಿಕ್ ಶೋ ಮಾಡುತ್ತಿದೆ' ಎಂದು ಅವರು ಹೇಳಿದರು.

ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆಯಾಗಲಿದ್ದು, ಪ್ರಧಾನಿ ನರೇಂದ್ರ ಮೋದಿ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸೇರಿದಂತೆ 6,000 ಕ್ಕೂ ಹೆಚ್ಚು ಜನರು 'ಪ್ರಾಣ ಪ್ರತಿಷ್ಠಾಪನಾ' ಸಮಾರಂಭದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ.

# ಕಾರ್ತಿ ಚಿದಂಬರಂಗೆ ಶೋಕಾಸ್ ನೋಟಿಸ್ ಕೊಟ್ಟ ಕಾಂಗ್ರೆಸ್

**ನವದೆಹಲಿ:** ಕಾಂಗ್ರೆಸ್ ನಾಯಕ, ಮಾಜಿ ಹಣಕಾಸು ಸಚಿವ ಪಿ ಚಿದಂಬರಂ ಪುತ್ರ ಕಾರ್ತಿ ಚಿದಂಬರಂ ಗೆ ಕಾಂಗ್ರೆಸ್ ಶೋಕಾಸ್ ನೋಟಿಸ್ ನೀಡಿದೆ.



ಇದಕ್ಕೆ ಕಾರಣ, ಸ್ಥಳೀಯ ಮಾಧ್ಯಮದಲ್ಲಿನ ಸಂದರ್ಶನದಲ್ಲಿ ಕಾರ್ತಿ ಚಿದಂರಂಬಂ ಎರಡು ಹೇಳಿಕೆ ನೀಡಿದ್ದಾರೆ.

ಈ ಎರಡೂ ಹೇಳಿಕೆಯಿಂದ ಕಾಂಗ್ರೆಸ್ ಕೆರಳಿ ಕೆಂಡವಾಗಿದೆ. ಪ್ರಮುಖವಾಗಿ ಪ್ರಧಾನಿ ಮೋದಿ ರಾಹುಲ್ ಗಾಂಧಿಗಿಂತ ಜನಪ್ರಿಯ ಅನ್ನೋ ಹೇಳಿಕೆ, ಮತ್ತೊಂದು ಇವಿಎಂ ಮಶಿನ್ ಕುರಿತು ನೀಡಿದ ಹೇಳಿಕೆ ಕಾಂಗ್ರೆಸ್ಗೆ ನುಂಗಲಾರದ ತುತ್ತಾಗಿ ಪರಿಣಮಿಸಿದೆ. ಕಾಂಗ್ರೆಸ್ ಶಿಸ್ತು ಸಮಿತಿ ಕಾರ್ತಿ ಚಿದಂಬರಂಗೆ ನೋಟಿಸ್ ನೀಡಿದೆ. ಕಾಂಗ್ರೆಸ್ ಶಿಸ್ತು ಸಮಿತಿ ಸದಸ್ಯ ಕೆಆರ್ ರಾಮಸ್ವಾಮಿ ಶೋಕಾಸ್ ನೋಟಿಸ್ ನೀಡಿದ್ದಾರೆ. 10 ದಿನದಲ್ಲಿ ಉತ್ತರಿಸುವಂತೆ ಕಾರ್ತಿ ಚಿದಂರಂಬಂಗೆ ಸೂಚಿಸಲಾಗಿದೆ.ಸದಾ ಪಕ್ಷಕ್ಕೆ ನಿಷ್ಠೆಯಾಗಿದ್ದ ಕಾರ್ತಿ ಚಿದಂರಂಬ ಹೇಳಿಕೆಯಿಂದ ತಮಿಳುನಾಡು ಕಾಂಗ್ರೆಸ್ನಲ್ಲಿ ಕೋಲಾಹಲ ಎದ್ದಿದೆ.ಕಾರ್ತಿ ಚಿದಂಬರಂ, ರಾಹುಲ್ ಗಾಂಧಿ ಜನಪ್ರಿಯತೆಗಿಂತ ಮೋದಿ ಜನಪ್ರಿಯತೆ ಹೆಚ್ಚು ಎಂದಿದ್ದಾರೆ. ಇಷ್ಟೇ ಅಲ್ಲ ಮತದಾನ ವೇಳೆ ಬಳಸುವ ಇವಿಎಂ ಮಶಿನ್ ಬಗ್ಗೆ ನಂಬಿಕೆ ಇದೆ ಎಂದು ಹೇಳಿದ್ದಾರೆ.

ಆದ್ರೆ ಇವಿಎಂ ಮಶಿನ್ ಸರಿ ಇಲ್ಲ, ಹ್ಯಾಕ್ ಮಾಡಲಾಗಿದೆ. ಬಿಜೆಪಿ ಪರವಾಗಿದೆ ಅನ್ನೋ ಆರೋಪಗಳನ್ನು ಪ್ರತಿ ಚುನಾವಣೆಯಲ್ಲಿ ಕಾಂಗ್ರೆಸ್ ಮಾಡಿದೆ.

# ಮಣಿಪುರದಲ್ಲಿ ಪೊಲೀಸರು ಮತ್ತು ಉಗ್ರರ ನಡುವೆ ಗುಂಡಿನ ಕಾಳಗ

**ಮಣಿಪುರ:** ಬೂದಿ ಮುಚ್ಚಿದ ಕೆಂಡದಂತಿರುವ ಮಣಿಪುರದಲ್ಲಿ ಮತ್ತೆ ಸೇನಾಪಡೆ ಮತ್ತು ದಂಗೆಕೋರರ ನಡುವೆ ಸಂಘರ್ಷ ನಡೆದಿದೆ. ರಾಜ್ಯದ ಮೋರೆಯಲ್ಲಿ ಪರಸ್ಪರರ ನಡುವೆ ಗುಂಡಿನ ಚಕಮಕಿಯಾಗಿದೆ. ಭಾರತ-ಮ್ಯಾನ್ಮಾರ್ ಗಡಿಯಲ್ಲಿರುವ ಮಣಿಪುರದ ಮೊರೆಹ್ ಪಟ್ಟಣದಲ್ಲಿ ರಾತ್ರಿ ಭದ್ರತಾ ಪಡೆಗಳು ಮತ್ತು ಬಂಡುಕೋರರ ನಡುವೆ ಗುಂಡಿನ ಚಕಮಕಿ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹಿಲ್ಸ್ ಮೂಲದ ದಂಗೆಕೋರರು ರಾಜ್ಯ ಪೊಲೀಸ್ ಪಡೆಗಳ ಮೇಲೆ ದಾಳಿ ಮಾಡಿದ್ದಾರೆ. ಅದಕ್ಕೆ ಪ್ರತಿಕಾರವಾಗಿ ಸೇನಾಪಡೆ ಕೂಡ ದಾಳಿ ನಡೆಸಿದೆ. ಇದರ ಪರಿಣಾಮವಾಗಿ ಗುಂಡಿನ ಚಕಮಕಿ ನಡೆಯಿತು ಎಂದು ಪೊಲೀಸ್ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ. ಟೆಂಗ್ನೌಪಾಲ್ ಜಿಲ್ಲೆಯ ಗಡಿ ಪಟ್ಟಣವು ಜನವರಿ 2 ರಂದು ಭಾರೀ ಗುಂಡಿನ ಚಕಮಕಿಯನ್ನು ಕಂಡಿತ್ತು. ಇದರಲ್ಲಿ ಬಿಎಸ್‌ಎಫ್ ಜವಾನ್ ಸೇರಿದಂತೆ ಆರು ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದರು. ಉತ್ತಮ ಚಿಕಿತ್ಸೆಗಾಗಿ ಅವರನ್ನು ವಿಮಾನದಲ್ಲಿ ಇಂಫಾಲ್ಗೆ ಕರೆದೊಯ್ಯಲಾಯಿತು. ಅದಕ್ಕೂ ಮೊದಲು, ಡಿಸೆಂಬರ್ 30 ರಿಂದ ಪಟ್ಟಣವು ಇದೇ ರೀತಿಯ ಗುಂಡಿನ ಚಕಮಕಿ ಪ್ರಕರಣಗಳಿಗೆ ಸಾಕ್ಷಿಯಾಗಿದೆ.



# ಲಕ್ಷದ್ವೀಪದಲ್ಲಿ 'ಇಸ್ರೇಲ್' ಮಹತ್ವದ ಘೋಷಣೆ



**ದೆಹಲಿ:** ಪ್ರಧಾನಿ ಮೋದಿ ಕುರಿತು ಮಾಲ್ಡೀವ್ಸ್ ಆಕ್ಷೇಪಾರ್ಹ ಹೇಳಿಕೆ, ಬಹಿಷ್ಕಾರ ಬೆಳವಣಿಗೆ ಮಧ್ಯೆ ಇಸ್ರೇಲ್ ದೇಶವು ದ್ವೀಪ ಸಮೂಹದಲ್ಲಿ ಪ್ರವಾಸೋದ್ಯಮವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಹೆಚ್ಚಿಸುವತ್ತ ಗಮನ ಹರಿಸಿದೆ. ಅದರಲ್ಲೂ ಲಕ್ಷದ್ವೀಪದಲ್ಲಿ ಡಿಸಲೀಕರಣ ಕಾರ್ಯಕ್ರಮ ಆರಂಭಿಸುವುದಾಗಿ ಪ್ರಾರಂಭಿಸುವುದಾಗಿ ಇಂದು ಇಸ್ರೇಲ್ ಘೋಷಿಸಿದೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಬಗ್ಗೆ ಇಸ್ರೇಲ್ ರಾಯಭಾರಿ ಕಚೇರಿ ಪೋಸ್ಟ್ ಹಾಕಿದೆ. ಡಿಸಲೀಕರಣ ಕಾರ್ಯಕ್ರಮವನ್ನು ಪ್ರಾರಂಭಿಸಲು ಫೆಡರಲ್ ಸರ್ಕಾರದ ಕೋರಿಕೆಯ ಮೇರೆಗೆ ನಾವು ಕಳೆದದಿಂದಲೂ ಲಕ್ಷದ್ವೀಪನಲ್ಲಿದ್ದೇವೆ ಎಂದು ಮಾಹಿತಿ ನೀಡಿದೆ. ಈ ಮೂಲಕ ಮಾಲ್ಡೀವ್ಸ್ಗೆ ಮತ್ತಷ್ಟು ಸಂಕಷ್ಟ ಶುರುವಾಗಿದೆ. ಲಕ್ಷದ್ವೀಪದಲ್ಲಿ ಒಂದು ವರ್ಷದಿಂದ ಯೋಜನೆ ಆರಂಭಿಸಲು ಯೋಜಿಸಿದ್ದು, ಇದೀಗ 2024 ಕ್ಕೆ ಪರಿಣಾಮಕಾರಿಯಾಗಿ ಯೋಜನೆ ಅನುಷ್ಠಾನಕ್ಕೆ ತರಲು ಸಜ್ಜಾಗಿದ್ದೇವೆ. ಲಕ್ಷದ್ವೀಪದಲ್ಲಿ ಇಸ್ರೇಲ್ ಡಸಲೀಕರಣ ಅಂದರೆ ಸಮುದ್ರ, ನೀರು ಶುದ್ಧೀಕರಣ ಮಾಡುವ ಯೋಜನೆ ಅನುಷ್ಠಾನ ಮಾಡುವುದಾಗಿ ತಿಳಿಸಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬೈಕಾಟ್ ನಡುವೆಯೂ ಮಾಲ್ಡೀವ್ಸ್‌ನಲ್ಲಿ ಬಿಪಾಶಾ ಬರ್ತ್‌ಡೇ



ಮಾಲ್ಡೀವ್ಸ್ ಮತ್ತು ಭಾರತದ ನಡುವೆ ಏನೆಲ್ಲ ಸಂಗತಿಗಳು ನಡೆಯುತ್ತಿವೆ. ಅದರಲ್ಲೂ ಬಾಲಿವುಡ್ ಸೆಲೆಬ್ರಿಟಿಗಳು ಬೈಕಾಟ್ ಮಾಲ್ಡೀವ್ಸ್ ಅಭಿಯಾನಕ್ಕೆ ಸಖತ್ ಬೆಂಬಲ ನೀಡುತ್ತಿದ್ದಾರೆ. ಈ ಹೊತ್ತಿನಲ್ಲಿ ಬಾಲಿವುಡ್ ನಟಿ ಬಿಪಾಶಾ ಬಸು ಮಾಲ್ಡೀವ್ಸ್‌ನಲ್ಲಿ ತಮ್ಮ ಹುಟ್ಟು ಹಬ್ಬವನ್ನು ಆಚರಿಸಿಕೊಂಡಿದ್ದಾರೆ. ಸುಂದರ ತಾಣದಲ್ಲಿ ಹುಟ್ಟು ಹಬ್ಬ ಎಂದು ಫೋಟೋ ಹಂಚಿಕೊಂಡಿದ್ದಾರೆ.

ಜನವರಿ 7 ರಂದು ಬಿಪಾಶಾ ಮಾಲ್ಡೀವ್ಸ್ ನಲ್ಲಿ ತಮ್ಮ ಹುಟ್ಟು ಹಬ್ಬವನ್ನು ಆಚರಿಸಿಕೊಂಡಿದ್ದು, ಆ ಫೋಟೋಗಳನ್ನು ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ್ದಾರೆ. ಆ ಫೋಟೋಗಳು ಸಾಕಷ್ಟು ನೆಗೆಟಿವ್ ಕಾಮೆಂಟ್ ಬಂದಿದೆ. ನಿಮಗೆ ಮಾಲ್ಡೀವ್ಸ್ ಮತ್ತು ಭಾರತದ ನಡುವಿನ ಕಿತ್ತಾಟ ಗೊತ್ತಿಲ್ಲವಾ ಎಂದು ಹಲವರು ಕಾಮೆಂಟ್ ಮಾಡಿದ್ದಾರೆ.



ನರೇಂದ್ರ ಮೋದಿಯನ್ನು ಟೀಕಿಸಿ ಪೇಚೆಗೆ ಸಿಲುಕಿದ ಮಾಲ್ಡೀವ್ಸ್ ಸರ್ಕಾರ ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾಗಿದ್ದು, ಅಧ್ಯಕ್ಷ ಮೊಹಮ್ಮದ್ ಮಿಜು ಭಾರತಕ್ಕೆ ಬರಲು ಮುಂದಾಗಿದ್ದಾರೆ.

ಹೌದು. ಸ್ವತ: ಮಾಲ್ಡೀವ್ಸ್ ಜನರೇ ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಬೆನ್ನಲ್ಲೇ ಅಧ್ಯಕ್ಷ ಮೊಹಮ್ಮದ್ ಮಿಜು ನೇತೃತ್ವದ ಸರ್ಕಾರ ಮೂವರು ಸಚಿವರನ್ನು ಅಮಾನತು ಮಾಡುವ ಮೂಲಕ ಶಿಸ್ತು ಕ್ರಮ ಜರುಗಿಸಿತ್ತು. ಈಗ ಮೊಹಮ್ಮದ್ ಮಿಜು ವಿರುದ್ಧ ಈಗ ವಿಪಕ್ಷ ಅವಿಶ್ವಾಸ ನಿರ್ಣಯವನ್ನು ಮಂಡಿಸಲು ಮುಂದಾಗಿವೆ ಎಂದು ವರದಿಯಾಗಿದೆ. ಈ ಬೆನ್ನಲ್ಲೇ ಮೊಹಮ್ಮದ್ ಮಿಜು ಭಾರತ ಪ್ರವಾಸ ಕೈಗೊಳ್ಳಲು ಮುಂದಾಗಿದ್ದಾರೆ. ಮಾಲ್ಡೀವ್ಸ್ ಸರ್ಕಾರ ಈ ಪ್ರಸ್ತಾಪವನ್ನು ಭಾರತದ ಮುಂದಿಟ್ಟರೂ ಮೋದಿ ಸರ್ಕಾರ ಇಲ್ಲಿಯವರೆಗೆ ಯಾವುದೇ ಪ್ರತಿಕ್ರಿಯೆ ನೀಡಲ್ಲ. ಮೊದಲು ಮಾಲ್ಡೀವ್ಸ್‌ನಲ್ಲಿದ್ದ ಸರ್ಕಾರ ಭಾರತದ ಪರವಾಗಿತ್ತು. ಕೋವಿಡ್ ಸಮಯದಲ್ಲಿ ಭಾರತ ಲಸಿಕೆಯನ್ನು ರಫ್ತು ಮಾಡಿತ್ತು. ಹೀಗಿದ್ದರೂ ಭಾರತದ ವಿರುದ್ಧವೇ ಹೇಳಿಕೆ ನೀಡಿಯೇ ಮೊಹಮ್ಮದ್ ಮಿಜು ಅಧ್ಯಕ್ಷ ಚುನಾವಣೆಯಲ್ಲಿ ಜಯಗಳಿಸಿದ್ದರು. ಸದ್ಯ ಮೊಹಮ್ಮದ್ ಮಿಜು ಚೀನಾ ಪ್ರವಾಸದಲ್ಲಿದ್ದಾರೆ.

## ಮಹೇಶ್ ಬಾಬು ಅಭಿನಯದ ಗುಂಟೂರು ಕಾರಮ್ ಚಿತ್ರ

# ಟಿಕೆಟ್ ದರ ಹೆಚ್ಚಳ



ಮಹೇಶ್ ಬಾಬು ಅವರ ಬಹು ನಿರೀಕ್ಷಿತ ಚಿತ್ರ, ಗುಂಟೂರ್ ಕಾರಮ್ ತೆಲಂಗಾಣದಲ್ಲಿ ಶೀಘ್ರವಾಗಿ ಬಿಡುಗಡೆಯಾಗಲಿದೆ ಎಂದು ವರದಿ ಮಾಡಲಾಗುತ್ತಿದೆ, ಜೊತೆಗೆ ಟಿಕೆಟ್ ದರದಲ್ಲಿಯೂ ಹೆಚ್ಚಳವಾಗಿದೆ.

ಮಹೇಶ್ ಬಾಬು ಅವರ ಮುಂಬರುವ ಚಿತ್ರ, ತ್ರಿವಿಕ್ರಮ್ ಶ್ರೀನಿವಾಸ್ ಅವರ ನಿರ್ದೇಶನದ ಗುಂಟೂರ್ ಕಾರಮ್, ಈಗ ಸ್ವಲ್ಪ ಸಮಯದವರೆಗೆ ಪಟ್ಟಣದ ಚರ್ಚೆಯಾಗಿದೆ. ಚಿತ್ರವು ಸಂಕ್ರಾಂತಿ ಸಂದರ್ಭದಲ್ಲಿ ಜನವರಿ 12 ರಂದು ಬೆಳ್ಳಿತೆರೆಗೆ ಬರಲು ಸಿದ್ಧವಾಗಿದೆ. ವರುಣ್ ಧವನ್, ನತಾಶಾ ದಲಾಲ್, ಕೃತಿ ಸನೋನ್, ಮಹೇಶ್ ಬಾಬು ಮತ್ತು ನಮ್ರತಾ ಶಿರೋಡ್ಕರ್ ದುಬೈನಲ್ಲಿ 'ಲಂಚ್ ಮತ್ತು ಗುಪ್ಶಪ್' ಮಾಡಿದ್ದಾರೆ



ಬಿಡುಗಡೆಯ ದಿನಾಂಕ ಹತ್ತಿರವಾಗುತ್ತಿದ್ದಂತೆ, ಚಿತ್ರದ ಸುತ್ತಲಿನ ಹೈಪ್ ಎಂದಿಗಿಂತಲೂ ಹೆಚ್ಚಾಗಿದೆ. ಬೆಳ್ಳಿತೆರೆಯಲ್ಲಿ ಸೂಪರ್ ಸ್ಟಾರ್ ಚಿತ್ರವನ್ನು ವೀಕ್ಷಿಸಲು ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ. ಹೀಗಿರುವಾಗ ತೆಲಂಗಾಣ ಸರ್ಕಾರ ಸಕಾರಾತ್ಮಕ ಸುದ್ದಿಯನ್ನು ಹೊರತಂದಿದೆ. ಇತ್ತೀಚಿನ ಅಪ್ಡೇಟ್ನಲ್ಲಿ, ತೆಲಂಗಾಣ ಸರ್ಕಾರವು ಗುಂಟೂರು ಕಾರಮ್ಗೆ 23 ಥಿಯೇಟರ್‌ಗಳಲ್ಲಿ ಮಧ್ಯರಾತ್ರಿಯ ಪ್ರದರ್ಶನಗಳನ್ನು ಒಂದು ವಾರದವರೆಗೆ ಅನುಮತಿಸುವ ಅನುಮತಿಯನ್ನು ನೀಡಿದೆ. ಮುಂಜಾನೆ 4 ಗಂಟೆಗೆ ಪ್ರಾರಂಭವಾಗುವ ಆರು ಶೋಗಳು ಇದರಲ್ಲಿ ಸೇರಿವೆ ಎಂದು ಸಹ ತಿಳಿದುಬಂದಿದೆ. ಆದಾಗ್ಯೂ, ಏಕ-ಪರದೆಯ ಥಿಯೇಟರ್‌ಗಳಿಗೆ ಶೇ. 65 ಮತ್ತು ಮಲ್ಟಿಪ್ಲೆಕ್ಸ್‌ಗಳಿಗೆ ಶೇ. 100 ರಷ್ಟು ಟಿಕೆಟ್ ದರವನ್ನು ಹೆಚ್ಚಿಸಲಾಗಿದೆ ಎಂಬ ತೊಂದರೆಯೊಂದಿಗೆ ಇದು ಬರುತ್ತದೆ.

2005 ರ ಅಥಾಡು ಮತ್ತು 2010 ರ ಖಲೇಜಾ ಚಲನಚಿತ್ರದ ನಂತರ ನಿರ್ದೇಶಕ ತ್ರಿವಿಕ್ರಮ್ ಶ್ರೀನಿವಾಸ್ ಮತ್ತು ಮಹೇಶ್ ಬಾಬು ನಡುವಿನ ಮೂರನೇ ಸಹಯೋಗವನ್ನು ಗುಂಟೂರು ಕಾರಮ್ ಗುರುತಿಸುತ್ತದೆ. ಈ ಚಿತ್ರದಲ್ಲಿ ಜಗಪತಿ ಬಾಬು, ಶ್ರೀಲೀಲಾ, ಜಯರಾಂ, ರಮ್ಯಾ ಕೃಷ್ಣನ್, ಪ್ರಕಾಶ್ ರಾಜ್, ಈಶ್ವರಿ ರಾವ್ ಸೇರಿದಂತೆ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಚಿತ್ರದ ಟ್ರೇಲರ್ ಅನ್ನು ಇತ್ತೀಚೆಗೆ ನಿರ್ಮಾಪಕರು ಬಿಡುಗಡೆ ಮಾಡಿದರು ಮತ್ತು ಅಭಿಮಾನಿಗಳು ಮತ್ತು ವಿಮರ್ಶಕರಿಂದ ವ್ಯಾಪಕ ಮೆಚ್ಚುಗೆಯನ್ನು ಗಳಿಸಿದ್ದಾರೆ. 2-ನಿಮಿಷ ಮತ್ತು 47-ಸೆಕೆಂಡ್ ಟ್ರೇಲರ್ ಶ್ರೀಲೀಲಾ ಮಹಿಳಾ ನಾಯಕಿ ಸೇರಿದಂತೆ ವ್ಯಾಪಕ ಶ್ರೇಣಿಯ ಪಾತ್ರಗಳನ್ನು ಅಭಿಮಾನಿಗಳಿಗೆ ಪರಿಚಯಿಸಿತು. ಇಬ್ಬರೂ ತಮ್ಮ ನಡುವೆ ತಮಾಷೆಯ ರೋಮ್ಯಾಂಟಿಕ್ ಕೆಮಿಸ್ಟ್ರಿಯನ್ನು ಹೊಂದಿರುವಂತೆ ತೋರುತ್ತದೆ. ಟ್ರೇಲರ್ ಭಾವನಾತ್ಮಕ ರೋಲರ್ ಕೋಸ್ಟರ್ ಜೊತೆಗೆ ಬೃಹತ್ ಆಕ್ಷನ್ ಫ್ಲಿಕ್ ಅನ್ನು ಭರವಸೆ ನೀಡಿತು.

ಈ ಚಿತ್ರವನ್ನು ಹರಿಕಾ ಮತ್ತು ಹಾಸನ್ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಎಸ್. ರಾಧಾ ಕೃಷ್ಣ ಅವರು ಬ್ಯಾಂಕ್ರೋಲ್ ಮಾಡಿದ್ದಾರೆ, ಚಿತ್ರಕ್ಕೆ ತಮನ್ ಎಸ್ ಸಂಗೀತ ಸಂಯೋಜಿಸಿದ್ದಾರೆ. ನವೀನ್ ನೂಲಿ ಸಂಕಲನವಿರುವ ಈ ಚಿತ್ರಕ್ಕೆ ಹಿರಿಯ ಛಾಯಾಗ್ರಾಹಕ ಮನೋಜ್ ಪರಮಹಂಸ ಮತ್ತು ಪಿ.ಎಸ್.ವಿನೋದ್ ಛಾಯಾಗ್ರಹಣ ಮಾಡಿದ್ದಾರೆ. ಗುಂಟೂರು ಕಾರಮ್ ನಂತರ, ಮಹೇಶ್ ಬಾಬು ಅವರು ಎಸ್ಎಸ್ ರಾಜಮೌಳಿ ಅವರೊಂದಿಗೆ ತಾತ್ಕಾಲಿಕವಾಗಿ ಎಸ್ಎಸ್ಎಂಬಿ 29 ಎಂದು ಹೆಸರಿಸಲಾದ ಚಿತ್ರದಲ್ಲಿ ಕೈಜೋಡಿಸಲು ಸಿದ್ಧರಾಗಿದ್ದಾರೆ.

# ಮದುವೆ ಬಗ್ಗೆ ವಿಷಾದ ವ್ಯಕ್ತಪಡಿಸಿದ ಅಂಕಿತಾ ಲೋಖಂಡೆ



ಬಿಗ್ ಬಾಸ್ ಮನೆಯಲ್ಲಿ ಮತ್ತೆ ಮತ್ತೆ ಸುದ್ದಿ ಆಗುತ್ತಿದ್ದಾರೆ ಅಂಕಿತಾ ಲೋಖಂಡೆ ಹಾಗೂ ವಿಕ್ಕಿ ದಂಪತಿ. ತನ್ನ ಪತಿ ಬಿಗ್ ಬಾಸ್ ಸ್ಪರ್ಧಿ ಮನ್ನಾರಾ ಚೋಪ್ರಾ ಜೊತೆ ಕ್ಲೋಸ್ ಆಗುತ್ತಿದ್ದಾರೆ ಎನ್ನುವ ಕಾರಣಕ್ಕಾಗಿ ಪತಿ ವಿಕ್ಕಿ ಮೇಲೆ ಕೋಪಗೊಂಡಿದ್ದಾರೆ. ಆತನನ್ನು ಮದುವೆ ಆಗಿದ್ದಕ್ಕೆ ಕಣ್ಣೀರು ಇಟ್ಟಿದ್ದಾರೆ. ಜೊತೆಗೆ ವಿಷಾದವನ್ನೂ ವ್ಯಕ್ತ ಪಡಿಸಿದ್ದಾರೆ. ಆಕೆ ನಿನ್ನ ಜೀವನದಲ್ಲಿ ಬಂದಳು. ನೀನು ಇಷ್ಟ ಪಡ್ತಿದ್ದೀಯಾ ಎಂದು ಮಾತನಾಡಿದ್ದಾರೆ.

ಬಿಗ್ ಬಾಸ್ ಮನೆಯಲ್ಲಿ ವಿಕ್ಕಿ ಮತ್ತು ಅಂಕಿತಾ ನಡೆಯನ್ನೇ ಅರ್ಥ ಮಾಡಿಕೊಳ್ಳಲು ಆಗುತ್ತಿದೆ. ಮೊನ್ನೆಯಷ್ಟೇ ಒಂದೇ ಬ್ಲ್ಯಾಂಕೆಟ್ ಹೊದ್ದುಕೊಂಡು ಈ ಜೋಡಿ ಮಲಗಿತ್ತು. ಅದು ರಾತ್ರಿ ವೇಳೆ ಸುಮ್ಮನೆ ಮಲಗಿಲ್ಲ, ಬ್ಲ್ಯಾಂಕೆಟ್ ಒಳಗೆ ಚಲಿಸಿದ್ದರು. ಬ್ಲ್ಯಾಂಕೆಟ್ ಅಸ್ತವ್ಯಸ್ತಗೊಂಡಿತ್ತು. ಇದು ಹಲವು ಅನುಮಾನಗಳಿಗೆ ಕಾರಣವಾಗಿತ್ತು. ಈ ವಿಡಿಯೋ ಸೋಷಿಯಲ್ ಮೀಡಿಯಾದಲ್ಲೂ ವೈರಲ್ ಆಗಿತ್ತು.

ಇದೇ ಜೋಡಿ ಕೆಲವು ದಿನಗಳ ಹಿಂದೆ ಇದೇ ಬಿಗ್ ಬಾಸ್ ಮನೆಯಲ್ಲಿ ಡಿವೋರ್ಸ್ ಕುರಿತಂತೆ ಮಾತನಾಡಿದ್ದರು. ಈ ನಡೆಯೂ ಅಚ್ಚರಿಗೆ ಕಾರಣವಾಗಿತ್ತು. ಪ್ರೀತಿಸಿ ಮದುವೆ ಆಗಿರೋ ಈ ಜೋಡಿ ಬಿಗ್ ಬಾಸ್ ಮನೆಯಲ್ಲಿ ದಿನವೂ ಕಿತ್ತಾಡುತ್ತಲೇ ಇರುತ್ತಾರೆ. ಟಾಸ್ಕ್ ವಿಚಾರದಲ್ಲಂತೂ ಗಂಡ ಹೆಂಡತಿ ಅನ್ನೋದನ್ನೂ ಮರೆಯುತ್ತಾರೆ. ದಿನವೂ ಕಿರಿಕ್ ಮಾಡಿಕೊಂಡು ಜನರಿಗೆ ಮನರಂಜನೆ ನೀಡುತ್ತಿದ್ದಾರೆ. ಡಿವೋರ್ಸ್ ವಿಚಾರ ಮಾತನಾಡಿ ಶಾಕ್ ಮೂಡಿಸಿದ್ದರು.

ಅಂಕಿತಾ ಲೋಖಂಡೆ ಈ ಹಿಂದೆ ಸುಶಾಂತ್ ಸಿಂಗ್ ರಜಪೂತ್ ಜೊತೆ ಡೇಟಿಂಗ್ ಮಾಡುತ್ತಿದ್ದರು. ಅದನ್ನು ಬ್ರೇಕ್ ಮಾಡಿಕೊಂಡು ವಿಕ್ಕಿ ಜೈನ್ ಜೊತೆ ಒಂದಾದರು. ಮದುವೆ ಮಾಡಿಕೊಂಡು ಬಿಗ್ ಬಾಸ್ ಮನೆಗೆ ಹೋಗಿದ್ದಾರೆ. ಈಗ ಅಲ್ಲಿಯೂ ಕಿತ್ತಾಡಿಕೊಂಡಿದ್ದಾರೆ. ಅಲ್ಲದೇ ಮೊನ್ನೆಯ ಸಂಚಿಕೆಯಲ್ಲಿ ವಿಕ್ಕಿ ಜೈನ್ ವಿವಾಹಿತರ ಕಷ್ಟಗಳ ಬಗ್ಗೆ ಮಾತಾಡುತ್ತಾರೆ. ಅಷ್ಟೊಂದು ಕಷ್ಟವಾದರೆ, ವಿಚ್ಛೇದನ ಪಡೆದುಕೊಳ್ಳೋಣ ಎಂದು ಹೇಳುವ ಮೂಲಕ ಶಾಕ್ ನೀಡಿದ್ದಾರೆ ಅಂಕಿತಾ. ಈಗ ಮತ್ತೆ ಅಸಮಾಧಾನ ವ್ಯಕ್ತ ಪಡಿಸಿದ್ದಾರೆ.

## ರಣಜಿಯತ್ತ ಮುಖ ಮಾಡಿದ ಸ್ಟಾರ್ ಆಟಗಾರ

# ಟೀಮ್ ಇಂಡಿಯಾದಿಂದ ಔಟ್



ಅಫ್ಘಾನಿಸ್ತಾನ್ ವಿರುದ್ಧದ ಟಿ20 ಸರಣಿಗೆ ಆಯ್ಕೆ ಮಾಡಲಾದ ಭಾರತ ತಂಡದಲ್ಲಿ ಸ್ಥಾನ ಪಡೆಯದ ಶ್ರೇಯಸ್ ಅಯ್ಯರ್ ಇದೀಗ ರಣಜಿ ಕ್ರಿಕೆಟ್‌ನತ್ತ ಮುಖ ಮಾಡಿದ್ದಾರೆ. ಇದರೊಂದಿಗೆ ಅಯ್ಯರ್ ಅವರನ್ನು ಟಿ20 ತಂಡದಿಂದ ಕೈ ಬಿಟ್ಟಿರುವುದು ಖಚಿತವಾಗಿದೆ. ಇದಕ್ಕೂ ಮುನ್ನ ಶ್ರೇಯಸ್ ಅಯ್ಯರ್ ವಿಶ್ರಾಂತಿಯ ಕಾರಣ ಟಿ20 ಸರಣಿಯಿಂದ ಹೊರಗುಳಿದಿದ್ದಾರೆ ಎನ್ನಲಾಗಿತ್ತು.

ಆದರೀಗ ಜನವರಿ 12 ರಿಂದ ಶುರುವಾಗಲಿರುವ ಆಂಧ್ರ ಪ್ರದೇಶ ವಿರುದ್ಧ ಪಂದ್ಯದಲ್ಲಿ ಮುಂಬೈ ಪರ ಕಣಕ್ಕಿಳಿಯಲು ಶ್ರೇಯಸ್ ಅಯ್ಯರ್ ಸಜ್ಜಾಗಿದ್ದಾರೆ. ಈ ಪಂದ್ಯಕ್ಕೆ ಆಯ್ಕೆ ಮಾಡಲಾದ ಮುಂಬೈ ತಂಡದಲ್ಲಿ ಅಯ್ಯರ್ ಸ್ಥಾನ ಪಡೆದಿದ್ದು, ಅದರಂತೆ ದೇಶೀಯ ಅಂಗಳದ ಮತ್ತೆ ಮಿಂಚಲು ಅಣಿಯಾಗುತ್ತಿದ್ದಾರೆ.

**ಸರ್ಫರಾಝ್-ತುಷಾರ್ ಅಲಭ್ಯ:** ಬಿಹಾರ ವಿರುದ್ಧದ ಮೊದಲ ಪಂದ್ಯದಲ್ಲಿ ಮುಂಬೈ ತಂಡವನ್ನು ಪ್ರತಿನಿಧಿಸಿದ್ದ ಸರ್ಫರಾಝ್ ಖಾನ್ ಹಾಗೂ ತುಷಾರ್ ದೇಶಪಾಂಡೆ ದ್ವಿತೀಯ ಪಂದ್ಯದಿಂದ ಹೊರಗುಳಿಯಲಿದ್ದಾರೆ. ಈ ಇಬ್ಬರು ಆಟಗಾರರು ಭಾರತ ಎ ತಂಡಕ್ಕೆ ಆಯ್ಕೆಯಾಗಿದ್ದು, ಹೀಗಾಗಿ ಆಂಧ್ರ ಪ್ರದೇಶ ವಿರುದ್ಧದ ಪಂದ್ಯಕ್ಕೆ ಅಲಭ್ಯರಾಗಿದ್ದಾರೆ.

**ರಹಾನೆ ಕ್ಯಾಪ್ಟನ್:** ಈ ಬಾರಿಯ ರಣಜಿ ಟೂರ್ನಿಯಲ್ಲಿ ಮುಂಬೈ ತಂಡವನ್ನು ಅಜಿಂಕ್ಯ ರಹಾನೆ ಮುನ್ನಡೆಸುತ್ತಿದ್ದಾರೆ. ಟೀಮ್ ಇಂಡಿಯಾದಿಂದ ಹೊರಬಿದ್ದಿರುವ ರಹಾನೆ ಇದೀಗ ದೇಶೀಯ ಟೂರ್ನಿಯಲ್ಲಿ ಮಿಂಚುವ ಮೂಲಕ ಕಂಬ್ಯಾಕ್ ಮಾಡುವ ವಿಶ್ವಾಸದಲ್ಲಿದ್ದಾರೆ.

ಇತ್ತ ಟಿ20 ತಂಡದಿಂದ ಹೊರಬೀಳುತ್ತಿದ್ದಂತೆ ಶ್ರೇಯಸ್ ಅಯ್ಯರ್ ಕೂಡ ರಣಜಿ ಕ್ರಿಕೆಟ್‌ನತ್ತ ಮುಖ ಮಾಡಿರುವುದು ವಿಶೇಷ.

**ಮುಂಬೈ ತಂಡ:** ಅಜಿಂಕ್ಯ ರಹಾನೆ (ನಾಯಕ), ಶ್ರೇಯಸ್ ಅಯ್ಯರ್, ಜೇ ಬಿಸ್ತಾ, ಭೂಪೇನ್ ಲಾಲ್ವಾನಿ, ಅಮೋಘ್ ಭಟ್ಕಳ್, ಸುವೇದ್ ಪರ್ಕರ್, ಪ್ರಸಾದ್ ಪವಾರ್ (ವಿಕೆಟ್ ಕೀಪರ್), ಹಾರ್ದಿಕ್ ತಮೋರ್ (ವಿಕೆಟ್ ಕೀಪರ್), ಶಮ್ಸ್ ಮುಲಾನಿ, ತನುಷ್ ಕೋಟ್ಯಾನ್, ಅಥರ್ವ ಅಂಕೋಲೇಕರ್, ಮೋಹಿತ್ ಅವಸ್ತಿ, ಧವಲ್ ಕುಲಕರ್ಣಿ, ರೊಯ್ಸಟನ್ ಡಯಸ್, ಸಿಲ್ವೆಸ್ಟರ್ ಡಿಸೋಜಾ.

**ಭಾರತ-ಅಫ್ಘಾನಿಸ್ತಾನ್ ಟಿ20 ಸರಣಿ:** ಭಾರತ-ಅಫ್ಘಾನಿಸ್ತಾನ್ ನಡುವಣ ಟಿ20 ಸರಣಿಯು ಜನವರಿ 11 ರಿಂದ ಶುರುವಾಗಲಿದೆ. 3 ಪಂದ್ಯಗಳ ಈ ಟಿ20 ಸರಣಿಗಾಗಿ ಆಯ್ಕೆ ಮಾಡಲಾದ 16 ಸದಸ್ಯರ ತಂಡದಲ್ಲಿ ಸ್ಟಾರ್ ಆಟಗಾರರಾದ ಕೆಎಲ್ ರಾಹುಲ್, ಶ್ರೇಯಸ್ ಅಯ್ಯರ್ ಸೇರಿದಂತೆ ಕೆಲ ಪ್ರಮುಖ ಆಟಗಾರರು ಸ್ಥಾನ ಪಡೆದಿಲ್ಲ.

**ಭಾರತ ಟಿ20 ತಂಡ:** ರೋಹಿತ್ ಶರ್ಮಾ (ನಾಯಕ), ಶುಭ್‌ಮನ್ ಗಿಲ್, ಯಶಸ್ವಿ ಜೈಸ್ವಾಲ್, ವಿರಾಟ್ ಕೊಹ್ಲಿ, ತಿಲಕ್ ವರ್ಮಾ, ರಿಂಕು ಸಿಂಗ್, ಜಿತೇಶ್ ಶರ್ಮಾ (ವಿಕೆಟ್ ಕೀಪರ್), ಸಂಜು ಸ್ಯಾಮ್ಸನ್ (ವಿಕೆಟ್ ಕೀಪರ್), ಶಿವಂ ದುಬೆ, ವಾಷಿಂಗ್ಟನ್ ಸುಂದರ್, ಅಕ್ಷರ್ ಪಟೇಲ್, ರವಿ ಬಿಷ್ಣೋಯ್, ಕುಲ್ದೀಪ್ ಯಾದವ್, ಅರ್ಷದೀಪ್ ಸಿಂಗ್, ಅವೇಶ್ ಖಾನ್, ಮುಕೇಶ್ ಕುಮಾರ್.

# ಶ್ರೀರಾಮನ ಹಾಡು ಕೇಳುವುದೇ ಖುಷಿ ಎಂದ ಸೌತ್ ಆಫ್ರಿಕಾ ಕ್ರಿಕೆಟಿಗ



ಸೌತ್ ಆಫ್ರಿಕಾ ಬ್ಯಾಟರ್‌ರೊಬ್ಬರು ಮೈದಾನಕ್ಕೆ ಬರುತ್ತಿದ್ದಂತೆ ರಾಮ್ ಸಿಯಾ ರಾಮ್ ಹಾಡು ಕೇಳಿ ಬಂದರೆ... ಬರುತ್ತಿರುವುದು ಕೇಶವ್ ಮಹಾರಾಜ್ ಎಂದರ್ಥ. ಹೌದು, ಕೇಶವ್ ಮಹಾರಾಜ್ ಎಂಟ್ರಿಗೆ ರಾಮ್ ಸಿಯಾ ರಾಮ್ ಹಾಡನ್ನು ಹಾಕುವುದು ಹೊಸ ಟ್ರೆಂಡ್ ಆಗಿ ಮಾರ್ಪಟ್ಟಿದೆ.

ಇದೇ ವಿಷಯವನ್ನು ಇತ್ತೀಚೆಗೆ ಕೆಎಲ್ ರಾಹುಲ್ ಕೂಡ ಪ್ರಸ್ತಾಪಿಸಿದ್ದರು. ಸೌತ್ ಆಫ್ರಿಕಾ ವಿರುದ್ಧದ ಏಕದಿನ ಸರಣಿ ವೇಳೆ ಕೇಶವ್ ಮಹಾರಾಜ್ ಬ್ಯಾಟಿಂಗ್‌ಗೆ ಆಗಮಿಸಿದ್ದರು. ಈ ವೇಳೆ ಡಿಜೆ ರಾಮ್ ಸಿಯಾ ರಾಮ್ ಹಾಡನ್ನು ಪ್ಲೇ ಮಾಡಿದ್ದರು. ನೀವು ಮೈದಾನಕ್ಕೆ ಬರುವಾಗ ಯಾವಾಗಲೂ ಈ ಹಾಡನ್ನು ಹಾಕುತ್ತಾರಲ್ವಾ ಎಂದು ರಾಹುಲ್, ಕೇಶವ್ ಮಹಾರಾಜ್ ಅವರನ್ನು ಕೇಳಿದ್ದರು.

ಅಷ್ಟೇ ಅಲ್ಲದೆ ಕೇಪ್‌ಟೌನ್‌ನಲ್ಲಿ ನಡೆದ 2ನೇ ಟೆಸ್ಟ್ ಪಂದ್ಯದ ವೇಳೆ ಕೇಶವ್ ಮಹಾರಾಜ್ ಆಗಮಿಸುತ್ತಿದಂತೆ ರಾಮ್ ಸಿಯಾ ರಾಮ್ ಹಾಡನ್ನು ಹಾಕಲಾಯಿತು. ಈ ಹಾಡು ಕೇಳುತ್ತಿದ್ದಂತೆ ಸ್ಲಿಪ್‌ನಲ್ಲಿ ಫೀಲ್ಡಿಂಗ್‌ನಲ್ಲಿದ್ದ ವಿರಾಟ್ ಕೊಹ್ಲಿ ರಾಮಬಾಣದ ಸನ್ನೆ ಮಾಡಿದರು. ಅಷ್ಟೇ ಅಲ್ಲದೆ ಕೈ ಮುಗಿಯುವ ಮೂಲಕ ದೈವಭಕ್ತಿಯನ್ನು ಸೂಚಿಸಿದ್ದರು.

ಇದೀಗ ಮೈದಾನದಲ್ಲಿ ಕೇಳಿ ಬರುತ್ತಿರುವ ಸಿಯಾ ರಾಮ್ ಹಾಡಿನ ಬಗ್ಗೆ ಕೇಶವ್ ಮಹಾರಾಜ್ ಬಗ್ಗೆ ಮಾತನಾಡಿದ್ದಾರೆ. ನಾನು ಮೈದಾನಕ್ಕೆ ಬರುತ್ತಿದ್ದಂತೆ ಶ್ರೀರಾಮನ ಹಾಡು ಹಾಕುತ್ತಿರುವುದು ಖುಷಿ ನೀಡುತ್ತಿದೆ ಎಂದಿದ್ದಾರೆ. ಅಷ್ಟೇ ಅಲ್ಲದೆ ಮುಂದೇನು ಇದೇ ರೀತಿ ಹಾಡನ್ನು ಹಾಕುವಂತೆ ಡಿಜೆಗೆ ಮನವಿ ಮಾಡಿದ್ದೇನೆ ಎಂದು ತಿಳಿಸಿದ್ದಾರೆ. ದೇವರು ನನ್ನ ದೊಡ್ಡ ಅನುಗ್ರಹ. ನನಗೆ ಅವಕಾಶ ಸಿಕ್ಕಾಗಲೆಲ್ಲಾ ನಾನು ದೇವರನ್ನು ನೆನಪಿಸಿಕೊಳ್ಳಲು ಪ್ರಯತ್ನಿಸುತ್ತೇನೆ. ಇದು ನನ್ನ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಅಲ್ಲದೆ ಇತರ ಆಟಗಾರರಿಂದ ಗೌರವವನ್ನು ಪಡೆಯುತ್ತೇನೆ. ಧರ್ಮ ಮತ್ತು ಸಂಸ್ಕೃತಿಯನ್ನು ಗೌರವಿಸುವುದು ಮುಖ್ಯ. ಅದರಲ್ಲೂ ಕ್ರೀಡಾಂಗಣದಲ್ಲಿ 'ರಾಮ್ ಸಿಯಾ ರಾಮ್' ಕೇಳಿದರೆ ತುಂಬಾ ಸಂತೋಷವಾಗುತ್ತದೆ ಎಂದು ಕೇಶವ್ ಮಹಾರಾಜ್ ಹೇಳಿದ್ದಾರೆ. ಭಾರತೀಯ ಮೂಲದ ಕೇಶವ್ ಮಹಾರಾಜ್ ಸೌತ್ ಆಫ್ರಿಕಾ ಪರ 127 ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿದ್ದಾರೆ. ಈ ವೇಳೆ ಒಟ್ಟು 237 ವಿಕೆಟ್ ಕಬಳಿಸುವ ಮೂಲಕ ಮಿಂಚಿದ್ದಾರೆ. ಇದೀಗ ಸೌತ್ ಆಫ್ರಿಕಾದಲ್ಲಿ ನಡೆಯುತ್ತಿರುವ ಟಿ20 ಲೀಗ್‌ನಲ್ಲಿ ಡರ್ಬನ್ ಸೂಪರ್ ಜೈಂಟ್ಸ್ ತಂಡದ ನಾಯಕರಾಗಿ ಕಣಕ್ಕಿಳಿಯುತ್ತಿದ್ದಾರೆ.

## ಕೋರ್ಟ್‌ನಲ್ಲಿ ರಾಮ ಮಂದಿರ ವಿರುದ್ಧ ಕಪಿಲ್ ಸಿಬಲ್‌ರನ್ನು ಕಳುಹಿಸಿದ್ದು ಯಾರು

# ಕಾಂಗ್ರೆಸ್‌ಗೆ ಬಿಜೆಪಿ ಪ್ರಶ್ನೆ




**ಬೆಂಗಳೂರು:** ರಾಮ ಮಂದಿರದ ಬೀಗ ತೆಗಿಸಲು ಅವಕಾಶ ಕಲ್ಪಿಸಿಕೊಟ್ಟಿದ್ದು ರಾಜೀವ್ ಗಾಂಧಿಯಾದರೆ ರಾಮ ಮಂದಿರದ ವಿರುದ್ಧವಾಗಿ ನ್ಯಾಯಾಲಯದಲ್ಲಿ ದಾವೆ ಹೂಡಲು ಕಪಿಲ್ ಸಿಬಲ್‌ರನ್ನು ಕಳುಹಿಸಿದ್ದು ಯಾರು ಎಂದು ಪ್ರಶ್ನಿಸುವ ಮೂಲಕ ಬಿಜೆಪಿ ಕಾಂಗ್ರೆಸ್‌ಗೆ ತಿರುಗೇಟು ನೀಡಿದೆ.

ನಾವು ರಾಮ ಭಕ್ತರೇ, ರಾಮ ಮಂದಿರದ ಬಾಗಿಲು ತೆಗೆಸಿದ್ದೇ ನಾವು ಎಂದು ಕಾಂಗ್ರೆಸ್ ಹೇಳಿದ್ದಕ್ಕೆ ಬಿಜೆಪಿ ಈಗ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದೆ.

ಪೋಸ್ಟ್‌ನಲ್ಲಿ ಏನಿದೆ?

ಹಳ್ಳಿ ಹಳ್ಳಿಗಳಲ್ಲಿ ರಾಮ ಮಂದಿರ ನಿರ್ಮಾಣವಾಗಿದ್ದು ರಾಮ ಭಕ್ತರಿಂದ, ಆದರೆ ದೇವಾಲಯವನ್ನು ಮುಜರಾಯಿ ಇಲಾಖೆಗೆ ಸೇರಿಸಿ ಅದರಿಂದ ಬರುವ ಆದಾಯವನ್ನು ದೋಚಿದ್ದು ನೀವು!

ಮಹಾತ್ಮಾ ಗಾಂಧಿಯವರ ರಾಮರಾಜ್ಯದ ಕಲ್ಪನೆಯನ್ನು ಮೂಲೆಗೆ ಸೇರಿಸಿದ್ದು ಕಾಂಗ್ರೆಸ್, ಆದರೆ ಇಂದು ರಾಮ ಮಂದಿರ ನಿರ್ಮಿಸಿ ಅವರ ಕಲ್ಪನೆಗೆ ಜೀವ ತುಂಬಿದ್ದು ಮೋದಿ ಸರ್ಕಾರ!

ಸ್ವಾತಂತ್ರ್ಯ ದೊರಕಿದಾಗಿನಿಂದ ರಾಮ ಮಂದಿರದ ಕಲ್ಪನೆ ದೇಶದ ಜನರಲ್ಲಿತ್ತು, ಅಂದಿನಿಂದ ಇಂದಿನವರೆಗೂ ನಿರ್ಮಾಣವಾಗದ ರಾಮ ಮಂದಿರ ನಿಮ್ಮ ರಾಜೀವ್ ಗಾಂಧಿ ಕಾಲಘಟ್ಟದಲ್ಲಿ ಯಾಕೆ ಆಗಲಿಲ್ಲ? ತಡೆದವರು ಯಾರು? ರಾಮ ಮತ್ತು ರಾಮನ ಆದೇಶವನ್ನು ಪಾಲಿಸುತ್ತಾ ಬಂದಿದ್ದರೆ ಕಾಂಗ್ರೆಸ್ ಪಕ್ಷ ರಾಮನನ್ನು ಕೇವಲ ಕಾಲ್ಪನಿಕ ಎಂದು ಏಕೆ ವ್ಯಂಗ್ಯ ಮಾಡುತ್ತಿತ್ತು ?

ಕಳೆದ 70 ವರ್ಷಗಳಿಂದಲೂ ಹಿಂದುಗಳ ಆದರ್ಶ ಪುರುಷನಾದ ಶ್ರೀ ರಾಮನ ಮಂದಿರ ನಿರ್ಮಾಣ ಮಾಡಲು ಮೀನಾಮೇಷ ಎಣಿಸಿದ್ದು ಕಾಂಗ್ರೆಸ್ಸಿನಿಂದ ಜನರ ನಂಬಿಕೆಗೆ ಆದ ದುರಂತ!. ರಾಮಾಯಣ ಹೇಗೆ ಜನರ ಮನದಲ್ಲಿದೆಯೋ ಹಾಗೆಯೇ ಕಾಂಗ್ರೆಸ್ಸಿಗರ ಸುಳ್ಳಿನ ಸರಪಳಿ ದೇಶದ ಜನತೆಯ ಮನಸ್ಸಿನಲ್ಲಿ ಆಳವಾಗಿದೆ.

# ವಿಜಯಪುರ ಪಾಲಿಕೆ ಮತ್ತೆ ಕಾಂಗ್ರೆಸ್ ತೆಕ್ಕೆಗೆ

## ಚುನಾವಣೆ ಬಹಿಷ್ಕರಿಸಿದ ಯತ್ನಾಳ್, ಬಿಜೆಪಿ ಸದಸ್ಯರು



**ವಿಜಯಪುರ:** ಮಹಾನಗರ ಪಾಲಿಕೆ ಮೇಯರ್ ಹುದ್ದೆ ಮತ್ತೆ ಕಾಂಗ್ರೆಸ್ ಪಾಲಾಗಿದೆ. 21ನೇ ಅವಧಿಯ ಮೇಯರ್ ಆಗಿ ಕಾಂಗ್ರೆಸ್‌ನ ಮೆಹಜಬೀನ್ ಹೊರ್ತಿ ಆಯ್ಕೆಯಾಗಿದ್ದಾರೆ.

ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದ ಮೇಯರ್ ಸ್ಥಾನಕ್ಕೆ ಒಟ್ಟು 22 ಮತಗಳನ್ನು ಪಡೆದು ಮೇಯರ್ ಆಗಿ ಮಹೆಜಬೀನ್ ಹೊರ್ತಿ ಆಯ್ಕೆಯಾದರು.

10 ಕಾಂಗ್ರೆಸ್ ಸದಸ್ಯರು, ಐವರು ಪಕ್ಷೇತರರು ,ಇಬ್ಬರು ಎಐಎಂಐಎಂ, ಓರ್ವ ಜೆಡಿಎಸ್ ಸದಸ್ಯರ ಬೆಂಬಲ ಹಾಗೂ ಶಾಸಕರಾದ ಎಂಬಿ ಪಾಟೀಲ್, ವಿಠ್ಠಲ್ ಕಟಕದೊಂಡ, ಪರಿಷತ್ ಸದಸ್ಯರಾದ ಸುನಿಲಗೌಡ ಪಾಟೀಲ್, ಪ್ರಕಾಶ್ ರಾಠೋಡ್ ಮತಗಳ ಬೆಂಬಲದೊಂದಿಗೆ ಗೆಲವು ಸಾಧಿಸಿದ್ದಾರೆ.

ಬಿಜೆಪಿಯ 17 ಸದಸ್ಯರ ಪೈಕಿ ಓರ್ವ ಬಿಜೆಪಿ ಸದಸ್ಯ ಓರ್ವ ಸದಸ್ಯ ನಿಧನರಾಗಿದ್ದು, ಬಿಜೆಪಿ ಬಲ ಕುಸಿದಿತ್ತು. 16 ಸದಸ್ಯರ ಜೊತೆಗೆ ನಗರ ಶಾಸಕ ಯತ್ನಾಳ್ ಹಾಗೂ ಸಂಸದ ರಮೇಶ ಜಿಗಜಿಣಗಿ ಮತ ಸೇರಿ ಒಟ್ಟು 18 ಮತಗಳು ಮಾತ್ರ ಬಿಜೆಪಿ ಕೈಯ್ಯಲ್ಲಿತ್ತು. ಓರ್ವ ಸದಸ್ಯ ನಿಧನರಾದ ಹಿನ್ನೆಲೆಯಲ್ಲಿ ಚುನಾವಣೆ ನಡೆಸಬಾರದು ಎಂದು ಬಿಜೆಪಿ ಮನವಿ ಮಾಡಿತ್ತು.

ಉಪಮೇಯರ್ ಸ್ಥಾನ ಎಸ್‌ಟಿ ಸಮಾಜಕ್ಕೆ ಮೀಸಲಾಗಿದ್ದ ಕಾರಣ ಯಾರು ಪ್ರತಿಸ್ಪರ್ಧಿ ಇರಲಿಲ್ಲ. ಹೀಗಾಗಿ ಉಪ ಮೇಯರ್ ಆಗಿ ಕಾಂಗ್ರೆಸ್ಸಿನ ದಿನೇಶ್ ಹಳ್ಳಿ ಅವಿರೋಧವಾಗಿ ಆಯ್ಕೆಯಾದರು.

ಚುನಾವಣಾ ಪ್ರಕ್ರಿಯೆಯನ್ನು ಬಹಿಷ್ಕರಿಸಿ ಬಿಜೆಪಿಯ 16 ಸದಸ್ಯರು ಹಾಗೂ ನಗರ ಶಾಸಕ ಯತ್ನಾಳ್ ಹೊರ ನಡೆದ ಪ್ರಸಂಗ ನಡೆಯಿತು. ಇದು ಅಕ್ರಮದ ಚುನಾವಣೆಯಾಗಿದ್ದು ಸರ್ಕಾರದ ಅಣತಿಯಂತೆ ಚುನಾವಣಾಧಿಕಾರಿಗಳು ನಡೆದುಕೊಂಡಿದ್ದಾರೆ. ಈ ಚುನಾವಣೆಯ ಬಗ್ಗೆ ನಾವು ಕೋರ್ಟ್ ಮೊರೆ ಹೋಗುತ್ತೇವೆ ಎಂದು ಯತ್ನಾಳ್ ಕಿಡಿಕಾರಿದರು.

ಸಚಿವ ಎಂಬಿ ಪಾಟೀಲ್ ತಿರುಗೇಟು ನೀಡಿದ್ದು, ಚುನಾವಣೆಯಲ್ಲಿ ಯಾವುದೇ ಅಕ್ರಮ ನಡೆದಿಲ್ಲ. ಬಿಜೆಪಿ ಮೊದಲೇ ಸೋಲು ಒಪ್ಪಿಕೊಂಡಿತ್ತು. ಎಲ್ಲರ ಸಹಾಯದಿಂದ ಕಾಂಗ್ರೆಸ್ ಚುಕ್ಕಾಣಿ ಹಿಡದಿದೆ. ನಗರದ ಅಭಿವೃದ್ಧಿಗಾಗಿ ನಾವು ಶ್ರಮಿಸುತ್ತೇವೆ ಎಂದು ಹೇಳಿದರು. ಗೆಲವು ಸಾಧಿಸಿದ ಹಿನ್ನೆಲೆ ಕಾಂಗ್ರೆಸ್ ಕಾರ್ಯ ಕಾರ್ತರು ಪಾಲಿಕೆಯ ಆವರಣದಲ್ಲೇ ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ಕಾಂಗ್ರೆಸ್ ರಾಜಹಂಸ ಬಸ್ ಮೂಲಕ ಚುನಾವಣೆಗೆ ಆಗಮಿಸಿದ್ದು ವಿಶೇಷವಾಗಿತ್ತು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com